# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ್, ಬಿ, ಗುಡಗೇನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

VOL.04 ISSUE. 304 ₹4, WEDNESDAY, 31 JANUARY 2024 NEWSBELAGAVI@GMAIL.COM 9900332089 RNI. KARKAN/2020/79084 REG.NO G-2/PMG/KA/NK/BM/139/2024-26


## 3 ಕೋಟಿ ಮೌಲ್ಯದ ನಿಷೇಧಿತ ಇ-ಸಿಗರೇಟ್ ಪತ್ತೆ; ಆರೋಪಿ ಬಂಧನ



ಬೆಂಗಳೂರು: ಕೇಂದ್ರ ಸರ್ಕಾರ ನಿಷೇಧಿಸಿರುವ , ಸುಮಾರು ಮೂರು ಕೋಟಿ ರೂಪಾಯಿ ಮೌಲ್ಯದ ಇ-ಸಿಗರೇಟ್ ಅನ್ನು ಸಿಸಿಬಿ ನಾರ್ಕೋಟಿಕ್ಸ್ ವಿಭಾಗದ ಅಧಿಕಾರಿಗಳು ವಶಪಡಿಸಿಕೊಂಡಿದ್ದು, ಆರೋಪಿಯನ್ನು ಬಂಧಿಸಿದ್ದಾರೆ.

ಇ-ಸಿಗರೇಟ್ಗಳನ್ನು ದುಬೈಯಿಂದ ಬೆಂಗಳೂರಿಗೆ ತರಿಸಲಾಗಿತ್ತು ಎಂಬುದು ತಿಳಿದು ಬಂದಿದೆ. ಒಂದು ಸಿಗರೇಟ್ಗೆ ಐದರಿಂದ ಆರು ಸಾವಿರ ರೂಪಾಯಿಗೆ ಮಾರಾಟ ಮಾಡಲಾಗುತ್ತಿತ್ತು.

ಇ-ಸಿಗರೇಟ್ ಅನ್ನು ಬ್ಲೂ ಡಾರ್ಟ್ ಕೊರಿಯರ್ ಮೂಲಕ ದುಬೈಯಿಂದ ದೆಹಲಿಗೆ ತರಿಸಿ ಅಲ್ಲಿಂದ ಬೆಂಗಳೂರಿಗೆ ತರಿಸಲಾಗಿತ್ತು. ಬೆಂಗಳೂರಿನ ಸುದ್ದಗುಂಟೆ ಪಾಳ್ಯ ಪೊಲೀಸ್ ಠಾಣೆ ವ್ಯಾಪ್ತಿಯ ಮನೆಯೊಂದರಲ್ಲಿ ಇರಿಸಲಾಗಿತ್ತು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಬಂಧಿತ ಆರೋಪಿಯನ್ನು ಕೇರಳ ಮೂಲದ ಶೋಹೇಬ್ ಎಂದು ಗುರುತಿಸಲಾಗಿದೆ. ಈತ ಬೆಂಗಳೂರಿನ ಹಲವಾರು ಸ್ಮೋಕಿ ಜೋಜ್ ಹಾಗೂ ರೀಟೆಲ್ ಮಾರಾಟ ಮಾಡುವವರಿಗೆ ಇ-ಸಿಗರೇಟ್ ಅನ್ನು ನೀಡುತ್ತಿದ್ದ. ಅನ್ಲೈನ್ ಮೂಲಕ ಆರ್ಡರ್ ಮಾಡಿಸಿಕೊಂಡು ಪೋರ್ಟರ್ ಮತ್ತು ಡ್ನಜೋ ಮೂಲಕ ಪೂರೈಕೆ ಮಾಡುತ್ತಿದ್ದ ಎಂದು ಅವರು ಮಾಹಿತಿ ನೀಡಿದ್ದಾರೆ.

# 2024-25 ನೇ ಸಾಲಿನ ಬಜೆಟ್ ಗಾತ್ರ 3.80 ಲಕ್ಷ ಕೋಟಿ: ಸಿಎಂ ಸಿದ್ದರಾಮಯ್ಯ

ತುಮಕೂರು: 2024-25ನೇ ಸಾಲಿನಲ್ಲಿ 3.80 ಲಕ್ಷ ಕೋಟಿ ರೂ. ಬಜೆಟ್ ಮಂಡಿಸಲು ಯೋಜನೆ ರೂಪಿಸಲಾಗುತ್ತಿದೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.

ತುಮಕೂರಿನಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ಮಾತನಾಡಿದ ಅವರು, ರಾಜ್ಯ ಸರ್ಕಾರವು ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆಗಳು ಯಾವುದೇ ಕಾರಣಕ್ಕೂ ನಿಲ್ಲಿಸುವುದಿಲ್ಲ. ಈ ಯೋಜನೆಗಳ ಜಾರಿಯಿಂದ ಸರ್ಕಾರ ಆರ್ಥಿಕವಾಗಿ ದಿವಾಳಿ ಆಗಿಲ್ಲ. ಈ ಬಾರಿ 3.80 ಲಕ್ಷ ಕೋಟಿ ರೂ. ಬಜೆಟ್ ಮಂಡಿಸುತ್ತೇನೆ ಎಂದರು.

ಗ್ಯಾರಂಟಿ ಯೋಜನೆಗಳು ಜಾರಿಯಾಗಲ್ಲ, ಸರ್ಕಾರದಲ್ಲಿ ಹಣ ಇಲ್ಲ ಎಂದು ಸುಳ್ಳೋತ್ಪಾದಿಕರಿಗೆ ಈ ಕಾರ್ಯಕ್ರಮವೇ ಒಂದು ಉತ್ತರ. ಐದಕ್ಕೆ ಐದೂ ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿದ್ದೇವೆ. ಈ ಯೋಜನೆಗಳ ಫಲಾನುಭವಿಗಳು ಸುಳ್ಳೋತ್ಪಾದಕರ ಮುಖಕ್ಕೆ ಸರಿಯಾಗಿ ಉತ್ತರ ನೀಡಬೇಕು ಎಂದರು.

ರಾಜ್ಯದಲ್ಲಿ ಭೀಕರ ಬರಗಾಲ ಬಂದಿದ್ದರೂ ಕೇಂದ್ರ ಸರ್ಕಾರ ಇದುವರೆಗೂ ರಾಜ್ಯದ ಪಾಲಿನ ಒಂದೇ ಒಂದು ರೂಪಾಯಿ ಬರ ಪರಿಹಾರವನ್ನೂ ನೀಡಿಲ್ಲ.



ಆದರೆ ರಾಜ್ಯ ಸರ್ಕಾರ 29,28,910 ರೈತರ ಖಾತೆಗೆ ಬರ ಪರಿಹಾರದ ಮೊದಲ ಕಂತನ್ನು ಜಮೆ ಮಾಡಿದೆ ಎಂದು ತಿಳಿಸಿದ್ದಾರೆ.

ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಕ್ರಮಗಳು ನಿಂತಿಲ್ಲ. ಹೊಸ ಅಭಿವೃದ್ಧಿ ಕಾರ್ಯಗಳನ್ನೂ ಕೈಗೆತ್ತಿಕೊಂಡಿದ್ದೇವೆ. ಗ್ಯಾರಂಟಿ ಯೋಜನೆಗಳಿಂದ ನಾಡಿನ ಜನರ ಕೊಳ್ಳುವ ಶಕ್ತಿ ಹೆಚ್ಚಾಗಿರುವುದರಿಂದ ಕೇಂದ್ರದ ಬೆಲೆ ಏರಿಕೆಯಿಂದಾಗಿ ಸೃಷ್ಟಿಯಾಗಿದ್ದ ಸಂಕಷ್ಟವನ್ನು ನಾವು ಕಡಿಮೆ ಮಾಡಿದ್ದೇವೆ. ಆದರೂ ಬಿಜೆಪಿ ಪರಿವಾರದವರು ಸುಳ್ಳಿನ ಉತ್ಪಾದನೆಯಲ್ಲಿ ತೊಡಗಿದ್ದಾರೆ ಎಂದು ಹೇಳಿದ್ದಾರೆ.

2013-18ರ ವರೆಗೆ ನಾವು ಕೊಟ್ಟ ಎಲ್ಲಾ ಭರವಸೆಗಳನ್ನೂ ಈಡೇರಿಸಿದ್ದೇವೆ. ಈ ಬಾರಿ ಚುನಾವಣೆ ವೇಳೆಯಲ್ಲಿ ಕೊಟ್ಟಿದ್ದ ಐದು ಗ್ಯಾರಂಟಿಗಳನ್ನು 8 ತಿಂಗಳ ಒಳಗೆ ಜಾರಿಗೆ ಮಾಡಿದ್ದೇವೆ. ಉಳಿದ ಭರವಸೆಗಳನ್ನೂ ಈಡೇರಿಸುತ್ತಲೇ ಇದ್ದೇವೆ. ನಮ್ಮ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳಲ್ಲಿ ಬಿಜೆಪಿಯವರೂ ಇದ್ದಾರೆ. ಆದರೂ ಬಿಜೆಪಿಯವರು ಅಭಿವೃದ್ಧಿಗೆ ಹಣ ಇಲ್ಲ ಎಂದು ಸುಳ್ಳುಗಳ ಉತ್ಪಾದನೆಯಲ್ಲಿ ತೊಡಗಿದ್ದಾರೆ ಎಂದು ವಾಗ್ದಾಳಿ ನಡೆಸಿದ್ದಾರೆ.

142 ಕೋಟಿ ಮಹಿಳೆಯರು ಉಚಿತವಾಗಿ ಬಸ್ಗಳಲ್ಲಿ ಪ್ರಯಾಣಿಸಿದ್ದಾರೆ. ಒಂದು ಕೋಟಿ 50 ಲಕ್ಷ ಮಹಿಳೆಯರಿಗೆ ಅನ್ನಭಾಗ್ಯ, ಗೃಹಲಕ್ಷ್ಮಿ ಯೋಜನೆಯ ಅನುಕೂಲಗಳು ತಲುಪುತ್ತಿವೆ. ಒಂದು ಕೋಟಿ 18 ಲಕ್ಷ ಮಂದಿಗೆ ಗೃಹಜ್ಯೋತಿಯ ಅನುಕೂಲಗಳು ಸಿಕ್ಕುತ್ತಿವೆ. ಯುವನಿಧಿಗಾಗಿ ಲಕ್ಷಾಂತರ ಯುವಕ ಯುವತಿಯರು ನೋಂದಣಿ ಮಾಡಿಸಿಕೊಳ್ಳುತ್ತಿದ್ದಾರೆ ಎಂದು ಹೇಳಿದ್ದಾರೆ.

## 33 ಡಿವೈಎಸ್ ಪಿಗಳ ವರ್ಗಾವಣೆ



ಬೆಂಗಳೂರು: ಪೊಲೀಸ್ ಇಲಾಖೆಯಲ್ಲಿ ಮೇಜರ್ ಸರ್ಜರಿ ನಡೆದಿದ್ದು, 33 ಡಿವೈಎಸ್ಪಿಗಳು, 132 ಇನ್ಸ್ಪೆಕ್ಟರ್ಗಳ ವರ್ಗಾವಣೆ ಮಾಡಿದ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ಯು.ಡಿ.ಕೃಷ್ಣಕುಮಾರ್-ಡಿವೈಎಸ್ಪಿ, ಬಿಡಿಎ, ಬೆಂಗಳೂರು. ಟಿ.ಎಂ.ಶಿವಕುಮಾರ್ -ಎಸಿಪಿ, ಮಡಿವಾಳ ಉಪವಿಭಾಗ. ಹೆಚ್.ಬಿ.ರಮೇಶ್ ಕುಮಾರ್-ACP, ವಿವಿ ಪುರಂ ಉಪವಿಭಾಗ. ಎಂ.ಎನ್.ನಾಗರಾಜ್-ಎಸಿಪಿ, ಸಿಸಿಬಿ ಬೆಂಗಳೂರು. ಅನುಷಾರಾಣಿ-ACP, ಡಿಸಿಆರ್ಇ, ಮೈಸೂರು ಸೇರಿದಂತೆ ಒಟ್ಟು 33 DySP ಗಳನ್ನು ವರ್ಗಾವಣೆ ಮಾಡಲು ಸರ್ಕಾರ ಆದೇಶ ಹೊರಡಿಸಿದೆ.

ಸಂಪಂಗಿರಾಮನಗರ ಪೊಲೀಸ್ ಠಾಣೆ ಇನ್ಸ್ಪೆಕ್ಟರ್ ರವಿಕಿರಣ್, ರಾಮನಗರ ಕುಂಬಳಗೋಡು ಠಾಣೆ ಇನ್ಸ್ಪೆಕ್ಟರ್ ಮಂಜುನಾಥ್ ಜಿ ಹೂಗಾರ್. ಕಾಟನ್ಪೇಟೆ ಪೊಲೀಸ್ ಠಾಣೆ ಇನ್ಸ್ಪೆಕ್ಟರ್ ನರೇಂದ್ರ ಬಾಬು, ಸಿಸಿಬಿ ಬೆಂಗಳೂರು ಇನ್ಸ್ಪೆಕ್ಟರ್ ಕೆ.ಲಕ್ಷ್ಮೀ ನಾರಾಯಣ್, ಹಲಸೂರು ಪೊಲೀಸ್ ಠಾಣೆ ಇನ್ಸ್ಪೆಕ್ಟರ್ ಸಂತೋಷ್ ಕೆ, ಜಯನಗರ ಪೊಲೀಸ್ ಠಾಣೆ ಇನ್ಸ್ಪೆಕ್ಟರ್ ದೀಪಕ್ ಆರ್ ಸೇರಿ ಒಟ್ಟು 132 ಇನ್ಸ್ಪೆಕ್ಟರ್ಗಳ ವರ್ಗಾವಣೆಗೆ ಸರ್ಕಾರ ಆದೇಶ ಮಾಡಿದೆ.

## ಬೆಳಗಾವಿ: 89 ಲಕ್ಷ 60 ಸಾವಿರ ಮೌಲ್ಯದ ಮದ್ಯ ನಾಶ

ಬೆಳಗಾವಿ: ಅಕ್ರಮ ಮದ್ಯ ಮಾರಾಟ ಹಾಗೂ ಗೋವಾ ಮದ್ಯ ವಶಕ್ಕೆ ಪಡೆದ ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಳಗಾವಿ ಜಿಲ್ಲಾ ಅಬಕಾರಿ ಪೊಲೀಸರು 89 ಲಕ್ಷದ 60 ಸಾವಿರ ರೂಪಾಯಿ ಮೌಲ್ಯದ ಮದ್ಯ ನಾಶ ಮಾಡಿದ್ದಾರೆ.

ಬೆಳಗಾವಿಯ ರಾಮತೀರ್ಥ ನಗರದ ಹೊರವಲಯದಲ್ಲಿ ರಾಶಿ ರಶಾ ಮದ್ಯ ಬಾಟಲ್ಗಳನ್ನು ಇಟ್ಟು ಅವುಗಳ ಮೇಲೆ ಜೆಸಿಬಿಯನ್ನು ಹತ್ತಿಸಿ ಅಬಕಾರಿ ಇಲಾಖೆ ಅಧಿಕಾರಿಗಳು ಮದ್ಯ ನಾಶಪಡಿಸಿದ್ದಾರೆ.

ಅಕ್ರಮ ಮದ್ಯ ಮಾರಾಟ, ಗೋವಾ ಮದ್ಯ ವಶ, ನಕಲಿ ಮದ್ಯ ಪ್ರಕರಣ ಸೇರಿದಂತೆ 101 ಪ್ರಕರಣಗಳಲ್ಲಿ ಜಪ್ತಿ ಮಾಡಿದ್ದ ಎಲ್ಲಾ ಮದ್ಯಗಳನ್ನು ನಾಶ ಪಡಿಸಲಾಗಿದೆ ಎಂದು ತಿಳಿದುಬಂದಿದೆ.

## ಮೈತ್ರಿಗೆ ಮಂಡ್ಯ ಆತಂಕ

### ಕಾಂಗ್ರೆಸ್ ನನಗೆ ಹೊಸದಲ್ಲ: ಸುಮಲತಾ



ಬೆಂಗಳೂರು: ಬಿಜೆಪಿ-ಜೆಡಿಎಸ್ ಮೈತ್ರಿಗೆ ಮಂಡ್ಯ ಲೋಕಸಭಾ ಕ್ಷೇತ್ರ ಅಡ್ಡಿಯಾಗಲಿಯದೆಯೇ? ಅಂತಹುದೊಂದು ಆತಂಕ ಈಗ ಉಂಟಾಗಿದೆ.

ಮಂಡ್ಯದ ಹಾಲಿ ಸಂಸದೆ ಸುಮಲತಾ ಅಂಬೀರೀಶ್ ಅವರು ಈಗಾಗಲೆ ಬಿಜೆಪಿಗೆ ಹತ್ತಿರವಾಗಿದ್ದಾರೆ. ಮಂಡ್ಯ ಕ್ಷೇತ್ರ ಸಿಕೊಳ್ಳಲು ಶತಾಯ ಗತಾಯ ಪರಯತ್ನ ನಡೆಸಿದ್ದಾರೆ. ಮಂಡ್ಯ ಬಿಟ್ಟು ರಾಜಕಾರಣವಿಲ್ಲ ಎಂದೂ ಹೇಳಿದ್ದಾರೆ.

ಆದರೆ ಇನ್ನೊಂದೆಡೆ, ಮಂಡ್ಯ ಕ್ಷೇತ್ರವನ್ನು ಬಿಟ್ಟುಕೊಡುವಂತೆ ಜೆಡಿಎಸ್ ಪಟ್ಟು ಹಿಡಿದಿದೆ. ಇದು ಈಗ ದೊಡ್ಡ ಆತಂಕ ತಂದಿಟ್ಟಿದೆ. ಈ ಕುರಿತು ಖಾಸಗಿ ಟಿವಿಗೆ ಸಂದರ್ಶನ ನೀಡಿರುವ ಸುಮಲತಾ, ಮಂಡ್ಯ ಕ್ಷೇತ್ರವನ್ನು ಬಿಜೆಪಿ ಉಳಿಸಿಕೊಳ್ಳಬೇಕು ಎಂದು ಆಗ್ರಹಿಸಿದ್ದಾರೆ. ಮಂಡ್ಯ ಬಿಟ್ಟು ಬೇರೆ ಕಡೆ ಸ್ಪರ್ಧಿಸಲು ಸಾಧ್ಯವೇ ಇಲ್ಲ ಎಂದೂ ಹೇಳಿದ್ದಾರೆ.

ಮಂಡ್ಯವನ್ನು ಜೆಡಿಎಸ್ಗೆ ಬಿಟ್ಟುಕೊಟ್ಟಲ್ಲಿ ನಿಮ್ಮ ನಿಲುವೇನು ಎನ್ನುವ ಪ್ರಶ್ನೆಗೆ ಸ್ಪಷ್ಟವಾಗಿ ಉತ್ತರ ನೀಡದಿದ್ದರೂ, ಕಾಂಗ್ರೆಸ್ ನನಗೇನೂ ಹೊಸದಲ್ಲ. ಅಂಬರೀಶ್ ಕಾಗ್ರೆಸ್ ನಲ್ಲೇ ಇದ್ದರಲ್ವಾ ಎಂದು ಪ್ರಶ್ನಿಸಿದ್ದಾರೆ.

ವಿಧಾನಸಭೆ ಚುನಾವಣೆಯ ಲೆಕ್ಕಾಚಾರ, ಮತಗಳಿಕೆಯೇ ಬೇರೆ, ಲೋಕಸಭೆಯ ಮತ ಲೆಕ್ಕಾಚಾರವೇ ಬೇರೆ. 2018ರ ವಿಧಾನಸಭೆ ಚುನಾವಣೆ ಮತ್ತು 2019ರ ಲೋಕಸಭಾ ಚುನಾವಣೆಯ ಮತಗಳನ್ನು ಪರಿಶೀಲಿಸಬಹುದು ಎಂದೂ ಸುಮಲತಾ ಹೇಳಿದ್ದಾರೆ. ಜೆಡಿಎಸ್, ಕಾಂಗ್ರೆಸ್ ನಾಯಕರು ಯಾರೇ ಮನೆಗೆ ಬಂದರೂ ಸ್ವಾಗತಿಸುತ್ತೇನೆ. ಆದರೆ ನನ್ನ ನಿಲುವಿನಲ್ಲಿ ಬದಲಾವಣೆ ಸಾಧ್ಯವಿಲ್ಲ ಎನ್ನುವುದನ್ನು ಸೂಕ್ಷ್ಮವಾಗಿ ಅವರು ತಿಳಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಮಂಡ್ಯ ಲೋಕಸಭಾ ಕ್ಷೇತ್ರದ ವಿಷಯ ಬಿಜೆಪಿ -ಜೆಡಿಎಸ್ ಮೈತ್ರಿಗೆ ಆತಂಕವಾಗಿದೆ.

## 'SIMI' ಸಂಘಟನೆಗೆ ಕೇಂದ್ರದಿಂದ ಮತ್ತೆ 5 ವರ್ಷ 'ನಿಷೇಧ' ವಿಸ್ತರಣೆ

ನವದೆಹಲಿ: ಸ್ಟೂಡೆಂಟ್ಸ್ ಇಸ್ಲಾಮಿಕ್ ಮೂವ್ಮೆಂಟ್ ಆಫ್ ಇಂಡಿಯಾ ಸಂಘಟನೆಯನ್ನ ಯುಎಪಿಎ ಅಡಿಯಲ್ಲಿ ಐದು ವರ್ಷಗಳ ಕಾಲ 'ಕಾನೂನುಬಾಹಿರ ಸಂಘಟನೆ' ಎಂದು ನರೇಂದ್ರ ಮೋದಿ ಸರ್ಕಾರ ಸೋಮವಾರ ಘೋಷಿಸಿದೆ.




ಗೃಹ ಸಚಿವಾಲಯದ ಕಚೇರಿ ಸಾಮಾಜಿಕ ವೇದಿಕೆ ಎಕ್ಸ್ನಲ್ಲಿ, "ಭಯೋತ್ಪಾದನೆಯ ವಿರುದ್ಧ ಶೂನ್ಯ ಸಹಿಷ್ಣುತೆಯ ಪ್ರಧಾನಿ ನರೇಂದ್ರ ಮೋದಿಜಿ ಅವರ ದೃಷ್ಟಿಕೋನವನ್ನು ಬಲಪಡಿಸಲು 'ಸ್ಟೂಡೆಂಟ್ಸ್ ಇಸ್ಲಾಮಿಕ್ ಮೂವ್ಮೆಂಟ್ ಆಫ್ ಇಂಡಿಯಾ ನ್ನ ಯುಎಪಿಎ ಅಡಿಯಲ್ಲಿ ಇನ್ನೂ ಐದು ವರ್ಷಗಳ ಅವಧಿಗೆ 'ಕಾನೂನುಬಾಹಿರ ಸಂಘಟನೆ' ಎಂದು ಘೋಷಿಸಲಾಗಿದೆ.

ಭಾರತದ ಸಾರ್ವಭೌಮತ್ವ, ಭದ್ರತೆ ಮತ್ತು ಸಮಗ್ರತೆಗೆ ಬೆದರಿಕೆಯೊಡ್ಡಲು ಭಯೋತ್ಪಾದನೆಯನ್ನು ಪ್ರಚೋದಿಸುವಲ್ಲಿ, ಶಾಂತಿ ಮತ್ತು ಕೋಮು ಸೌಹಾರ್ದತೆಯನ್ನು ಭಂಗಗೊಳಿಸುವಲ್ಲಿ ಸಿಮಿ ಭಾಗಿಯಾಗಿರುವುದು ಕಂಡುಬಂದಿದೆ" ಎಂದು ಪೋಸ್ಟ್ ಮಾಡಿದೆ.

## ಅಂಬೇಡ್ಕರ್ ನಾಮಫಲಕ ವಿಚಾರ ಎರಡು ಗುಂಪುಗಳ ನಡುವೆ ಕಲ್ಲು ತೂರಾಟ



ಮೈಸೂರು: ಅಂಬೇಡ್ಕರ್ ನಾಮಫಲಕ ವಿಚಾರದಲ್ಲಿ ಎರಡು ಗುಂಪುಗಳ ನಡುವೆ ಘರ್ಷಣೆ ನಡೆದಿದ್ದು, ಮನೆಗಳಿಗೆ ಕಲ್ಲು ತೂರಾಟ ನಡೆಸಿ ಹಾನಿಗೊಳಿಸಿದ ಘಟನೆ ಮೈಸೂರು ಜಿಲ್ಲೆಯ ನಂಜನಗೂಡು ತಾಲೂಕಿನ ಹಲ್ಲರೆ ಗ್ರಾಮದಲ್ಲಿ ನಡೆದಿದೆ.

ನಾಮಫಲಕ ವಿಚಾರವಾಗಿ ಕೆಲ ಕಿಡಿಗೇಡಿಗಳಿಂದ ಹಲ್ಲರೆ ಗ್ರಾಮದಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣವಾಗಿದೆ.

ಘರ್ಷಣೆಯ ಪರಿಣಾಮ ಎರಡೂ ಸಮುದಾಯದ ಬೀದಿಯಲ್ಲೂ ಕಲ್ಲು ತೂರಾಟ ನಡೆಸಿದ್ದಾರೆ. ಅಲ್ಲದೇ ಮನೆ ಮುಂದೆ ನಿಲ್ಲಿಸಿದ್ದ ವಾಹನಗಳು ಜಖಂಗೊಂಡಿವೆ.

ಇನ್ನು ಕಲ್ಲು ತೂರಾಟದಲ್ಲಿ ಪೊಲೀಸರಿಗೂ ಗಾಯಗಳಾಗಿವೆ. ಘಟನಾ ಸ್ಥಳಕ್ಕೆ ನಂಜನಗೂಡು ಗ್ರಾಮಾಂತರ ಪೊಲೀಸರು ದೌಡಾಯಿಸಿದ್ದಾರೆ.

## ನಿಗಮ ಮಂಡಳಿಗಳಿಗೆ 34 ಕೈ ಕಾರ್ಯಕರ್ತರ ಹೆಸರು ಅಂತಿಮ: ಪಟ್ಟಿ ಸೋರಿಕೆ

ಬೆಂಗಳೂರು: ಕಳೆದ ಕೆಲವು ದಿನಗಳಿಂದ ಕಾಂಗ್ರೆಸ್ ನಿಗಮ ಮಂಡಳಿಗಳ ನೇಮಕಕ್ಕೆ ಸಂಬಂಧಿಸಿದಂತೆ ಹಲವಾರು ಗೊಂದಲಗಳಿದ್ದವು.

ಆದರೆ ಇ ಗೊಂದಲಗಳಿಗೆ ಸಿಎಂ ಸಿದ್ದರಾಮಯ್ಯ ತೆರೆ ಎಳೆದಿದ್ದು, ಕಳೆದ ಕೆಲವು ದಿನಗಳ ಹಿಂದೆ ರಾಜ್ಯ ಸರಕಾರ 36 ಶಾಸಕರನ್ನು ಮೊದಲ ಪಟ್ಟಿಯಲ್ಲಿ ನಿಗಮ- ಮಂಡಳಿಗಳ ಅಧ್ಯಕ್ಷರುಗಳಾಗಿ ನೇಮಿಸಿತ್ತು.

ಇದರ ಬೆನ್ನಲ್ಲೇ 34 ಕಾರ್ಯಕರ್ತರನ್ನು ಒಳಗೊಂಡ 2ನೇ ಪಟ್ಟಿಯೂ ಸಿದ್ಧವಾಗಿ ಒಂದೆರಡು ದಿನಗಳಲ್ಲಿ ಈ ಕಾರ್ಯಕರ್ತರಿಗೆ ನಿಗಮ-ಮಂಡಳಿ ಅಧ್ಯಕ್ಷ ಹುದ್ದೆ ನೀಡುವ ಕುರಿತ ಅಧಿಸೂಚನೆ ಹೊರಬೀಳುವ ಸಾಧ್ಯತೆಯಿದೆ ಎಂದು ಹೇಳಲಾಗುತ್ತಿದೆ.

ಕಾಂಗ್ರೆಸ್ ಹೈಕಮಾಂಡ್ ಒಪ್ಪಿಗೆ ನೀಡಿರುವ 34 ಕಾರ್ಯಕರ್ತರಲ್ಲಿ ಯಾರಿಗೆ ಯಾವ ನಿಗಮ-ಮಂಡಳಿ ಅಧ್ಯಕ್ಷ ಸ್ಥಾನ ನೀಡಬೇಕು ಎಂಬ ಬಗ್ಗೆ ಸೋಮವಾರ ರಾತ್ರಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಸಭೆ ನಡೆಸಿ ಚರ್ಚಿಸಿದ್ದಾರೆ ಎಂದು ತಿಳಿದುಬಂದಿದೆ.

ನಿಗಮ ಮಂಡಳಿಗಳ ಸ್ಥಾನಕ್ಕೆ ಇದೀಗ ಆ ಸ್ಥಾನ ಪಡೆದವರ ಕಾರ್ಯಕರ್ತರ ಪಟ್ಟಿ ಸೋರಿಕೆಯಾಗಿದೆ ಎಂದು ಹೇಳಲಾಗುತ್ತಿದ್ದು, ಈ ಪಟ್ಟಿ ಪ್ರಕಾರ ಕಾಂತಾ ನಾಯಕ್, ಮುಂಡರಗಿ ನಾಗರಾಜ್, ವಿನೋದ್ ಎಸ್. ಅಸೂಟಿ, ಬಿ.ಎಚ್. ಹರೀಶ್, ಡಾ.ಅಂಶುಮಂಥ್, ಜೆ.ಎಸ್.ಆಂಜನೇಯುಲು, ಡಾ.ಬಿ.ಯೋಗೇಶ್ ಬಾಬು, ಡಾ.ಎಚ್.ಕೃಷ್ಣ, ಮರಿಗೌಡ, ದೇವಿಂದ್ರಪ್ಪ ಮರ್ತೂರು, ರಾಜಶೇಖರ್ ರಾಮಸ್ವಾಮಿ, ಕೆ.ಮರಿಗೌಡ, ಜಯಣ್ಣ, ಎಸ್.ಮನೋಹರ್, ಅಯ್ಯೂಬ್ ಖಾನ್, ಮಮತಾ ಗುಟ್ಟಿ. ಜಿ.ಪಲ್ಲವಿ, ಎಸ್.ಇ.ಸುಧೀಂದ್ರ, ಡಾ.ನಾಗಲಕ್ಷ್ಮೀ ಚೌಧರಿ, ಎಚ್. ಎಸ್. ಸುಂದರೇಶ್, ಆರ್.ಎಂ.ಮಂಜುನಾಥ್ ಗೌಡ, ಜಯಣ್ಣ, ಸಂಪತ್ ರಾಜ್, ಸವಿತಾ ರಘು, ಪದ್ಮಾವತಿ , ಶಾಕಿರ್ ಸನದಿ, ಸರೋವರ ಶ್ರೀನಿವಾಸ್, ಸೋಮಣ್ಣ ಬೇವಿನಮರದ್, ಬಿ.ಪುಷ್ಪಾ ಅಮರನಾಥ್, ಮಹಬೂಬ್ ಪಾಷ, ಕೀರ್ತಿ ಗಣೇಶ್, ಮಝರ್ ಖಾನ್, ಲಲಿತ್ ರಾಘವ್ ಮತ್ತು ಜಿ.ಎಸ್.ಮಂಜುನಾಥ್ ಅವರಿಗೆ ನಿಗಮ ಮಂಡಳಿಯ ಅಧ್ಯಕ್ಷ ಸ್ಥಾನ ಸಿಗುವುದು ಖಚಿತ ಎಂದು ಹೇಳಲಾಗುತ್ತಿದೆ.

## ಬಿಜೆಪಿ ನಾಯಕರ ಜೊತೆ ಕಾಂಗ್ರೆಸ್ ಶಾಸಕ ಸವದಿ ಸುತ್ತಾಟ

ಬೆಳಗಾವಿ: ಜಗದೀಶ್ ಶೆಟ್ಟರ್ ಬಿಜೆಪಿ ಸೇರ್ಪಡೆ ನಂತರ ಮಾಜಿ ಡಿಸಿಎಂ ಹಾಗೂ ಅಥಣಿ ಕಾಂಗ್ರೆಸ್ ಶಾಸಕ ಲಕ್ಷ್ಮಣ ಸವದಿ ಪಕ್ಷ ತೊರೆಯುತ್ತಾರೆ ಎಂಬ ಊಹಾಪೋಹ ಬೆನ್ನಲ್ಲೇ, ಸ್ಥಳೀಯ ಬಿಜೆಪಿ ಮುಖಂಡರ ಜೊತೆ ಓಡಾಟ ನಡೆಸಿದ್ದು ರಾಜಕೀಯ ವಲಯದಲ್ಲಿ ತೀವ್ರ ಚರ್ಚೆ ಮೂಡಿಸಿದೆ.

ಕಳೆದ ವಿಧಾನಸಭಾ ಚುನಾವಣೆ ಸಂದರ್ಭದಲ್ಲಿ ಅಥಣಿ ಕ್ಷೇತ್ರದ ಬಿಜೆಪಿ ಟಿಕೆಟ್ ನಿರಾಕರಿಸಿದ ಹಿನ್ನಲೆಯಲ್ಲಿ ಕಾಂಗ್ರೆಸ್ ಸೇರಿ ಶಾಸಕರಾಗಿದ್ದರು. ಆದರೆ ಕೆಲ ದಿನಗಳಿಂದ ಲಕ್ಷ್ಮಣ ಸವದಿ ಕಾಂಗ್ರೆಸ್ ತೊರೆದು ಬಿಜೆಪಿ ಸೇರ್ಪಡೆಯಾಗುತ್ತಾರೆ ಎಂಬ ಊಹಾಪೋಹಗಳು ಜೋರಾಗಿವೆ. ಈ ಮಧ್ಯೆ ಬೆಳಗಾವಿ ಡಿಸಿಸಿ ಬ್ಯಾಂಕ್ ಸಾಮಾನ್ಯ ಸಭೆ ಹಿನ್ನಲೆಯಲ್ಲಿ ಸವದಿ ಬಿಜೆಪಿ ಮುಖಂಡರ ಜೊತೆ ಓಡಾಟ ನಡೆಸಿ ಒಟ್ಟಿಗೆ ಊಟ ಮಾಡಿದ್ದು ಕುತೂಹಲ ಮೂಡಿಸಿದೆ.

ಈ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿದ ಸವದಿ. ಅವಿಶ್ವಾಸ ನಿರ್ಣಯ ಗೊತ್ತುವಳಿ ಮಂಡಿಸುವ ವಿಚಾರಕ್ಕೆ ಪ್ರತಿಕ್ರಯಿಸಿದ ಅವರು, ಅಂತಹ ಯಾವುದೇ ಬೆಳಗವಣಿಗೆ ಪ್ರಸ್ತಾವಣೆ ನನ್ನ ಮುಂದೆ ಈವರೆಗೂ ಬಂದಿಲ್ಲ. ನನ್ನ ಮುಂದೆ ಅಂತಹ ಪ್ರಶ್ನೆಯೇ ಬಂದಿಲ್ಲ ಎಂದರು.



ಸವದಿಯವರನ್ನು ಬಿಜೆಪಿಗೆ ಕರೆತರಲು ಒಂದು ಟೀಂ ರೆಡಿಯಾಗಿದೆಯಾ ಎಂದು ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿ, ಎಲ್ಲ ಸಹಜವಾಗಿ ನಡೆಯುವಂತದ್ದು ಅವರು ಟೀಂ ಮಾಡಿದ್ದಾರೋ ಇಲ್ಲವೋ ನನಗೆ ಗೊತ್ತಿಲ್ಲ. ನಾನು ಕಾಂಗ್ರೆಸ್ ಪಕ್ಷದ ಚಿನ್ಹೆಯ ಮೇಲೆ ಆಯ್ಕೆಯಾಗಿದ್ದೆನೆ. ಕಾಂಗ್ರೆಸ್ ಪಕ್ಷದ ಶಾಸಕನಾಗಿ ಕೆಲಸ ಮಾಡ್ತಿದ್ದಿನಿ. ಅಂತಹ ಪ್ರಶ್ನೆ ನನ್ನ ಮುಂದೆ ಇಲ್ಲ. ಇನ್ನು ನಾನಾಗಲಿ ನನ್ನ ಮಗನಾಗಲಿ ಲೋಕಸಭೆಗೆ ಸ್ಪರ್ಧೆ ಮಾಡಲ್ಲ. ಅದಕ್ಕಾಗಿ ನಾನಾಗಲಿ ನನ್ನ ಮಗನಾಗಲಿ ಅರ್ಜಿಯನ್ನೂ ಸಹ ಹಾಕಿಲ್ಲ ಎಂದರು.

### ಬಿಜೆಪಿ ಸೇರ್ಪಡೆ ಆಗುವಂತೆ ಸವದಿಗೆ ಆಹ್ವಾನ ಕೊಟ್ಟಿದ್ದೇವೆ: ಅಣ್ಣಾಸಾಹೇಬ ಜೊಲ್ಲೆ



ಬೆಳಗಾವಿ: ಲಕ್ಷ್ಮಣ ಸವದಿಯವರನ್ನು ಕರೆದುಕೊಂಡು ಬರುವ ಜವಾಬ್ದಾರಿ ಎಲ್ಲರ ಹೆಗಲಿಗಿದೆ. ನಾನಿರಬಹುದು, ಈರಣ್ಣಾ ಕಡಾಡಿ, ಮಹಾಂತೇಶ್ ದೊಡ್ಡಗೌಡರ, ರಮೇಶ್ ಕತ್ತಿ ಸೇರಿ ಜಿಲ್ಲೆಯ ಎಲ್ಲ ನಾಯಕರ ಮೇಲಿದ್ದು ಸವದಿ ಬಿಜೆಪಿ ಬಂದರೆ ಅನುಕೂಲ ಆಗುತ್ತದೆ ಎಂದ ಸಂಸದ ಅಣ್ಣಾಸಾಹೇಬ ಹೇಳಿದರು. ಅವರು ಬರುವವರೆಗೂ ಪಾಸಿಟಿವ್ ಇದ್ದಾರೆ ಅಂತಾನೇ ಹೇಳ್ತಾ ಹೋಗೊದು ಎಂದರು.

### ಸವದಿ ಬಿಜೆಪಿಗೆ ಬಂದರೆ ಪಕ್ಷಕ್ಕೆ ಹೆಚ್ಚಿನ ಶಕ್ತಿ



ಬೆಳಗಾವಿ: ಲಕ್ಷ್ಮಣ ಸವದಿಯವರು ಬಿಜೆಪಿಗೆ ಮರಳಿ ಬಂದರೆ ಪಕ್ಷಕ್ಕೆ ಹೆಚ್ಚಿನ ಶಕ್ತಿ ಬರುತ್ತದೆ ಎಂದು ಮಾಜಿ ಸಂಸದ ರಮೇಶ್ ಕತ್ತಿ ಹೇಳಿದ್ದಾರೆ. ಲಕ್ಷ್ಮಣ ಸವದಿ ಬಿಜೆಪಿಗೆ ಸೇರ್ತಾರೆ ಎಂಬ ವಿಚಾರ ಕುರಿತು ಸುದ್ದಿಗಾರರೊಂದಿಗೆ ಪ್ರತಿಕ್ರಿಯಿಸಿ, ಲಕ್ಷ್ಮಣ ಸವದಿಯವರು ಬಿಜೆಪಿಗೆ ಬರುವ ಕುರಿತು ಈಗಾಗಲೇ ಚರ್ಚೆ ಶುರುವಾಗಿದೆ. ರಾಷ್ಟ್ರೀಯ ಮತ್ತು ರಾಜ್ಯ ಮಟ್ಟದಲ್ಲಿ ಚರ್ಚೆ ಪ್ರಾರಂಭ ಆಗಿದೆ. ನಮ್ಮನ್ನೂ ಕೂಡ ವರಿಷ್ಠರು ಕರೆದು ಮಾತನಾಡಿಸಿ ಅಭಿಪ್ರಾಯ ಕೇಳಿದ್ದಾರೆ. ಸವದಿಯವರನ್ನ ಕರೆತರುವ ಚರ್ಚೆಯಲ್ಲಿ ನಾನು ಕೂಡ ಒಬ್ಬ ಎಂದಿದ್ದಾರೆ.

## ಇಸ್ರೋದ ಚಂದ್ರಯಾನ ಯಶಸ್ಸಿನ ನಂತರ ಬಾಹ್ಯಾಕಾಶ ಶಿಕ್ಷಣಕ್ಕೆ ಹೆಚ್ಚಿದ ಬೇಡಿಕೆ

ಬೆಂಗಳೂರು: ಚಂದ್ರಯಾನ ಯಶಸ್ಸಿನ ನಂತರ ಇದೀಗ ಬಾಹ್ಯಾಕಾಶ ಶಿಕ್ಷಣಕ್ಕೆ ವ್ಯಾಪಕ ಬೇಡಿಕೆ ಕಂಡು ಬಂದಿರುವ ಹಿನ್ನೆಲೆಯಲ್ಲಿ ಗ್ರಾಮೀಣ ಭಾಗದ ಶಾಲೆಗಳಲ್ಲಿ ಸಂಚಾರಿ ತಾರಾಲಯ ಕಾರ್ಯಕ್ರಮವನ್ನು ಮತ್ತಷ್ಟು ವಿಸ್ತರಿಸಲು ತಾರೇ ಜಮೀನ್ ಪರ್ ಎಂಬ ಹೆಸರಿನ ವರ್ಣಾಜ್ ಟೆಕ್ನಾಲಜೀಸ್ ಸಂಸ್ಥೆಗೆ ಅವಕಾಶ ಕಲ್ಪಿಸುವಂತೆ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್. ಬೋಸರಾಜ್ ಅವರಿಗೆ ವರ್ಣಾಜ್ ಟೆಕ್ನಾಲಜೀಸ್ ಸಂಸ್ಥೆ ಮನವಿ ಮಾಡಿದೆ.

ಬೆಳೆಯುತ್ತಿರುವ ವಿಜ್ಞಾನ ಮತ್ತು ತಂತ್ರಜ್ಞಾನ ಶಿಕ್ಷಣಕ್ಕೆ ಪೂರಕವಾಗಿ ಸಂಚಾರಿ ತಾರಾಲಯ ಕಾರ್ಯಕ್ರಮದ ಸಾಮರ್ಥ್ಯ ಹೆಚ್ಚಿಸುವ ಅನಿವಾರ್ಯತೆ ಎದುರಾಗಿದೆ. ಹೀಗಾಗಿ ಸಂಚಾರಿ ತಾರಾಲಯ ಮುನ್ನೆಡೆಸುತ್ತಿರುವ ವರ್ಣಾಜ್ ಟೆಕ್ನಾಲಜೀಸ್ ಸಂಸ್ಥೆ ಈ ಕುರಿತು ಸಮಗ್ರವಾದ ಪ್ರಸ್ತಾವನೆ ಸಲ್ಲಿಸಿದೆ. ತಾರೇ ಜಮೀನ್ ಪರ್ ಸಂಸ್ಥೆ ಈವರೆಗೆ 8,000 ಶಾಲೆಗಳಿಗೆ ತೆರಳಿ 17 ಲಕ್ಷ ಮಕ್ಕಳಿಗೆ ಖಗೋಳಶಾಸ್ತ್ರದ ಬಗ್ಗೆ ಶಿಕ್ಷಣ ನೀಡಿದೆ.

ಮಹಾನಗರ ಪ್ರದೇಶದ ವಿದ್ಯಾರ್ಥಿಗಳಿಗೆ ಈ ಕುರಿತಾದ ಶಿಕ್ಷಣ ದೊರೆಯುತ್ತಿದ್ದು, ಇದನ್ನು ಗ್ರಾಮೀಣ ವಿದ್ಯಾರ್ಥಿಗಳಿಗೆ ತಲುಪಿಸುವುದು ಅತ್ಯಂತ ಅಗತ್ಯವಾಗಿದೆ. ಸಂಚಾರಿ ತಾರಾಲಯವನ್ನು ನಮ್ಮ ಸಂಸ್ಥೆಯೇ ಸಿದ್ಧಪಡಿಸಲಿದ್ದು, ತಾರಾಲಯದ ಕಾರ್ಯಾಚರಣೆಗೆ ತಗಲುವ ಖರ್ಚು ವೆಚ್ಚಗಳನ್ನು ಮಾತ್ರ ಸರ್ಕಾರ ಭರಿಸಬೇಕು ಎಂದು ತಮ್ಮ ಪ್ರಸ್ತಾವನೆ ಯಲ್ಲಿ ಹೇಳಿದೆ.

ಪ್ರಸ್ತಾವನೆ ಸಲ್ಲಿಸಿದ ನಂತರ ಸುದ್ದಿಗಾರರ



ಜೊತೆ ಮಾತನಾಡಿದ ವರ್ಣಾಜ್ ಟೆಕ್ನಾಲಜೀಸ್ ಸಂಸ್ಥೆಯ ಸಿಇಒ ಮತ್ತು ಸಂಸ್ಥಾಪಕರಾದ ದಿನೇಶ ಬಾಡಗಂಡಿ, ಸಚಿವರಾದ ಎನ್.ಎಸ್. ಬೋಸರಾಜ್ ಅವರು ಕಾರ್ಯಕ್ರಮದ ಕುರಿತು ಆಸಕ್ತಿ ವ್ಯಕ್ತಪಡಿಸಿದ್ದು, ಈ ಕುರಿತು ಸಾಧಕ - ಬಾಧಕ ಪರಿಶೀಲಿಸಿ ಸಕಾರಾತ್ಮಕ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದ್ದಾರೆ. ಚಂದ್ರಯಾನ ಯಶಸ್ಸಿನ ನಂತರ ಹೆಚ್ಚಿನ ಪ್ರಮಾಣದಲ್ಲಿ ಯುವ ಸಮೂಹ ಬಾಹ್ಯಾಕಾಶ ಶಿಕ್ಷಣದತ್ತ ಒಲವು ತೋರುತ್ತಿದೆ. ಆದರೆ ಗ್ರಾಮೀಣ ವಿದ್ಯಾರ್ಥಿಗಳು ಇದರಿಂದ ವಂಚಿತರಾಗುತ್ತಿದ್ದಾರೆ.

ಸರ್ಕಾರ ಐದು ವರ್ಷಗಳ ಕಾಲ ಸಂಚಾರಿ ತಾರಾಲಯ ಕಾರ್ಯಕ್ರಮಕ್ಕೆ ಸಾರ್ವಜನಿಕ ಮತ್ತು ಖಾಸಗಿ ಸಹಭಾಗಿತ್ವದಲ್ಲಿ ಕಾರ್ಯಕ್ರಮ ನಡೆಸಲು ಅವಕಾಶ ಕಲ್ಪಿಸಬೇಕು ಎಂದು ಕೋರಲಾಗಿದೆ ಎಂದರು.

ವರ್ಣಾಜ್ ಟೆಕ್ನಾಲಜೀಸ್ ಸಂಸ್ಥೆಯ ತಾರೇ ಜಮೀನ್ ಪರ್ ಸಂಚಾರಿ ತಾರಾಲಯ ಕಾರ್ಯಕ್ರಮ ಇಸ್ರೋದ ಅಧಿಕೃತ ಬೋಧಕರ ಪಟ್ಟಿಗೆ ಸೇರ್ಪಡೆಯಾಗಿದ್ದು, ಇಸ್ರೋ ಸಹಭಾಗಿತ್ವದಡಿ ಎಲ್ಲೆಡೆ ಕಾರ್ಯಕ್ರಮಗಳನ್ನು ನಡೆಸುತ್ತಿದ್ದೇವೆ.

ನಾಸಾ ಕೂಡ ಸಂಚಾರಿ ತಾರಾಲಯ ಕಾರ್ಯಕ್ರಮಕ್ಕೆ ಮೆಚ್ಚುಗೆ ಸೂಚಿಸಿದೆ. ಇಡೀ ದೇಶದಲ್ಲಿಯೇ ಅತ್ಯಂತ ವಿನೂತನ ಕಾರ್ಯಕ್ರಮ ಇದಾಗಿದ್ದು, ಸರ್ಕಾರಿ ಶಾಲೆಯ ಅಂಗಳದಲ್ಲಿಯೇ ಟೆಂಟ್ ಒಳಗೆ ತಾರಾಲಯ ನಿರ್ಮಿಸಿ ವಿದ್ಯಾರ್ಥಿಗಳಿಗೆ ತಾರಾಲಯದ ಬಗ್ಗೆ ಮಾಹಿತಿ ನೀಡಲಾಗುತ್ತಿದೆ.

ಒಂದು ಬಾರಿಗೆ 50 ಮಕ್ಕಳು ಸಂಚಾರಿ ತಾರಾಲಯಲಯದಲ್ಲಿ ಕೂರಲು ಅವಕಾಶವಿದ್ದು, ಮಕ್ಕಳು ಚಂದ್ರನಲ್ಲಿ ಇಳಿಯುವ ಅನುಭವ ಪಡೆಯಬಹುದಾಗಿದೆ. ಈ ಕಾರ್ಯಕ್ರಮವನ್ನು ಗೇಮಿಂಗ್ ರೀತಿಯಲ್ಲಿ ವಿನ್ಯಾಸಗೊಳಿಸಲಾಗಿದೆ.

ವಿದ್ಯಾರ್ಥಿಗಳು ಸ್ವತಃ ಅನುಭವಿಸಿ ಶಿಕ್ಷಣ ಕಲಿಯಲು ಇದು ಸಹಕಾರಿಯಾಗಿದೆ.

ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ತಾರಾಲಯ ಕುರಿತು ರಸಪ್ರಶ್ನೆ ಕಾರ್ಯಕ್ರಮ ಕೂಡ ಹಮ್ಮಿಕೊಳ್ಳಲಾಗುತ್ತಿದೆ.

ಧೂಮಕೇತು ಮತ್ತಿತರೆ ವಿಜ್ಞಾನ ವಿಷಯಗಳ ಬಗ್ಗೆ ಚಲನಚಿತ್ರ ಕೂಡ ಪ್ರದರ್ಶಿಸಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ರಾಜ್ಯದ 11 ಜಿಲ್ಲೆಗಳಲ್ಲಿ ತಾರಾಲಯದ ವ್ಯವಸ್ಥೆ ಇದ್ದು, ಉಳಿದ 20 ಜಿಲ್ಲೆಗಳಿಗೆ ಈ ಕಾರ್ಯಕ್ರಮ ಅತ್ಯಂತ ಅಗತ್ಯವಾಗಿದೆ. ಪ್ರತಿಯೊಂದು ಜಿಲ್ಲೆಯಲ್ಲಿ ತಲಾ ಒಂದೊಂದು ಸಂಚಾರಿ ತಾರಾಲಯವನ್ನು ನಮ್ಮ ಸಂಸ್ಥೆಯೇ ನಿರ್ಮಾಣ ಮಾಡಲಿದೆ. ಸರ್ಕಾರ ಕಾರ್ಯಾಚರಣೆಯ ವೆಚ್ಚ ಭರಿಸಿದರೆ ಸಾಕು.

ಹಳ್ಳಿಗಳಿಗೆ ತೆರಳಿ ನಭೋಮಂಡಲದ ಬಗ್ಗೆ ಮಾಹಿತಿ ನೀಡಲಾಗುವುದು. ಗ್ರಾಮೀಣ ಭಾಗದ ಇಂತಿಷ್ಟು ಹೆಣ್ಣು ಮಕ್ಕಳು, ಗ್ರಾಮೀಣ ವಿದ್ಯಾರ್ಥಿಗಳಿಗೆ ಈ ಕಾರ್ಯಕ್ರಮ ತಲುಪಿಸುವಂತೆ ಸರ್ಕಾರ ನಿಗದಿ ಮಾಡುವ ಗುರಿಯನ್ನು ನಾವು ಕಾಲಮಿತಿಯಲ್ಲಿ ಪೂರ್ಣಗೊಳಿಸುತ್ತೇವೆ ಎಂದರು.

# ಜನಪ್ರತಿಗಳಿಗೆ ಮಾಹಿತಿ ನೀಡಿ, ಅವರನ್ನು ಸಕ್ರಿಯವಾಗಿ ತೊಡಗಿಸಿಕೊಳ್ಳಿ: ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ

ಧಾರವಾಡ: ಎಲ್ಲ ಇಲಾಖೆಗಳ ಪ್ರಗತಿಗಳನ್ನು ಪರಿಶೀಲಿಸಲಾಗಿ ಅಧಿಕಾರಿಗಳು ತಮ್ಮ ಇಲಾಖೆಯ ದಿನನಿತ್ಯದ ಕಾರ್ಯಗಳಿಗೆ ಮಾತ್ರ ಸೀಮಿತವಾಗಿರುವಂತೆ ಕಾಣುತ್ತಿದೆ. ಜಿಲ್ಲೆಯ ಅಭಿವೃದ್ದಿಗೆ ಎಲ್ಲರು ಕಳಕಳಿ, ಪ್ರಜ್ಞಾವಂತಿಕೆ ತರಿಸಬೇಕು. ವೃತ್ತಿಯಲ್ಲಿ ಸಾಮಾಜಿಕ ಪ್ರಜ್ಞೆ, ಆತ್ಮತೃಪ್ತಿ ಮತ್ತು ಸಾಮಾಜಿಕ ನ್ಯಾಯ ಇರುವಂತೆ ಕರ್ತವ್ಯ ನಿರ್ವಹಿಸಬೇಕು. ಅಂದಾಗ ಸರಕಾರದ ಜನಪರ ಯೋಜನೆಗಳು ಅರ್ಹರಿಗೆ ತಲುಪಲು ಸಾಧ್ಯವಿದೆ ಎಂದು ಕಾರ್ಮಿಕ ಇಲಾಖೆ ಮತ್ತು ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಲಾಡ್ ಅವರು ಹೇಳಿದರು.

ಅವರು ಬೆಳಿಗ್ಗೆ ಧಾರವಾಡ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಜರುಗಿದ 2023-24 ನೇ ಸಾಲಿನ ಡಿಸೆಂಬರ್ 2023 ರ ಅಂತ್ಯಕ್ಕೆ ಕೊನೆಗೊಂಡಿರುವ 3 ನೇ ತ್ರೈಮಾಸಿಕ ಕೆ.ಡಿ.ಪಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ, ಮಾತನಾಡಿದರು.

ಜಿಲ್ಲೆಯ ಅಭಿವೃದ್ದಿಗೆ ಮೂಲಭೂತವಾಗಿ ಅಗತ್ಯವಿರುವ ಶಿಕ್ಷಣ, ಆರೋಗ್ಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಕುಡಿಯುವ ನೀರು, ಕೃಷಿ, ತೋಟಗಾರಿಕೆ ಮತ್ತು ನಗರಾಭಿವೃದ್ಧಿ ಯೋಜನೆಗಳಲ್ಲಿ ಜಿಲ್ಲೆಯ ಸಚಿವರನ್ನು, ಶಾಸಕರನ್ನು ಮತ್ತು ವಿವಿಧ ಜನಪ್ರತಿನಿಧಿಗಳನ್ನು ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು. ಅಧಿಕಾರಿಗಳು ತಮಗೆ ತಿಳದಂತೆ ಕಾರ್ಯಕ್ರಮ ರೂಪಿಸಿದರೆ ಸಾಲದು. ಎಲ್ಲರ ಅಭಿಪ್ರಾಯ ಪಡೆಯಬೇಕು. ಪ್ರತಿ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಜಿಲ್ಲಾ ಉಸ್ತುವಾರಿ ಸಚಿವರ ಕಚೇರಿಗೆ ಮತ್ತು ಆಯಾ ಕ್ಷೇತ್ರದ ಶಾಸಕರಿಗೆ ಪ್ರತಿ ತಿಂಗಳು ತಮ್ಮ ಇಲಾಖೆ ಯೋಜನೆ ಕಾಮಗಾರಿಗಳ ಮಾಹಿತಿ ಸಲ್ಲಿಸಬೇಕು. ಇದರಿಂದ ಕಾಮಗಾರಿ, ಯೋಜನೆಗಳಿಗೆ ಯಾವುದೇ ತಾಂತ್ರಿಕ ಅಡಚಣೆ ಆಗದಂತೆ ಮತ್ತು ಅನುಮೋದನೆ, ಅನುದಾನ ವಿಳಂಬವಾಗದಂತೆ ಜನಪ್ರತಿನಿಧಿಗಳು ಮುನ್ನೆಚ್ಚರಿಕೆ ವಹಿಸಲು ಅನುಕೂಲವಾಗುತ್ತದೆ ಎಂದು ಹೇಳಿದರು.

ಅಧಿಕಾರಿಗಳು, ತಮ್ಮ ಇಲಾಖೆಯ ಅಗತ್ಯತೆಗಳ ಬಗ್ಗೆ ಸರಿಯಾದ ಮಾಹಿತಿ ತಿಳಿದಿರಬೇಕು. ಅನುಗಣ್ಣನಗೊಳಿಸಲು ಸಾಧ್ಯವಿರುವ ಸಲಹೆ, ಪ್ರಸ್ತಾವನೆಗಳನ್ನು ನೀಡಬೇಕು. ಭೌತಿಕ ಕಾಮಗಾರಿ, ಕಟ್ಟಡಗಳಿಗೆ ಆದ್ಯತೆ ನೀಡದೆ, ಇರುವ ಸೌಲಭ್ಯಗಳನ್ನು ಸಮರ್ಪಕವಾಗಿ ಬಳಸಿಕೊಂಡು ಸಮಗ್ರವಾದ ಅಭಿವೃದ್ದಿಗೆ ಶ್ರಮಿಸಬೇಕು. ಅಧಿಕಾರಿಗಳು ತಾವಾಗಿಯೇ, ಕಾನ್ಸಿಯಸ್ ಆಗಿ ಕಾರ್ಯನಿರ್ವಹಿಸಬೇಕು ಎಂದರು.

ಜಿಲ್ಲೆಯಲ್ಲಿ ಶಾಲಾ ಶಿಕ್ಷಣ ಕಡಿಮೆ ಹಂತದಲ್ಲಿದೆ. ಶಿಕ್ಷಣ ಇಲಾಖೆ ಅಧಿಕಾರಿಗಳು, ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆ ಮತ್ತು ಡೈಯಟ್ ಸೇರಿ ಸಂಯುಕ್ತವಾಗಿ ಜಿಲ್ಲೆಯಲ್ಲಿ ಶಿಕ್ಷಣ ಸುಧಾರಣೆಗೆ ನೀಲನಕ್ಷೆ ರೂಪಿಸಬೇಕು ಎಂದರು.

ಜಿಲ್ಲೆಯಲ್ಲಿ ಮಕ್ಕಳ ರಕ್ಷಣೆ, ಮಹಿಳೆಯರ ಉದ್ಯೋಗ, ಆರ್ಥಿಕ ಅಭಿವೃದ್ಧಿಗೆ ಆದ್ಯತೆ ನೀಡಬೇಕು. ಜಿಲ್ಲೆಯಲ್ಲಿ ಲಿಂಗಾನುಪಾತ ಕಡಿಮೆ ಆಗಿದ್ದು, ಈ ಕುರಿತು ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆ, ಆರೋಗ್ಯ ಇಲಾಖೆ, ಶಿಕ್ಷಣ ಇಲಾಖೆ ಸೇರಿ ಬಾಲ್ಯವಿವಾಹ, ಮಕ್ಕಳ ನಾಪತ್ತೆ, ಲೈಂಗಿಕ ದೌರ್ಜನ್ಯಗಳ ಕುರಿತು ಮಕ್ಕಳಲ್ಲಿ, ಪಾಲಕರಲ್ಲಿ ಮತ್ತು ಸಮಾಜದಲ್ಲಿ ಜಾಗೃತಿ ಮೂಡಿಸಬೇಕು. ಮಕ್ಕಳಲ್ಲಿ ನೈತಿಕ ಶಿಕ್ಷಣ ನೀಡಲು ಕ್ರಮವಹಿಸಬೇಕು ಎಂದರು.

ಅರಣ್ಯ ಇಲಾಖೆಯ ಕಾರ್ಯಕ್ರಮಗಳು ಸರಿಯಾಗಿ ಅನುಗಣ್ಣನವಾಗಬೇಕು. ಅಧಿಕಾರಿಗಳು ಅರಣ್ಯ ಕಾಯ್ದೆಗಳ ಬಗ್ಗೆ ಸೂಕ್ತ ತಿಳುವಳಿಕೆ ಪಡೆದುಕೊಳ್ಳಬೇಕು. ಅರಣ್ಯ ಹೆಚ್ಚಳಕ್ಕೆ ವಿವಿಧ ಯೋಜನೆಗಳಡಿ ಕ್ರಮ ವಹಿಸಬೇಕು ಎಂದು ಸಚಿವರು ಹೇಳಿದರು.



ಜಿಲ್ಲೆಯ ಯಾವುದೇ ಭಾಗದಲ್ಲಿ ಪಶು ಆಹಾರ ಕೊರತೆ ಆದರೆ ಅಧಿಕಾರಿಯನ್ನೆ ಹೊಣೆ ಮಾಡಲಾಗುತ್ತದೆ. ಪಶುಗಳ ಸಂಖ್ಯೆ, ರೈತರ ಸಂಖ್ಯೆ ಪರಿಗಣಿಸಿ, ಸರಿಯಾಗಿ ಕೆಲಸ ಮಾಡಲು ಸಚಿವರು ಸೂಚಿಸಿದರು.

ರೈತರಿಗೆ ಸಕಾಲಕ್ಕೆ ದನಗಳ ಮೇವು, ಚಿಕಿತ್ಸೆ ಮತ್ತು ಅಗತ್ಯ ಸೌಲಭ್ಯ ಸೀಗುವಂತೆ ಅಧಿಕಾರಿಗಳು ಕಾರ್ಯನಿರ್ವಹಿಸಬೇಕೆಂದು ಸಚಿವರು ಹೇಳಿದರು.

ಕೃಷಿ ಇಲಾಖೆ ಜಂಟಿ ನಿರ್ದೇಶಕ ಡಾ.ಕಿರಣಕುಮಾರ ಅವರು ಮಾತನಾಡಿ, ಜಿಲ್ಲೆಯಲ್ಲಿ ಮುಂಗಾರು ಬೆಳೆ ಹಾನಿ ಆಗಿದ್ದು, ಪರಿಹಾರ ಬಿಡುಗಡೆಗೆ ಸರಕಾರ ಕ್ರಮಕೈಗೊಳ್ಳುತ್ತಿದೆ. ಹಿಂಗಾರು ಬೆಳೆ ಕುಂಠಿತವಾಗಿದ್ದು, ಈಗಾಗಲೇ ಹಿಂಗಾರು ಬೇಳೆ ಸಮೀಕ್ಷೆ ಮಾಡಲಾಗಿದ್ದು, ಬೆಳೆ ಕಟಾವು ಅಂತಿಮ ಹಂತದಲ್ಲಿದೆ ಎಂದು ಅವರು ಹೇಳಿದರು.

2023-24 ನೇ ಸಾಲಿನ ಬೆಳೆ ವಿಮೆ ಮಾಡಿಸಿದ್ದ ರೈತರಿಗೆ ವಿವಿಧ ಬೆಳೆಗಳಿಗೆ ಮದ್ಯಂತರ ಪರಿಹಾರವಾಗಿ 64.03 ಕೋಟಿ ರೂ.ಗಳನ್ನು ಸುಮಾರು 88.272 ರೈತರಿಗೆ ಬಿಡುಗಡೆ ಮಾಡಲಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದರು.

ತೋಟಗಾರಿಕೆ ಇಲಾಖೆ ಉಪ ನಿರ್ದೇಶಕ ಕೆ.ಸಿ.ಬದ್ರಣ್ಣವರ ಮಾತನಾಡಿ, ಜಿಲ್ಲೆಯಲ್ಲಿ ಮಾವು ಉತ್ತಮ ಬೆಳೆ ಬಂದಿದೆ. ಸಾಕಷ್ಟು ರೈತರು ಮಾವು ಬೆಳೆಗೆ ವಿಮೆ ಮಾಡಿಸಿದ್ದಾರೆ. ತುಂತುರು ನೀರಾವರಿಗೆ ಹಾಗೂ ಕೃಷಿಹೊಂಡ ಹೊಂದಲು ರೈತರಿಗೆ ಪ್ರೋತ್ಸಹ ನೀಡಲಾಗುತ್ತಿದೆ. ತೋಟಗಾರಿಕೆ ಬೆಳೆ ಬೆಳೆಯುವ ಪ್ರದೇಶ ವಿಸ್ತರಣೆಗೆ ಕ್ರಮಕೈಗೊಳ್ಳಲಾಗಿದೆ ಎಂದು ಅವರು ಹೇಳಿದರು.

2022-23ನೇ ಸಾಲಿನ ಹವಾಮಾನ ಆದಾರಿತ ಮಾವು ಬೆಳೆ ವಿಮೆಗೆ 9145 ಜನ ರೈತರು ನೊಂದಣಿಯಾಗಿದ್ದರು. ಈಗ ಇದರಲ್ಲಿ 3126 ಜನ ರೈತರಿಗೆ ರೂ.10 ಕೋಟಿ ಪರಿಹಾರ ಬಿಡುಗಡೆ ಹಂತದಲ್ಲಿದೆ ಮತ್ತು ಉಳಿದ 5600 ಜನ ರೈತರಿಗೆ ಪರಿಹಾರ ವಿಮೆ ಬಿಡುಗಡೆಗೆ ಸರ್ಕಾರ ಕ್ರಮ ಕೈಗೊಂಡಿದೆ ಎಂದು ತಿಳಿಸಿದರು.

ಜಿಲ್ಲಾ ಆರೋಗ್ಯ ಇಲಾಖೆ ಅಧಿಕಾರಿ ಡಾ.ಪಾಟೀಲ ಶಶಿ ಅವರು ಮಾತನಾಡಿ, ಬರುವ ಫೆಬ್ರುವರಿಯಲ್ಲಿ ಹೊಸದಾಗಿ 108 ಅಂಬುಲೆನ್ಸ್ ಗಳು ಬರುತ್ತಿವೆ. ಜಿಲ್ಲೆಯಲ್ಲಿ ಅಗತ್ಯವಿದ್ದಲ್ಲಿ ಬಳಸಲು ಯೋಜನೆ ಸಿದ್ದಗೊಳಿಸಲಾಗಿದೆ. ಜಿಲ್ಲೆಯಲ್ಲಿ ಲಿಂಗಾನಪಾತ ಕಡಿಮೆ ಇದ್ದು, ಇದರ ಬಗ್ಗೆ ಜಾಗೃತಿ ಮೂಡಸಲಾಗುತ್ತಿದೆ ಎಂದು ಹೇಳಿದರು.

ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಸ್.ಎಸ್.ಕೆಳದಿಮಠ ಅವರು ಮಾತನಾಡಿ, ಈ ಸಲದ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಲು ಮಕ್ಕಳಿಗೆ ತರಬೇತಿ ನೀಡಿ, ಸಿದ್ದಗೊಳಿಸಲಾಗಿದೆ. ಪ್ರತಿ ಶಾಲೆಗಳಲ್ಲಿ ಸರಣಿ ಪರೀಕ್ಷೆಗಳನ್ನು ಹಮ್ಮಿಕೊಳ್ಳಲಾಗಿದೆ. ಕಲಿಕೆಯಲ್ಲಿ ಹಿಂದುಳಿದ ಮಕ್ಕಳಿಗೆ ಹೆಚ್ಚು ಗಮನಹರಿಸಲಾಗಿದೆ ಎಂದು ಅವರು ಹೇಳಿದರು.

ರೇಗಷ್ಮ ಇಲಾಖೆಯ ಕಾರ್ಯ ಚಟುವಟಿಗಳು ಜಿಲ್ಲೆಯಲ್ಲಿ ಹೆಚ್ಚು ವಿಸ್ತರಣೆ ಆಗಬೇಕು. ಅನೇಕ ರೈತರ ಜಮೀನುಗಳಲ್ಲಿ ರೇಗಷ್ಮ, ಮಿನಿಗಾರಿಕೆ, ತೋಟಗಾರಿಕೆ ಮತ್ತು ಪಶುವೈದ್ಯಕೀಯ ಇಲಾಖೆಗಳು ಜಂಟಿಯಾಗಿ ಇಲಾಖೆ ಕಾರ್ಯಕ್ರಮಗಳನ್ನು ಅನುಷ್ಠನಗೊಳಿಸಿ ಒಂದು ಅಭಿವೃದ್ಧಿ ಮಾದರಿ ರೂಪಿಸಬೇಕು ಎಂದು ಸಚಿವರು ಸಲಹೆ ನೀಡಿದರು.

ಜಿಲ್ಲಾಪಶುವೈದ್ಯಕೀಯ ಇಲಾಖೆ ಉಪ ನಿರ್ದೇಶಕ ಡಾ.ರವಿ ಸಾಲಿಗೌಡರ ಅವರು ಮಾತನಾಡಿ, ಜಿಲ್ಲೆಯಲ್ಲಿ ಪಶುಪಾಲನಾ ಇಲಾಖೆಯ ಸಹಾಯವಾಣಿ 1942 ಗೆ ಜಿಲ್ಲೆಯಲ್ಲಿ ಇಲ್ಲಿವರೆಗೆ ರೈತರಿಂದ ಒಟ್ಟು 1980 ಕರೆಗಳು ಬಂದಿದ್ದು, ಎಲ್ಲವುಗಳನ್ನು ಅಟೆಂಡ್ ಮಾಡಲಾಗಿದೆ. ಒಟ್ಟು ಎಂಟು ಅಂಬುಲೆನ್ಸಗಳು ಕಾರ್ಯನಿರ್ವಹಿಸುತ್ತಿವೆ. ಇಲಾಖೆ ಕಾರ್ಯಕ್ರಮಗಳನ್ನು ಜನರ ಮನೆಗಳಿಗೆ ತಲುಪಿಸಲು 144 ಪಶು ಸಖಿಯರು ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ಅವರು ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆ ಉಪನಿರ್ದೇಶಕಿ ಪದ್ಮಾವತಿ ಅವರು ಮಾತನಾಡಿ, ಜಿಲ್ಲೆಯಲ್ಲಿ ಭೌತಿಕವಾಗಿ ಶೇ.100 ಪ್ರಗತಿ ಆಗಿದ್ದು, ಆರ್ಥಿಕವಾಗಿ ಶೇ.68 ಪ್ರಗತಿ ಆಗಿದೆ. ಜಿಲ್ಲೆಯಲ್ಲಿ 43 ಬಾಲ್ಯವಿವಾಹಗಳನ್ನು ತಡೆಯಲಾಗಿದೆ ಎಂದು ತಿಳಿಸಿದರು.

ಮೀನುಗಾರಿಕೆ ಇಲಾಖೆ ಅಧಿಕಾರಿ ಮಾತನಾಡಿ, ಜಿಲ್ಲೆಯ 135 ಕೆರೆಗಳಲ್ಲಿ ಮೀನುಗಾರಿಕೆಗೆ ಸಿದ್ದಗೊಳಿಸಲಾಗಿದೆ. ವಿವಿಧ ಇಲಾಖೆಗಳ ಸಮನ್ವಯದಲ್ಲಿ ನರೇಗಾ ಯೋಜನೆಯಡಿ ಮೀನುಗಾರಿ ಅಭಿವೃದ್ಧಿಗೆ ಕ್ರಮವಹಿಸಲಾಗಿದೆ ಎಂದು ಅವರು ಹೇಳಿದರು.

ಶಾಸಕರಾದ ಎಂ.ಆರ್.ಪಾಟೀಲ ಅವರು ಮಾತನಾಡಿ, ಬೇಸಿಗೆ ಹೆಚ್ಚಳವಾಗುತ್ತಿರುವದರಿಂದ ಅಧಿಕಾರಿಗಳು ಗ್ರಾಮೀಣ ಕುಡಿಯುವ ನೀರು, ಗ್ರಾಮೀಣರಿಗೆ ಉದ್ಯೋಗ ಸೀಗುವಂತೆ ಕ್ರಮವಹಿಸಬೇಕು. ದನಕರುಗಳಿಗೆ ಮೇವು, ಕುಡಿಯುವ ನೀರು ಕೊರತೆ ಆಗದಂತೆ ಎಚ್ಚರಿಕೆವಹಿಸಬೇಕು. ರೈತರಿಗೆ ಪರಿಹಾರ ವಿತರಣೆಗೆ ಕ್ರಮವಹಿಸಬೇಕು ಎಂದು ಅವರು ಹೇಳಿದರು.

ಶಾಸಕ ಮಹೇಶ ಟೆಂಗಿನಕಾಯಿ ಅವರು ಮಾತನಾಡಿ, ನಗರ ಪ್ರದೇಶದ ಕಾಮಗಾರಿಗಳನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸಬೇಕು. ಕೆರೆಗಳ ಸುಧಾರಣೆಗೆ ಕ್ರಮವಹಿಸಬೇಕು ಎಂದರು.

ಕ್ರೆಡಿಲ್ (ಲ್ಯಾಂಡ್ ಆರ್ಮಿ) ದಿಂದ ನಗರದ ಉದ್ಯಾನವನಗಳ ಅಭಿವೃದ್ಧಿಗೆ ಕಾಮಗಾರಿ ನೀಡಲಾಗಿದ್ದು, ಸರಿಯಾದ ಸಮೀಕ್ಷೆ ಮಾಡಿಲ್ಲ ಮತ್ತು ಅಭಿವೃದ್ದಿಗೂ ಕ್ರಮವಹಿಸಿಲ್ಲ. ಈ ಕುರಿತು ಕ್ರಮವಹಿಸಿ, ಮಳೆಗಾಲ ಪೂರ್ವದಲ್ಲಿ ಕಾಮಗಾರಿ ಪೂರ್ಣಗೊಳಿಸಬೇಕು. ಜಿಲ್ಲೆಯಲ್ಲಿ ಶೈಕ್ಷಣಿಕ ಸುಧಾರಣೆ ಮತ್ತು ಶಾಲಾ ಮಕ್ಕಳ ಸುಧಾರಣೆಗೆ ಒತ್ತು ನೀಡಬೇಕೆಂದು ಶಾಸಕ ಮಹೇಶ ಟೆಂಗಿನಕಾಯಿ ಅವರು ಹೇಳಿದರು.

ಶಾಸಕ ಎನ್.ಎಚ್.ಕೋನರಡ್ಡಿ ಅವರು ಮಾತನಾಡಿ, ಕ್ಷೇತ್ರದಲ್ಲಿ ಎಲ್ಲ ಕಾಮಗಾರಿಗಳು ಮಾರ್ಚದೊಳಗೆ ಮುಕ್ತಾಯಗೊಳಿಸಲು ಮತ್ತು ಸರಕಾರದ ಯೋಜನೆಗಳನ್ನು ಸಮರ್ಪಕವಾಗಿ ಜಾರಿಗೊಳಿಸಲು ಅಧಿಕಾರಿಗಳಿಗೆ ತಿಳಿಸಿದರು.

# ಹನುಮ ಧ್ವಜ ಹಾರಿಸುವವರೆಗೂ ಹೋರಾಟ, ಹನುಮನ ಪರ ಇಡೀ ಮಂಡ್ಯ ನಿಲ್ಲಲಿದೆ: ಆರ್.ಅಶೋಕ

ಬೆಂಗಳೂರು: ಮಂಡ್ಯದ ಕೆರಗೋಡಿನಲ್ಲಿ ಹನುಮ ಧ್ವಜ ಹಾರಿಸುವವರೆಗೂ ಬಿಜೆಪಿ ಹೋರಾಟ ನಡೆಸಲಿದೆ. ಕಾಂಗ್ರೆಸ್ ಸರ್ಕಾರ ಇನ್ನಷ್ಟು ಕೆದಕಿದರೆ ಇದು ದೇಶವ್ಯಾಪಿ ಹೋರಾಟವಾಗಲಿದೆ ಎಂದು ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್.ಅಶೋಕ ಎಚ್ಚರಿಕೆ ನೀಡಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ನಾಯಕರಿಗೆ ನೆಹರು ಕಾಲದಿಂದಲೂ ರಾಮನ ಮೇಲೆ ದ್ವೇಷ ಇದೆ. ಆದರೀಗ ಹನುಮನ ಬಗ್ಗೆ ದ್ವೇಷ ಶುರುವಾಗಿದೆ. ಕೆರೆಗೋಡಿನಲ್ಲಿ 20-30 ವರ್ಷಗಳಿಂದ ಹನುಮ ಧ್ವಜ ಹಾರಿಸಲಾಗುತ್ತಿದೆ. ಯಾವುದೇ ಮಸೀದಿಯ ಬಳಿ ಧ್ವಜ ಹಾರಿಸಿಲ್ಲ. ಪ್ರತಿ ಮನೆಯವರಿಂದ ದೇಣಿಗೆ ಸಂಗ್ರಹಿಸಿ 6 ಲಕ್ಷ ರೂ. ಖರ್ಚು ಮಾಡಿ 108 ಅಡಿ ಸ್ತಂಭ ನಿರ್ಮಿಸಲಾಗಿದೆ. ಇಡೀ ವರ್ಷ ಅಲ್ಲಿ ಹನುಮ ಧ್ವಜ ಹಾರಿಸಲಾಗುತ್ತದೆ. ಸ್ವಾತಂತ್ರ್ಯ ದಿನಾಚರಣೆ, ಗಣರಾಜ್ಯೋತ್ಸವ ದಿನದಂದು ರಾಷ್ಟ್ರಧ್ವಜ ಹಾರಿಸಲಾಗುತ್ತದೆ. ಹನುಮನ




ನಾಡಿನಲ್ಲಿ ಹನುಮ ಧ್ವಜ ಹಾರಿಸಲು ಸರ್ಕಾರ ಬಿಡುತ್ತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸರ್ಕಾರಕ್ಕೆ ಮರ್ಯಾದೆ ಇದ್ದರೆ ಅವರ ಅನುದಾನದಿಂದ ಕಂಬ ನಿರ್ಮಿಸಿ ಧ್ವಜ ಹಾರಿಸಬೇಕಿತ್ತು. ಹನುಮನನ್ನು ಹೇಗೆ ವಿರೋಧ ಮಾಡಬೇಕೆಂದು ಚಿಂತಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹೀಗೆ ಮಾಡಿದ್ದಾರೆ. ಕಾಂಗ್ರೆಸ್ ಸರ್ಕಾರವೆಂದರೇನೆ ಶಕುನಿ ಸರ್ಕಾರ. ಹನುಮ ಧ್ವಜವನ್ನು ತೆಗೆಸಲು ಸರ್ಕಾರ ರಾಷ್ಟ್ರಧ್ವಜವನ್ನು ಬಳಕೆ ಮಾಡಿದೆ. ಮೊದಲು ಯಾವ ಧ್ವಜವಿತ್ತೋ ಅದೇ ಧ್ವಜವನ್ನು ಅಲ್ಲಿ ಹಾರಿಸಬೇಕು ಎಂದು ಒತ್ತಾಯಿಸಿದರು.

ಈ ಹೋರಾಟ ಇಡೀ ಮಂಡ್ಯ ಜಿಲ್ಲೆಯ ಮನೆಗಳನ್ನು ತಲುಪಲಿದೆ. ಇದು ಅಕ್ರಮವಾಗಿದ್ದರೆ ನೋಟಿಸ್ ಜಾರಿ ಮಾಡಬೇಕಿತ್ತು. ಅದು ನ್ಯಾಯಾಲಯದಲ್ಲಾದರೂ ತೀರ್ಮಾನ ಆಗಬೇಕಿತ್ತು. ಅದನ್ನು ಬಿಟ್ಟು ಲೋಕಸಭಾ ಚುನಾವಣಾ ಲಾಭಕ್ಕಾಗಿ ಹೀಗೆ ಮಾಡಲಾಗುತ್ತಿದೆ ಎಂದು ಹೇಳುವುದು ಸರಿಯಲ್ಲ. ಇಲ್ಲಿ ಧ್ವಜ ಹಾರಿಸುವುದು ಮಂಡ್ಯ ಜಿಲ್ಲೆಯ ಜನರಿಗೂ ಗೊತ್ತಿರಲಿಲ್ಲ ಎಂದಮೇಲೆ ಇದರಿಂದ ಬಿಜೆಪಿಗೆ ಯಾವ ರಾಜಕೀಯ ಲಾಭ ಬರುತ್ತದೆ ಎಂದು ಪ್ರಶ್ನಿಸಿದರು.

ಕಾಶ್ಮೀರದ ಲಾಲ್ ಚೌಕ್ ನಲ್ಲಿ ರಾಷ್ಟ್ರಧ್ವಜ ಹಾರಿಸುವಂತೆ ಪಾಕಿಸ್ತಾನ ಸವಾಲು ಹಾಕಿತ್ತು. ಅನೇಕ ಬಿಜೆಪಿ ನಾಯಕರು ಹೋಗಿ ರಾಷ್ಟ್ರಧ್ವಜ ಹಾರಿಸಿದ್ದಕ್ಕೆ ಕಾಂಗ್ರೆಸ್ ಸರ್ಕಾರ ಲಾಠಿ ಚಾರ್ಜ್ ಮಾಡಿತ್ತು. ಆಗ ರಾಷ್ಟ್ರಧ್ವಜ ಹಾರಿಸಲು ಬಾರದವರು ಈಗ ದೇಶಾಭಿಮಾನ ತೋರುತ್ತಿದ್ದಾರೆ. ನಮ್ಮ ಹೋರಾಟ ನಿಲ್ಲುವುದಿಲ್ಲ ಎಂದು ಎಚ್ಚರಿಕೆ ನೀಡಿದರು.

ಸರ್ಕಾರ ನಕಲಿ ದಾಖಲೆಗಳನ್ನು ಬಿಡುಗಡೆ ಮಾಡಿದೆ. ಸ್ತಂಭ ಅಳವಡಿಸಿ ಹನುಮ ಧ್ವಜ ಹಾರಿಸಿದಾಗಲೇ ಸರ್ಕಾರ ಕ್ರಮ ವಹಿಸಬೇಕಿತ್ತು. ಆದರೆ ಕಾಂಗ್ರೆಸ್ ನಾಯಕರನ್ನು ಕಾರ್ಯಕ್ರಮಕ್ಕೆ ಕರೆದಿಲ್ಲ ಎನ್ನುವ ಕಾರಣಕ್ಕೆ ಧ್ವಜ ಇಳಿಸಲಾಗಿದೆ. ಇದು ಸಂಪೂರ್ಣ ರಾಜಕೀಯದ ಸಂಗತಿ. ಸರ್ಕಾರ ಹೀಗೆಯೇ ಕೆದಕುತ್ತಿದ್ದರೆ ಇದು ದೇಶವ್ಯಾಪಿ ಹೋರಾಟವಾಗಲಿದೆ. ಕಾಂಗ್ರೆಸ್ ನ ಹೃದಯವನ್ನು ನಿರ್ಮಾ ಸೋಪು ಹಾಕಿ ತೊಳೆದರೂ ಅಲ್ಲಿ ಶ್ರೀ ರಾಮ ಬರುವುದಿಲ್ಲ. ಅಲ್ಲಿ ಟಿಪ್ಪು ಸುಲ್ತಾನನೇ ಇರುತ್ತಾನೆ ಎಂದರು.

ವೋಟ್ ಮಾಡಿಸಿ: ಹನುಮಂತ ಹಗ್ಗ ಕಡಿಯುವಾಗ ಪೂಜಾರಿ ಶ್ಯಾವಿಗೆ ಕೇಳಿದ ಎಂಬಂತೆ, ಕಷ್ಟದಲ್ಲಿರುವ ಜನರು ಹಣ ಹಾಕಿ ನಿರ್ಮಿಸಿದ ಸ್ತಂಭವನ್ನು ಕಾಂಗ್ರೆಸ್ ನಾಶ ಮಾಡಲು ಮುಂದಾಗಿದ್ದಾರೆ. ನೀವು ಹಿಂದೂಗಳೇ ಆಗಿದ್ದಲ್ಲಿ, ಅಲ್ಲಿ ಹನುಮ ಧ್ವಜ ಇರಬೇಕೋ ಬೇಡವೋ ಎಂದು ಜನರ ಬಳಿ ಮತ ಹಾಕಿಸಲಿ.ಎಲ್ಲರೂ ಹನುಮ ಧ್ವಜ ಬೇಕೆಂದೇ ಆಗ್ರಹಿಸಲಿದ್ದಾರೆ. ದ್ವೇಷದ ರಾಜಕಾರಣ, ವೋಟಿನ ರಾಜಕಾರಣವನ್ನು ಮೊದಲು ಬಿಡಿ ಎಂದರು.

## ಫೆಬ್ರವರಿ 1 ರಂದು ಶ್ರೀ ಮಡಿವಾಳ ಮಾಚಿದೇವರ ಜಯಂತಿ

ಧಾರವಾಡ: ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಶ್ರೀ ಮಡಿವಾಳ ಮಾಚಿದೇವರ ಜಯಂತಿಯನ್ನು ಫೆಬ್ರವರಿ 1 ರಂದು ಬೆಳಿಗ್ಗೆ 11 ಗಂಟೆಗೆ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಏರ್ಪಡಿಸಲಾಗಿದೆ.

ಮನಗುಂಡಿಯ ಶ್ರೀ ಗುರುಬಸವ ಮಹಾಮನೆಯ ಬಸವಾನಂದ ಮಹಾಸ್ವಾಮಿಗಳು ಕಾರ್ಯಕ್ರಮದಲ್ಲಿ ಸಾನಿಧ್ಯ ವಹಿಸುವರು.

ಕಾರ್ಯಕ್ರಮದಲ್ಲಿ ಕೇಂದ್ರ ಸಂಸದೀಯ ವ್ಯವಹಾರಗಳ, ಕಲ್ಲಿದ್ದಲು ಮತ್ತು ಗಣಿ ಸಚಿವರಾದ ಪ್ರಲ್ಹಾದ ಜೋಶಿ ಹಾಗೂ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಘನ ಉಪಸ್ಥಿತರಿರುವರು. ಕಾರ್ಮಿಕ ಸಚಿವರು ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್.ಲಾಡ್ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು. ಹಾಗೂ ಮಾಜಿ ಮುಖ್ಯಮಂತ್ರಿ ಜಗದೀಶ ಶೆಟ್ಟರ್, ಕರ್ನಾಟಕ ವಿಧಾನ ಪರಿಷತ್ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ, ಶಾಸಕರಾದ ವಿನಯ ಕುಲಕರ್ಣಿ, ಅಬ್ಬಯ್ಯ ಪ್ರಸಾದ, ಭರಮಗೌಡ ಅಲಗೌಡ ಕಾಗೆ, ಜೆ.ಎಂ.ಗಣೇಶ ಅವರು ವಿಶೇಷ ಅತಿಥಿಗಳಾಗಿ ಆಗಮಿಸುವರು. ಶಾಸಕರಾದ ಅರವಿಂದ ಬೆಲ್ಲದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಶಾಸಕರಾದ ಎನ್.ಎಚ್ ಕೋನರಡ್ಡಿ, ಎಸ್.ವ್ಹಿ ಸಂಕನೂರ, ಪ್ರದೀಪ ಶೆಟ್ಟರ, ಮಹೇಶ ಟೆಂಗಿನಕಾಯಿ, ಎಂ.ಆರ್.ಪಾಟೀಲ್, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಮಹಾಪೌರರಾದ ವೀಣಾ ಚೇತನ ಭರದ್ವಾಡ, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಸದಸ್ಯೆ ಅನಿತಾ ನಾರಾಯಣ ಚಳಗೇರಿ ಅವರು ಭಾಗವಹಿಸುವರು.

ಧಾರವಾಡ ಜಿಲ್ಲಾ ಮಡಿವಾಳರ ಸಂಘದ ಗೌರವಾಧ್ಯಕ್ಷ ಯಲ್ಲಪ್ಪ ಬೆಂಡಿಗೇರಿ, ಅಧ್ಯಕ್ಷ ಮಡಿವಾಳಪ್ಪ ಮಡಿವಾಳರ, ಪ್ರಧಾನ ಕಾರ್ಯದರ್ಶಿ ಶಿವಲಿಂಗಪ್ಪ ಮಡಿವಾಳರ ಹಾಗೂ ಸಮಾಜದ ಮುಖಂಡರಾದ ಪರಶುರಾಮ ಮಡಿವಾಳರ, ನವೀನ ಮಡಿವಾಳರ ಅವರು ಉಪಸ್ಥಿತಿ ವಹಿಸುವರು

ಕಾರ್ಯಕ್ರಮದಲ್ಲಿ ನವನಗರದ ಸರ್ಕಾರಿ ಪದವಿಪೂರ್ವ ಕಾಲೇಜಿನ ಉಪನ್ಯಾಸಕ ಬಿ.ವಿ. ಮಡಿವಾಳರ ಅವರು ವಿಶೇಷ ಉಪನ್ಯಾಸ ನೀಡುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕುಮಾರ ಬೆಕ್ಕೇರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆಂಗಳೂರಿನ ಮಲ್ಲೇಶ್ವರದಲ್ಲಿ 1.11 ಕೋಟಿ ರೂ ವೆಚ್ಚದಲ್ಲಿ ರಾಜೀವ್ ಗಾಂಧಿ ಪ್ರತಿಮೆ ಸ್ಥಾಪನೆ

ಬೆಂಗಳೂರು: ನಗರದ ಹೃದಯ ಭಾಗದಲ್ಲಿರುವ ಮಲ್ಲೇಶ್ವರದ ಮಂತ್ರಿ ಸ್ಕ್ವೇರ್ ಮೆಟ್ರೋ ನಿಲ್ದಾಣದ ಬಳಿ ಮಾಜಿ ಪ್ರಧಾನಿ ರಾಜೀವ್ ಗಾಂಧಿ ಅವರ ಕಂಚಿನ ಪ್ರತಿಮೆ ಅಂದಾಜು 1.11 ಕೋಟಿ ರೂಪಾಯಿ ವೆಚ್ಚದಲ್ಲಿ ತಲೆಯೆತ್ತಲಿದೆ. ಕಾಂಕ್ರೀಟ್ ಪ್ರತಿಮೆಗೆ ಬದಲಾಗಿ ಹೊಸ ಪ್ರತಿಮೆ ನಿರ್ಮಾಣವಾಗಲಿದೆ. ಸುಭಾಷ್ ನಗರ ಜಂಕ್ಷನ್ ಅಥವಾ ರಾಜೀವ್ ಗಾಂಧಿ ಚೌಕ್ ಎಂದು ಕರೆಯಲಾಗುವ, ಈ ಸ್ಥಳವು ಗಾಂಧಿನಗರ ವಿಧಾನಸಭಾ ಕ್ಷೇತ್ರದ ಅಡಿಯಲ್ಲಿ ಬರುತ್ತದೆ.

15ನೇ ಹಣಕಾಸು ಆಯೋಗದ ಕಾರ್ಯಕ್ರಮದಡಿ ಅಭಿವೃದ್ಧಿ ಕಾಮಗಾರಿಗಳಿಗೆ ಕೈಗೆತ್ತಿಕೊಂಡ 25 ಜಂಕ್ಷನ್‌ಗಳಲ್ಲಿ ಸುಭಾಷ್ ನಗರವೂ ಒಂದಾಗಿದ್ದು, ಪ್ರತಿಮೆಯ ವೆಚ್ಚವನ್ನು ಬಿಬಿಎಂಪಿ ಸ್ವಂತವಾಗಿ ಭರಿಸಲಿದೆ. ಈ ಹಿಂದೆ ಜಂಕ್ಷನ್‌ನಲ್ಲಿ ಸ್ಥಾಪಿಸಲಾಗಿದ್ದ ಕಾಂಕ್ರೀಟ್ ಮೂರ್ತಿಯನ್ನು ಅಭಿವೃದ್ಧಿ ಕಾಮಗಾರಿ ಕೈಗೊಳ್ಳಲು ತೆಗೆಯಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕಾಮಗಾರಿಯನ್ನು ಪಾಲಿಕೆಯ ಟ್ರಾಫಿಕ್ ಇಂಜಿನಿಯರಿಂಗ್ ಸೆಲ್‌ಗೆ ವಹಿಸಲಾಗಿದೆ -ಸಿಂಗಲ್ ಬಿಡ್ಡರ್ ಆಗಿದ್ದ ಕಲ್ಯಾಣ್ ಇನ್‌ಫ್ರಾ ಪ್ರಾಜೆಕ್ಟ್‌ಗೆ ನೀಡಲಾಗಿದೆ.

# ಬಜೆಟ್‌ನಲ್ಲಿ ರಾಯಚೂರಿಗೆ ಏಮ್ಸ್ ಮಂಜೂರು ಮಾಡಿ: ನಿರ್ಮಲಾ ಸೀತಾರಮನ್‌ಗೆ ಸಿಎಂ ಸಿದ್ದರಾಮಯ್ಯ ಪತ್ರ

ಬೆಂಗಳೂರು: ರಾಯಚೂರು ಜಿಲ್ಲೆಯಲ್ಲಿ ಅಖಿಲ ಭಾರತ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ(ಏಮ್ಸ್) ಸ್ಥಾಪಿಸಬೇಕು ಎಂಬ ರಾಜ್ಯದ ಪ್ರಸ್ತಾವನೆಯನ್ನು ಮುಂಬರುವ ತಮ್ಮ ಬಜೆಟ್‌ನಲ್ಲಿ ಮಂಜೂರು ಮಾಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರಿಗೆ ಪತ್ರ ಬರೆದಿದ್ದಾರೆ.

ನಿರ್ಮಲಾ ಸೀತಾರಾಮನ್ ಅವರು ಫೆಬ್ರವರಿ ಒಂದರಂದು ಮಧ್ಯಂತರ ಬಜೆಟ್ ಮಂಡಿಸಲಿದ್ದಾರೆ.

"ರಾಯಚೂರು ಕಲ್ಯಾಣ ಕರ್ನಾಟಕ ಭಾಗದ ಮಹತ್ವದ ಜಿಲ್ಲೆಯಾಗಿದೆ. ಅಲ್ಲಿ ಆರೋಗ್ಯ, ಶಿಕ್ಷಣ ಮತ್ತು ತಲಾ ಆದಾಯದ ಮಟ್ಟವು ಕರ್ನಾಟಕದ ಇತರ ಪ್ರದೇಶಗಳಿಗೆ ಹೋಲಿಸಿದರೆ ಇನ್ನೂ



ಕಡಿಮೆ ಇದೆ.

ರಾಯಚೂರು ಜಿಲ್ಲೆಯಲ್ಲಿ ಉನ್ನತ ಗುಣಮಟ್ಟದ ರೆಫರಲ್ ವೈದ್ಯಕೀಯ ಕೇಂದ್ರ ಸ್ಥಾಪಿಸುವ ತುರ್ತು ಅಗತ್ಯವಿದೆ ಎಂದು ಸಿಎಂ ಸಿದ್ದರಾಮಯ್ಯ ಅವರು ಜನವರಿ 29ರ ಕೇಂದ್ರ ಹಣಕಾಸು ಸಚಿವರಿಗೆ ಬರೆದ ಪತ್ರದಲ್ಲಿ ತಿಳಿಸಿದ್ದಾರೆ.

ಕರ್ನಾಟಕದಲ್ಲಿ ಏಮ್ಸ್ ಸ್ಥಾಪನೆಯ ಪ್ರಸ್ತಾವನೆಯು ಸಾಕಷ್ಟು ಸಮಯದಿಂದ ಬಾಕಿ ಉಳಿದಿದೆ. ರಾಜ್ಯ ಸರ್ಕಾರವು ಸಂಭವನೀಯ ಸ್ಥಳಗಳನ್ನು ಪರಿಗಣಿಸಿ, ರಾಯಚೂರು ಏಮ್ಸ್ ಸ್ಥಾಪಿಸಲು ಅತ್ಯಂತ ಸೂಕ್ತ ಸ್ಥಳವಾಗಿದೆ ಎಂದು ಸಿಎಂ ಅಭಿಪ್ರಾಯಪಟ್ಟಿದ್ದಾರೆ.

ಆದ್ದರಿಂದ ಮುಂಬರುವ 2024-25ರ ಬಜೆಟ್‌ನಲ್ಲಿ ರಾಯಚೂರಿಗೆ ಏಮ್ಸ್ ಮಂಜೂರು ಮಾಡುವಂತೆ ನಾನು ನಿಮ್ಮಲ್ಲಿ ಮನವಿ ಮಾಡುತ್ತೇನೆ ಎಂದು ಸಿಎಂ ಹೇಳಿದ್ದಾರೆ.

"ಸಿಎಂ ಸಿದ್ದರಾಮಯ್ಯ ಅವರು ತಮ್ಮ ಪತ್ರಕ್ಕೆ, ಜೂನ್ 17, 2023 ರಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಮನ್ಸುಖ್ ಮಾಂಡವಿಯಾ ಅವರಿಗೆ ಬರೆದ ಪತ್ರದ ಪ್ರತಿಯನ್ನು ಸಹ ಲಗತ್ತಿಸಿದ್ದಾರೆ.

## ಗೃಹರಕ್ಷಕದಳದ ಪಾರ್ವತಿ ಎಫ್ ಸಂಭೋಜಿ ಅವರಿಗೆ ಮುಖ್ಯ ಮಂತ್ರಿಗಳಿಂದ ಚಿನ್ನದ ಪದಕ



ಧಾರವಾಡ: ಧಾರವಾಡ ಜಿಲ್ಲೆಯ ಗೃಹರಕ್ಷಕದಳದಲ್ಲಿ ಕಾರ್ಯನಿರ್ವಹಿಸುತ್ತಿರುವ ಪಾರ್ವತಿ ಎಫ್ ಸಂಭೋಜಿ ಧಾರವಾಡ ಘಟಕದ ಗೃಹರಕ್ಷಕದಳದ ಇಲಾಖೆಯಲ್ಲಿ ಉತ್ತಮವಾದ ಸೇವೆಯನ್ನು ಸಲ್ಲಿಸಿದಕ್ಕಾಗಿ 2023 ನೇ ಸಾಲಿಗೆ ಘನತೆವೆತ್ತ ಮುಖ್ಯ ಮಂತ್ರಿಗಳ ಚಿನ್ನದ ಪದಕವನ್ನು ನೀಡಿ ಗೌರವಿಸಿದ್ದಾರೆ.

ಪಾರ್ವತಿ ಎಫ್ ಸಂಭೋಜಿ ಇವರು ಮುಖ್ಯ ಮಂತ್ರಿಗಳ ಚಿನ್ನದ ಪದಕವನ್ನು ಪಡೆದು ಧಾರವಾಡ ಜಿಲ್ಲೆಗೆ ಮತ್ತು ಗೃಹರಕ್ಷಕದಳದ ಇಲಾಖೆಗೆ ಕೀರ್ತಿಯನ್ನು ತಂದುಕೊಟ್ಟಿದಕ್ಕಾಗಿ ಧಾರವಾಡ ಜಿಲ್ಲಾ ಗೃಹರಕ್ಷಕದಳದ ಸಮಾದೇಷ್ಟರಾದ ಸುನೀಲ್ ಸರೂರ ಮತ್ತು ಕಛೇರಿ ಸಿಬ್ಬಂದಿ ವರ್ಗದವರು ಹಾಗೂ ಧಾರವಾಡ ಜಿಲ್ಲೆಯ ಎಲ್ಲಾ ಗೃಹರಕ್ಷಕ ಅಧಿಕಾರಿಗಳು,ಗೃಹರಕ್ಷಕರು, ಗೃಹರಕ್ಷಕಿಯರು ಅಭಿನಂದಿಸಿರುತ್ತಾರೆ.

## ಮಾತು ಬಾರದ ಪುರುಷ ಕಾಣೆ

ಶಿವಮೊಗ್ಗ: ಗಂಗಪ್ಪ ಹತ್ತಿ, ಸುಮಾರು 60 ವರ್ಷ, ಜನ್ನಾಪುರ, ಭದ್ರಾವತಿ ಇವರು 2023 ರ ಡಿ.9 ರಂದು ಶಿವಮೊಗ್ಗ ಕೆ. ಎಸ್. ಆರ್. ಟಿ. ಸಿ ಬಸ್ ನಿಲ್ದಾಣದಿಂದ ಕಾಣೆಯಾಗಿದ್ದಾರೆ.

ಕಾಣೆಯಾದ ಗಂಗಪ್ಪ ಸುಮಾರು 4 ಅಡಿ ಎತ್ತರ, ಸಾಧಾರಣ ಮೈಕಟ್ಟು, ಗೋಧಿ ಬಣ್ಣ, ಕೋಲು ಮುಖ, ಬಿಳಿ ಮತ್ತು ಕಪ್ಪು ಬಣ್ಣದ ಗಡ್ಡ, ತಲೆಯಲ್ಲಿ ಕೆಂಪು ಟೋಪಿ, ಬ್ರೌನ್ ಕಲರ್ ಶರ್ಟ್, ಗ್ರೇ ಕಲರ್ ಪ್ಯಾಂಟ್ ಧರಿಸಿದ್ದು, ಮಾತನಾಡಲು ಬರುವುದಿಲ್ಲ.

ಕೈ ಸನ್ನೆ ಮಾಡುತ್ತಾರೆ. ಈ ವ್ಯಕ್ತಿಯ ಸುಳಿವು ಯಾರಿಗಾದರೂ ಪತ್ತೆಯಾದರೆ ನಗರದ ದೊಡ್ಡಪೇಟೆ ಪೊಲೀಸ್ ಠಾಣೆಗೆ ತಿಳಿಸಬಹುದುದೆಂದು ಪ್ರಕಟಣೆ ತಿಳಿಸಿದೆ.

## ಕುಡಿದ ಮತ್ತಿನಲ್ಲಿ 6 ವರ್ಷದ ಬಾಲಕಿ ಮೇಲೆ ಲೈಂಗಿಕ ಕಿರುಕಳ ; ಯುವಕನ ಬಂಧನ




ತುಮಕೂರು: ಕುಡಿದ ಮತ್ತಿನಲ್ಲಿ 6 ವರ್ಷದ ಬಾಲಕಿ ಮೇಲೆ ಲೈಂಗಿಕ ಕಿರುಕಳ ನಡೆಸಿದ ಆರೋಪದ ಮೇಲೆ ಯುವಕನನ್ನು ಪೊಲೀಸರು ತುಮಕೂರಿನಲ್ಲಿ ಬಂಧಿಸಿದ್ದಾರೆ.

ತುಮಕೂರಿನ ತ್ರಯಂಬಕೇಶ್ವರಿ ನಗರದಲ್ಲಿ ಈ ಘಟನೆ ನಡೆದಿದ್ದು, ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ. ಐ.ಡಿ.ಹಳ್ಳಿ ನಿವಾಸಿ 23 ವರ್ಷದ ಆರೋಪಿ ಪವನ್ ಎಂಬಾತ ಬಾಲಕಿ ತನ್ನ ಮನೆಯ ಮುಂದೆ ಒಂಟಿಯಾಗಿ ಆಟವಾಡುತ್ತಿದ್ದ ಬಾಲಕಿ ಮೇಲೆ ಲೈಂಗಿಕ ಕಿರುಕಳ ವೆಸಗಿದ್ದಾನೆ ಎನ್ನಲಾಗಿದೆ. ಬಾಲಕಿ ನಿವಾಸದಲ್ಲಿ ಯಾರೂ ಇಲ್ಲದಿರುವುದನ್ನು ಗಮನಿಸಿದ್ದ ಪವನ್ ಬಾಲಕಿಯನ್ನು ಬಲವಂತವಾಗಿ ಎತ್ತಿಕೊಂಡು ಒಳಗೆ ಕರೆದೊಯ್ದು ಅತ್ಯಾಚಾರವೆಸಗಿದ್ದಾನೆ.

ಈ ವೇಳೆ ಬಾಲಕಿ ಕಿರುಚಾಡಿ ಸಹಾಯಕ್ಕಾಗಿ ಕೂಗಿಕೊಂಡಿದ್ದು, ನೆರೆಹೊರೆಯವರು ಮತ್ತು ದಾರಿಹೋಕರು ಬಾಲಕಿಯ ಸಹಾಯಕ್ಕೆ ಧಾವಿಸಿ ಆರೋಪಿಯಿಂದ ಬಾಲಕಿಯನ್ನು ರಕ್ಷಿಸಿದ್ದಾರೆ. ಬಳಿಕ ಪೊಲೀಸರಿಗೆ ಮಾಹಿತಿ ನೀಡಿದ್ದು, ವಿಚಾರ ತಿಳಿದ ಕೂಡಲೇ ಸ್ಥಳಕ್ಕೆ ದೌಡಾಯಿಸಿದ ಪೊಲೀಸರು ಅತನನ್ನು ವಶಕ್ಕೆ ಪಡೆದಿದ್ದಾರೆ.

ಸಂತ್ರಸ್ಥ ಬಾಲಕಿಯನ್ನು ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಿದ್ದಾರೆ. ಪೊಲೀಸ್ ಮೂಲಗಳ ಪ್ರಕಾರ ಕುಡುಕನಾದ ಆರೋಪಿ ಪವನ್ ಪಟ್ಟಣದ ಬೀದಿಗಳಲ್ಲಿ ಓಡಾಡಿಕೊಂಡು ಒಂಟಿಯಾಗಿ ಆಟವಾಡುತ್ತಿದ್ದ ಚಿಕ್ಕ ಮಕ್ಕಳನ್ನು ಗುರಿಯಾಗಿಸಿಕೊಂಡು ಕೃತ್ಯ ಎಸಗುತ್ತಿದ್ದು, ಇಂತಹ ಹಲವು ಪ್ರಕರಣಗಳಲ್ಲಿ ಭಾಗಿಯಾಗಿರುವ ಶಂಕೆ ವ್ಯಕ್ತವಾಗಿದೆ ಎಂದು ಮೂಲಗಳು ತಿಳಿಸಿವೆ.

ಈ ಸಂಬಂಧ ತನಿಖೆ ನಡೆಯುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## ಬೆಂಗಳೂರು: ವಿಮಾನ ಟೇಕಾಫ್ ಗೂ ಮುನ್ನ 'ಬಾಂಬ್' ಪದ ಬಳಸಿದ ವ್ಯಕ್ತಿ ಪೊಲೀಸ್ ವಶಕ್ಕೆ



ಬೆಂಗಳೂರು: ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ವಿಮಾನ ಹೊರಡುವುದಕ್ಕೆ ಕೆಲವೇ ಕ್ಷಣಗಳ ಮುನ್ನ, ನಾನೇನು ಬಾಂಬ್ ಅಥವಾ ಚಾಕುವನ್ನು ಹೊತ್ತೊಯ್ಯುತ್ತಿದ್ದೇನೆಯೇ? ಎಂದು ಆಕ್ರೋಶ ವ್ಯಕ್ತಪಡಿಸಿದ ಪ್ರಯಾಣಿಕನನ್ನು ಪೊಲೀಸರು ವಶಕ್ಕೆ ಪಡೆದಿದ್ದು, ಬಳಿಕ ಎಚ್ಚರಿಕೆ ನೀಡಿ ಬಿಟ್ಟು ಕಳುಹಿಸಲಾಗಿದೆ. ಕಳೆದ ಭಾನುವಾರ ಭದ್ರತಾ ತಪಾಸಣೆ ಎಲ್ಲ ಮುಗಿದು ವಿಮಾನದಲ್ಲಿ ಕುಳಿತ ನಂತರವೂ ವಿಮಾನದೊಳಗಿನ ಹೆಚ್ಚುವರಿ ತಪಾಸಣೆಯಿಂದ ಸಿಟ್ಟಿಗೆದ್ದ ಕೊಚ್ಚಿಗೆ ತೆರಳುತ್ತಿದ್ದ ಪ್ರಯಾಣಿಕ ಸಜು ಕೆ ಕುಮಾರನ್ ಅವರು ನಾನೇನು ಬಾಂಬ್ ಅಥವಾ ಚಾಕು ಹೊತ್ತೊಯ್ಯುತ್ತಿದ್ದೇನೆಯೇ? ಎಂದು ಪ್ರಶ್ನಿಸಿದ್ದಾರೆ. ಇದರಿಂದ 38 ವರ್ಷದ ಸಜು ಅವರನ್ನು ಭದ್ರತಾ ಸಿಬ್ಬಂದಿ ವಶಕ್ಕೆ ಪಡೆದು ಏರ್‌ಪೋರ್ಟ್ ಪೊಲೀಸ್ ಠಾಣೆಗೆ ಕರೆದೊಯ್ದಿದ್ದಾರೆ ಎಂದು ಮೂಲಗಳು ತಿಳಿಸಿವೆ. "ಸಜು ಕುಟುಂಬದಲ್ಲಿ ಸಾವು ಸಂಭವಿಸಿದೆ. ಹೀಗಾಗಿ ತರಾತುರಿಯಲ್ಲಿ ಊರಿಗೆ ತೆರಳಲು ಆರೋಪಿ ವಿಮಾನ ಪ್ರಯಾಣ ಆಯ್ಕೆ ಮಾಡಿಕೊಂಡಿದ್ದ. ವಿಮಾನ ನಿಲ್ದಾಣದಲ್ಲಿ ನಿಯಮಿತ ತಪಾಸಣೆಯ ನಂತರ ಸಜು ಕೆ ಕುಮಾರನ್‌ಗೆ ವಿಮಾನ ಹತ್ತಲು ಅನುಮತಿಸಲಾಯಿತು. ಆದರೆ ಭದ್ರತಾ ಸಿಬ್ಬಂದಿ ಮತ್ತೆ ಅವರ ಬ್ಯಾಗ್ ಅನ್ನು ಪರಿಶೀಲಿಸಲು ಬಯಸಿದ್ದರಿಂದ ಅವರು ಆಕ್ರೋಶದಿಂದ ಹಾಗೆ ಹೇಳಿದ್ದಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಆ ವ್ಯಕ್ತಿಯ ವಿರುದ್ಧ ಎಫ್‌ಐಆರ್ ದಾಖಲಾಗಿದ್ದು, ಪ್ರಕರಣದ ತನಿಖೆಗೆ ಅವರ ಉಪಸ್ಥಿತಿಯ ಅಗತ್ಯವಿದ್ದಾಗ ವಿಚಾರಣೆಗೆ ಹಾಜರಾಗುವಂತೆ ಸೂಚಿಸಲಾಗಿದೆ ಎಂದು ಅವರು ಹೇಳಿದ್ದಾರೆ.

## ಎಪಿಎಂಸಿ : ಪರವಾನಿಗೆ ನವೀಕರಿಸಲು ಸೂಚನೆ

ಶಿವಮೊಗ್ಗ: 2014 ರಿಂದ 2024 ನೇ ಸಾಲಿಗೆ ಲೈಸೆನ್ಸ್ ಪಡೆದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ವರ್ತಕರ ಪರವಾನಿಗೆ ಅವಧಿಯು 2024 ರ ಮಾರ್ಚ್ 31 ರಂದು ಮುಕ್ತಾಯಗೊಳ್ಳಲಿದ್ದು ಲೈಸೆನ್ಸ್ ನವೀಕರಿಸಲು ತಿಳಿಸಲಾಗಿದೆ.

ಶಿವಮೊಗ್ಗ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಹಾಗೂ ಶಿವಮೊಗ್ಗ ತಾಲ್ಲೂಕು ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪೇಟೆ ಕಾರ್ಯಕರ್ತರು ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ(ನಿಯಂತ್ರಣ ಮತ್ತು ಅಭಿವೃದ್ಧಿ) ನಿಯಮಾವಳಿ 1966 ರ ಕಲಂ 76(2) ರನ್ವಯ ನಿಗದಿತ ಲೈಸೆನ್ಸ್ ಫಾರಂನ್ನು ಭರ್ತಿ ಮಾಡಿ, ನಿಗದಿತ ಶುಲ್ಕ ಪಾವತಿಸಿ ಅವಶ್ಯಕ ದಾಖಲೆಗಳೊಂದಿಗೆ ಫೆ.29 ರ ಒಳಗಾಗಿ ಕಾರ್ಯದರ್ಶಿ, ಎಪಿಎಂಸಿ, ಶಿವಮೊಗ್ಗ ಮತ್ತು ಉಪನಿರ್ದೇಶಕರು, ಕೃಷಿ ಮಾರಾಟ ಇಲಾಖೆ, ಶಿವಮೊಗ್ಗ ಇವರಿಗೆ ಸಲ್ಲಿಸಬೇಕು. ಫೆ.29 ರ ನಂತರ ಲೈಸೆನ್ಸ್ ನವೀಕರಿಸಲು ಕಾನೂನಿನಲ್ಲಿ ಅವಕಾಶವಿರುದಿಲ್ಲ.

ಹೆಚ್ಚಿನ ಮಾಹಿತಿಗೆ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಕಚೇರಿಯ ಅಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ಹೆಚ್ಚುವರಿ ಎಪಿಎಂಸಿ ನಿರ್ದೇಶಕರು ಹಾಗೂ ಕಾರ್ಯದರ್ಶಿ ತಿಳಿಸಿದ್ದಾರೆ.

# ತುಮಕೂರು ಸರ್ಕಾರಿ ಬಸ್ ನಿಲ್ದಾಣಕ್ಕೆ ದೇವರಾಜ ಅರಸು ನಾಮಕರಣ: ಸಿಎಂ ಸಿದ್ದರಾಮಯ್ಯ

ತುಮಕೂರು: ನಗರದ ನೂತನ ಕೆ.ಎಸ್.ಆರ್ಟಿ.ಸಿ ಬಸ್ ನಿಲ್ದಾಣಕ್ಕೆ ಮಾಜಿ ಮುಖ್ಯ ಮಂತ್ರಿ ಹಾಗೂ ಹಿಂದುಳಿದ ವರ್ಗಗಳ ಮುಖಂಡರಾದ ಡಿ. ದೇವರಾಜ ಅರಸು ಬಸ್ ನಿಲ್ದಾಣ ಎಂದು ನಾಮಕರಣ ಮಾಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ನಗರದ ಸರ್ಕಾರಿ ಜೂನಿಯರ್ ಕಾಲೇಜು ಮೈದಾನದಲ್ಲಿ ಜಿಲ್ಲಾಡಳಿತ ಜಿಲ್ಲಾ ಪಂಚಾಯತ್, ಸ್ಮಾರ್ಟ್ ಸಿಟಿ ಸಹಯೋಗದಲ್ಲಿ ತುಮಕೂರು ಜಿಲ್ಲಾ ವ್ಯಾಪ್ತಿಯ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ ಶಂಕುಸ್ಥಾಪನೆ ಹಾಗೂ ವಿವಿಧ ಯೋಜನೆಗಳ ಫಲಾನುಭವಿಗಳಿಗೆ ಸವಲತ್ತು ವಿತರಿಸಿ ಮಾತನಾಡಿದರು.

ತುಮಕೂರು ನಗರದಲ್ಲಿ ಇಡೀ ಜಿಲ್ಲೆಗೆ ಸರ್ಕಾರದಿಂದ ಕೊಡುವ ಸೌಲಭ್ಯಗಳಡಿ 30 ಸಾವಿರ ಫಲಾನುಭವಿಗಳಿಗೆ ವಿವಿಧ ಸೌಲಭ್ಯಗಳನ್ನು ವಿತರಣೆ ಮಾಡಲಾಗಿದೆ. 657 ಕೋಟಿ 27ಲಕ್ಷ. ರೂ. ವೆಚ್ಚ ತಗುಲಿದೆ. ಜೊತೆಗೆ ನೂತನವಾಗಿ ಬಸ್ ನಿಲ್ದಾಣ ಉದ್ಘಾಟಿಸಲಾಗಿದ್ದು, ಬಸ್ ನಿಲ್ದಾಣಕ್ಕೆ ಡಿ. ದೇವರಾಜ ಅರಸು ಬಸ್ ನಿಲ್ದಾಣ ನಾಮಕರಣ ಮಾಡಲಾಗಿದೆ. ದೇವರಾಜ ಅರಸು ಅವರ ಹೆಸರಲ್ಲಿ ಬಸ್ ನಿಲ್ದಾಣ ಕಾರ್ಯನಿರ್ವಹಿಸಲಿದೆ ಎಂದರು.

ಸರ್ಕಾರದಲ್ಲಿ ಹಣ ಇಲ್ಲ. ಸರ್ಕಾರ ದಿವಾಳಿಯಾಗಿದೆ ಎನ್ನುವವರಿಗೆ ಈ ಕಾರ್ಯಕ್ರಮಗಳೇ ಉತ್ತರ. ನಮ್ಮ ಸರ್ಕಾರ ದಿವಾಳಿಯಾಗಿಲ್ಲ. ಗ್ಯಾರಂಟಿ ಯೋಜನೆ ಜಾರಿ ಮಾಡಲಿಕ್ಕೆ ಸಾಧ್ಯವಿಲ್ಲ. ಜಾರಿಯಾದರೆ ಸರ್ಕಾರ ದಿವಾಳಿಯಾಗಲಿದೆ ಎಂದು ಪ್ರಧಾನಿಯವರೆ ಹೇಳಿದ್ದರು. ಆದರೆ ನಾವು ದಿವಾಳಿಯಾಗಿಲ್ಲ.3.80 ಸಾವಿರ ಕೋಟಿ ಬಜೆಟ್ ಮಂಡಿಸಲಾಗುವುದು ಎಂದರು. ಗ್ಯಾರಂಟಿ ಯೋಜನೆಗಳಿಗೆ ಹಣ ಒದಗಿಸುತ್ತೇವೆ. ಜೊತೆಗೆ ಅಭಿವೃದ್ಧಿ ಕೆಲಸಗಳಿಗೆ ಅನುದಾನ ಬಿಡುಗಡೆ ಮಾಡುತ್ತೇವೆ. ಯಾವುದೆ ಯೋಜನೆ ನಿಂತಿಲ್ಲ ಎಂದರು.

ತುಮಕೂರು ಜಿಲ್ಲೆಯಲ್ಲಿ ಹೆಚ್ಚು ಕಾಂಗ್ರೆಸ್ ಶಾಸಕರನ್ನು ಗೆಲ್ಲಿಸಿದ್ದಾರೆ. ಹಾಗಾಗಿ ನಿಮಗೆಲ್ಲರಿಗೂ ಅಭಿನಂದನೆ. ನಿಮ್ಮೆಲ್ಲರ ಆಶೀರ್ವಾದದಿಂದ ಎರಡನೆ ಬಾರಿ ಮುಖ್ಯಮಂತ್ರಿಯಾಗಿದ್ದೇನೆ. ಅಧಿಕಾರಕ್ಕೆ ಬಂದ ನಂತರ ಎಲ್ಲಾ ಜನಾಂಗಕ್ಕೂ ಅನುಕೂಲ ಮಾಡಲಾಗಿದೆ. ಕಾಂಗ್ರೆಸ್ ಕೊಟ್ಟ ಮಾತಿನಂತೆ 165



ಭರವಸೆಗಳಲ್ಲಿ 158 ಭರವಸೆ ಈಡೇರಿಸಿದ್ದೇವೆ. ಇದರ ಜೊತೆಗೆ ಇನ್ನೂ 20ರಿಂದ 30 ಕಾರ್ಯಕ್ರಮಗಳನ್ನು ಹೆಚ್ಚುವರಿಯಾಗಿ ಕೊಟ್ಟಿದ್ದೇವೆ ಎಂದರು.

ಗೃಹ ಹಾಗೂ ಜಿಲ್ಲಾ ಉಸ್ತು ವಾರಿ ಸಚಿವ ಡಾ.ಜಿ. ಪರಮೇಶ್ವರ್ ಮಾತನಾಡಿ, ಶೋಷಿತರು, ಬಡವರ ಜೀವನಕ್ಕೆ ಕಷ್ಟವಾಗಬಾರದೆಂಬ ಕಾರಣಕ್ಕೆ ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆ ಜಾರಿಗೆ ತರಲಾಗಿದೆ. ತುಮಕೂರು ಜಿಲ್ಲೆಯಲ್ಲಿ ಗೃಹ ಲಕ್ಷ್ಮಿ ಯೋಜನೆಯಡಿ 575373 ಫಲಾನುಭವಿಗಳಿಗೆ 546 ಕೋಟಿ ಹಣ ನೀಡಲಾಗಿದೆ. ಶಕ್ತಿಯೋಜನೆಯಡಿ 3.87 ಲಕ್ಷ ಫಲಾನುಭವಿಗಳು ಸೌಲಭ್ಯ ಪಡೆದಿದ್ದು, ಇದಕ್ಕಾಗಿ 110 ಕೋಟಿ ಖರ್ಚಾಗಿದೆ. ಅಂತೆಯೇ 6.86 ಸಾವಿರ ಫಲಾನುಭವಿಗಳು ವಿದ್ಯುತ್ ಭಾಗ್ಯ ಯೋಜನೆ ಸೌಲಭ್ಯ ಪಡೆದಿದ್ದಾರೆ. ಇನ್ನು ಅನ್ನಭಾಗ್ಯಯೋಜನೆ 5 ಕೆಜಿ ಅಕ್ಕಿ ನೀಡಲಾಗುತ್ತಿದ್ದ, ಉಳಿದ 5 ಕೆಜಿ ಅಕ್ಕಿಗೆ ಹಣವನ್ನು ಕೊಡಲಾಗುತ್ತಿದೆ. ಇದರ ಸೌಲಭ್ಯವನ್ನು 5.98 ಸಾವಿರ ಜನ ಅನುಭವಪಡೆದುಕೊಂಡಿದ್ದಾರೆ ಯುವನಿಧಿ ಯೋಜನೆಯಡಿ ನೋಂದಣಿ ಆರಂಭವಾಗಿದ್ದು 3.400 ನೋಂದಣಿಯಾಗಿದೆ ಎಂದರು.

ಸ್ಮಾರ್ಟ್ ಸಿಟಿಯೋಜನೆಯಡಿ ತುಮಕೂರು ನಗರದಲ್ಲಿ 35 ವಾರ್ಡ್ ಗಳಲ್ಲಿ 6 ವಾರ್ಡ್ ಗಳಿಗೆ ಸ್ಮಾರ್ಟ್ ಸಿಟಿ ಹಣ ಬಂದಿದೆ. ಉಳಿದ ವಾರ್ಡ್ ಗಳು ಅಭಿವೃದ್ಧಿಯಾಗಿಲ್ಲ. ಹಾಗಾಗಿ ಈ ಬಜೆಟ್ ನಲ್ಲಿ 500ಕೋಟಿ ಅನುದಾನ ನೀಡಬೇಕು. ಬೆಂಗಳೂರು ಪರ್ಯಾಯ ಬೆಳೆಯುತ್ತಿರುವ ತುಮಕೂರಿಗೆ ಬೆಂಗಳೂರಿನಿಂದ ಮೆಟ್ರೊ ಯೋಜನೆ ಮಂಜೂರು ಮಾಡಬೇಕು. ಈಗಾಗಲೇ ನಮ್ಮ ಪ್ರಣಾಳಿಕೆಯಲ್ಲಿ ಹೇಳಿದ್ದೇವೆ. ಹಿಂದಿನ ಸರ್ಕಾರ ತುಮಕೂರು ವಿಶ್ವವಿದ್ಯಾಲಯಕ್ಕೆ ಯಾವುದೇ ಹಣ ಕೊಟ್ಟಿಲ್ಲ. ಹಾಗಾಗಿ 200 ಕೋಟಿ ಕೊಡಬೇಕು ಎಂದರು.

ಏಷ್ಯಾದಲ್ಲಿ ಎತ್ತರದ ಮಧುಗಿರಿ ಏಕಶಿಲಾ ಬೆಟ್ಟವಿದೆ. ಅದಕ್ಕೆ ರೂಪ್ ವೇ ಮಾಡಲು ಅನುದಾನ ಕೊಡಬೇಕು. ಕೈಗಾರಿಕಾ ಪ್ರದೇಶ ವಸಂತ ನರಸಾಪುರಕ್ಕೆ ಇಂಟಿಗ್ರೇಟೆಡ್ ಟೌನ್ ಶಿಪ್ ಕೊಡಬೇಕು. ಭದ್ರ ಮೇಲ್ದಂಡೆ ಯೋಜನೆ ನೆನೆಗುದಿಗೆ ಬಿದ್ದಿದೆ ಅದಕ್ಕೆ ಅನುದಾನ ಕೊಡಬೇಕು ಎಂದು ಸಚಿವರು ಮುಖ್ಯ ಮಂತ್ರಿಯವರಲ್ಲಿ ಮನವಿ ಮಾಡಿದರು. ಜಿಲ್ಲಾಡಳಿತದಿಂದ ವಸತಿಯೋಜನೆ, ಹಳ್ಳಿಗಳಿಗೆ ಯಾವುದೇ ಅನುದಾನ ಸಿಗುತ್ತಿಲ್ಲ. ಹಾಗಾಗಿ ಲೆಕ್ಕ ಶೀರ್ಷಿಕೆಯಲ್ಲಿ 200 ಕೋಟಿ ಕೊಡಬೇಕು ಎಂದರು.

ಜಿಲ್ಲಾಡಳಿತ ಭವನಕ್ಕೆ 3 ಕೋಟಿ ಮಂಜೂರು ಮಾಡಬೇಕು ಎಂದ ಅವರು ತುಮಕೂರಿಗೆ ಎತ್ತಿನಹೊಳೆ ಯೋಜನೆ ಮೂಲಕ ಕುಡಿಯುವ ನೀರನ್ನು ಕೊಡಲಾಗಿದೆ ಎಂದು ಜನ ನಿಮ್ಮನ್ನು ಸ್ಮರಿಸಿಕೊಳ್ಳುತ್ತಾರೆ ಎಂದು ಸಿದ್ದರಾಮಯ್ಯ ಅವರನ್ನು ಹೊಗಳಿದರು.

ಸಮಾರಂಭದಲ್ಲಿ ಉಪ ಮುಖ್ಯಮಂತ್ರಿಗಳಾದ ಶ್ರೀ ಡಿ.ಕೆ.ಶಿವಕುಮಾರ್, ಸಹಕಾರ ಸಚಿವ ಕೆ.ಎನ್. ರಾಜಣ್ಣ, ಲೋಕೋಪಯೋಗಿ ಇಲಾಖೆ ಸಚಿವ ರಾಮಲಿಂಗರೆಡ್ಡಿ, ಕಂದಾಯ ಸಚಿವರಾದ ಶ್ರೀ ಕೃಷ್ಣ ಭೈರೆಗೌಡ, ನಗರಾಭಿವೃದ್ಧಿ ಸಚಿವರಾದ ಭೈರತಿ ಸುರೇಶ್ ಸೇರಿದಂತೆ ಹಲವು ಸಚಿವರು, ಜಿಲ್ಲೆಯ ಎಲ್ಲಾ ಶಾಸಕರುಗಳು, ಮುಖಂಡರುಗಳು, ಮಹಿಳೆಯರು, ವಿದ್ಯಾರ್ಥಿಗಳು, ರೈತರು, ಸಾರ್ವಜನಿಕರು ಉಪಸ್ಥಿತರಿದ್ದರು.

# ಲವ್ ಜಿಹಾದ್ ಪ್ರಕರಣ

## ವಿವಾಹಿತ ಮುಸ್ಲಿಂ ಯುವಕನಿಂದ ಹಿಂದೂ ಯುವತಿ ಅಪಹರಣ ಆರೋಪ



ರಾಜ್ಯದಲ್ಲಿ ಆಗಾಗಾಗ ಲವ್ ಜಿಹಾದ್ ಪ್ರಕರಣಗಳು ಬೆಳಕಿಗೆ ಬರುತ್ತಲೇ ಇದೆ. ವಿವಾಹಿತ ಮುಸ್ಲಿಂ ವ್ಯಕ್ತಿಯೊಬ್ಬ ಸಹೋದರಿ ಎನ್ನುತ್ತಲೇ ಹಿಂದೂ ಯುವತಿಯನ್ನು ಬಲೆಗೆ ಕೆಡವಿ ಅಪಹರಿಸಿದ್ದಾನೆ ಎಂಬ ಆರೋಪ ಕೇಳಿಬಂದಿದೆ.

ಗದಗ ಬೆಟಗೇರಿ ಅವಳಿನಗರದ ಮಂಜುನಾಥ್ ನಗರದ 19 ವರ್ಷದ ಯುವತಿ ನಾಪತ್ತೆಯಾಗಿದ್ದು, ಆಕೆಯ ಪೋಷಕರು ಇದು ಲವ್ ಜಿಹಾದ್ ಪ್ರಕರಣ ಎಂದು ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ವಿವಾಹಿತನಾಗಿರುವ 30 ವರ್ಷದ ಅಮೀರ್ ಕುಕನೂರ 19 ವರ್ಷದ ಯುವತಿಯನ್ನು ತಂಗಿ ತಂಗಿ ಎಂದು ಕರೆಯುತ್ತಲೇ ನಾಟಕವಾಡಿ ಆಕೆಯನ್ನು ಪ್ರೀತಿ-ಪ್ರೇಮ ಎಂದು ಬಲೆಗೆ ಕೆಡವಿ ಈಗ ಯುವತಿಯೊಂದಿಗೆ ನಾಪತ್ತೆಯಾಗಿದ್ದಾನೆ. ಅಷ್ಟೇ ಅಲ್ಲ. ಅಮೀರ್ ಜೊತೆ ಇನ್ನೂ ಇಬ್ಬರು ಹಿಂದೂ ಯುವತಿಯರು ಸಂಪರ್ಕದಲ್ಲಿದ್ದಾರೆ. ಜನವರಿ 16ರಿಂದ ತಮ್ಮ ಮಗಳು ಕಿಡ್ನ್ಯಾಪ್ ಆಗಿದ್ದಾಳೆ ಎಂದು ಪೊಲೀಸರಿಗೆ ದೂರಿದ್ದಾರೆ.

ಆದರೆ ಬೆಟಗೇರಿ ಪೊಲೀಸರು ಲವ್ ಜಿಹಾದ್ ಪ್ರಕರಣ ದಾಖಲಿಸದೇ ಯುವತಿ ನಾಪತ್ತೆ ಪ್ರಕರನ ದಾಖಲಿಸಿಕೊಂಡು ನಿರ್ಲಕ್ಷ ವಹಿಸಿದ್ದಾರೆ. ಯುವತಿ ಹುಡುಕಾಡುವ ಪ್ರಯತ್ನವನ್ನೂ ಮಾಡುತ್ತಿಲ್ಲ ಎಂದು ಪೋಷಕರು ಕಣ್ಣೀರಿಟ್ಟಿದ್ದಾರೆ.

# ರಮೇಶ ಕತ್ತಿಗೆ ಬಿಜೆಪಿ ಟಿಕೆಟ್ ನೀಡುವಂತೆ ಬೆಂಬಲಿಗರ ಒತ್ತಾಯ

ಹುಕ್ಕೇರಿ: ತಾಲೂಕಿನ ಬೆಲ್ಲದ ಬಾಗೇವಾಡಿ, ಘೋಡಗೇರಿ, ಎಲಿಮುನ್ನೋಳಿ ಜಿಲ್ಲಾ ಪಂಚಾಯಿತಿ ಕ್ಷೇತ್ರ ಮತ್ತು ಹುಕ್ಕೇರಿ ಪುರಸಭೆ ವ್ಯಾಪ್ತಿಯಲ್ಲಿ ಮಾಜಿ ಸಂಸದರೂ ಆದ ಡಿಸಿಸಿ ಬ್ಯಾಂಕ್ ಅಧ್ಯಕ್ಷ ರಮೇಶ ಕತ್ತಿ ಅವರಿಗೆ ಬಿಜೆಪಿ ಚಿಕ್ಕೋಡಿ ಅಥವಾ ಬೆಳಗಾವಿ ಲೋಕಸಭೆ ಟಿಕೆಟ್ ನೀಡಬೇಕು ಎಂಬ ಬಲವಾದ ಕೂಗು ಕೇಳಿ ಬರುತ್ತಿದೆ. ಈ ನಿಟ್ಟಿನಲ್ಲಿ ಕತ್ತಿ ಬೆಂಬಲಿಗರು ಮತ್ತು ಕಾರ್ಯಕರ್ತರು ಹಾಗೂ ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಆಗ್ರಹಿಸಿದ್ದಾರೆ.



ಪಟ್ಟಣದ ಪಿಎಲ್‌ಡಿ ಬ್ಯಾಂಕ್‌ನ ಸಭಾಗೃಹದಲ್ಲಿ ಮಂಗಳವಾರ ಜಂಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಹಿರಣ್ಯಕೇಶಿ ಸಕ್ಕರೆ ಕಾರ್ಖಾನೆ ನಿರ್ದೇಶಕ ಅಶೋಕ ಪಟ್ಟಣಶೆಟ್ಟಿ, ಪುರಸಭೆ ಸದಸ್ಯ ಮಹಾವೀರ ನಿಲಜಗಿ, ಗ್ರಾಮೀಣ ವಿದ್ಯುತ್ ಸಂಘದ ನಿರ್ದೇಶಕ ರವೀಂದ್ರ ಹಿಡಕಲ್, ಹಿರಿಯ ನ್ಯಾಯವಾದಿ ಬಿ.ಕೆ.ಮಗೆನ್ನವರ, ಶ್ರೀಶೈಲ ಮಠಪತಿ ಸೇರಿದಂತೆ ಬಹುತೇಕ ಮುಖಂಡರು, ರಮೇಶ ಕತ್ತಿ ಅವರ ಸಾಮಾಜಿಕ ಸೇವೆ ಪರಿಗಣಿಸಿ ಅವರಿಗೆ ಲೋಕಸಭೆ ಟಿಕೆಟ್ ನೀಡಬೇಕು ಎಂದು ಒತ್ತಾಯಿಸಿದರು.

ಈ ಹಿಂದಿನ ಚಿಕ್ಕೋಡಿ ಲೋಕಸಭೆ ಕ್ಷೇತ್ರ, ರಾಜ್ಯಸಭೆ ಹಾಗೂ ವಿಧಾನಪರಿಷತ್ ಚುನಾವಣೆಯಲ್ಲಿ ರಮೇಶ ಕತ್ತಿ ಅವರಿಗೆ ಟಿಕೆಟ್ ತಪ್ಪಿಸಲಾಗಿದೆ. ಆದರೂ ಪಕ್ಷದ ವರಿಷ್ಠರ ಮೇಲೆ ಧೃತಿಗೆಡದೇ ಪಕ್ಷದ ಚಟುವಟಿಕೆಯಲ್ಲಿ ಸಕ್ರೀಯವಾಗಿ ಭಾಗಿಯಾಗಿದ್ದಾರೆ. ಸಂಘ ಪರಿವಾರದ ಅನೇಕ ಕಾರ್ಯಕ್ರಮಗಳನ್ನು ಪ್ರಾಮಾಣಿಕವಾಗಿ ಮಾಡುತ್ತಿರುವ ರಮೇಶ ಕತ್ತಿಗೆ ಬೆಳಗಾವಿ ಇಲ್ಲವೇ ಚಿಕ್ಕೋಡಿ ಬಿಜೆಪಿ ಎಂಪಿ ಟಿಕೆಟ್ ನೀಡಬೇಕು.

ಇಲ್ಲದಿದ್ದರೆ ಉಗ್ರ ಹೋರಾಟ ಮಾಡುವುದು ಅನಿವಾರ್ಯ ಎಂದು ಎಚ್ಚರಿಸಿದರು.

2009 ರಿಂದ 2014ರ ಅವಧಿಯಲ್ಲಿ ರಮೇಶ ಕತ್ತಿ ಅವರು ಚಿಕ್ಕೋಡಿ ಕ್ಷೇತ್ರದ ಸಂಸದರಾಗಿ ಮನೆ ಮಾತಾಗಿ ಸಾಕಷ್ಟು ಜನಪರ ಕೆಲಸಗಳನ್ನು ಮಾಡಿದ್ದಾರೆ. ಡಿಸಿಸಿ ಬ್ಯಾಂಕ್ ಅಧ್ಯಕ್ಷರಾಗಿಯೂ ಸುಮಾರು ಎರಡೂವರೆ ದಶಕಕ್ಕೂ ಹೆಚ್ಚು ಕಾಲ ಜಿಲ್ಲೆಯ ರೈತರ ಶ್ರೇಯೋಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ.

ರಾಜಕೀಯ ಹಿನ್ನಲೆ, ಅನುಭವ, ಸಾಮಾಜಿಕ, ಶೈಕ್ಷಣಿಕ, ಧಾರ್ಮಿಕ, ಸಹಕಾರಿ ಹೀಗೆ ವಿವಿಧ ಕ್ಷೇತ್ರಗಳಿಗೆ ಸಲ್ಲಿಸಿದ ಸೇವೆ ಗುರುತಿಸಿ ರಮೇಶ ಕತ್ತಿಗೆ ಲೋಕಸಭೆ ಟಿಕೆಟ್ ನೀಡಬೇಕು ಎಂದು ಪದಾಧಿಕಾರಿಗಳು ಒತ್ತಾಯಿಸಿದರು.

ಹಿರಾಶುಗರ ನಿರ್ದೇಶಕರಾದ ಬಸವರಾಜ ಮರಡಿ, ಅಜ್ಜಪ್ಪ ಕಲ್ಲಟ್ಟಿ, ಸುರೇಂದ್ರ ದೊಡಲಿಂಗನವರ, ಪುರಸಭೆ ಮಾಜಿ ಅಧ್ಯಕ್ಷರಾದ ಎ.ಕೆ.ಪಾಟೀಲ, ವಾಗ್ದೇವಿ ತಾರಳಿ, ಸದಸ್ಯ ರಾಜು ಮುನ್ನೋಳಿ, ಪಿಎಲ್‌ಡಿ ಬ್ಯಾಂಕ್ ನಿರ್ದೇಶಕರಾದ ರಾಚಯ್ಯ ಹಿರೇಮಠ, ಪರಗೌಡ ಪಾಟೀಲ, ಶೀತಲ ಬ್ಯಾಳಿ, ಕೆಎಂಎಫ್ ನಿರ್ದೇಶಕ ರಾಯಪ್ಪಾ ಢೂಗ, ಮುಖಂಡರಾದ ನಜೀರಅಹ್ಮದ ಮೋಮಿನದಾದಾ, ಭೀಮಗೌಡ ಗಿರಿಗೌಡನವರ, ಮಹಾನಿಂಗ ಸನದಿ, ಶಿವನಗೌಡ ಪಾಟೀಲ, ಮುಕುಂದ ಮಠದ, ಸುಚೇತ ಪಾಟೀಲ, ಅಶೋಕ ಅಂಕಲಗಿ, ಬಸವರಾಜ ತಳವಾರ, ಗಿರೀಶ ಪಾಟೀಲ, ಸುನೀಲ ಬೈರನ್ನವರ, ಬಾಹುಬಲಿ ನಾಗನೂರಿ, ಚನ್ನಪ್ಪ ಗಜಬರ, ಸಿದ್ದಪ್ಪ ಹಳಿಜೋಳ, ಮುನ್ನಾ ಕಳಾವಂತ, ಬಸಗೌಡ ಪಾಟೀಲ ಮತ್ತಿತರರು ಉಪಸ್ಥಿತರಿದ್ದರು.

# ಥ್ರೋ-ಬಾಲ್ ಪಂದ್ಯಾಟದಲ್ಲಿ ಪ್ರಥಮ ಸ್ಥಾನ



ಬೆಳಗಾವಿ: ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಕರ್ನಾಟಕ ಉತ್ತರ ಪ್ರಾಂಥ ಇವರು ಶನಿವಾರ ದಿನಾಂಕ 27/01/2024 ರಂದು ರಾಯಚೂರ, ಕೃಷಿ ವಿಜ್ಞಾನ ವಿಶ್ವ ವಿದ್ಯಾಲಯ ಮೈಧಾನ ಇಲ್ಲಿ ಸ್ವಾಮಿ ವಿವೇಕಾನಂದರ ಜಯಂತಿ ಪ್ರಯುಕ್ತ ರಾಜ್ಯ ಮಟ್ಟದ ವಿವೇಕ ಟ್ರೋಫಿ-2024 ಇದರಲ್ಲಿ ಗೋಮಟೇಶ ವಿದ್ಯಾಪೀಠದ, ಗೋಮಟೇಶ ಪಿ.ಯು. ಕಾಲೇಜಿನ ವಿದ್ಯಾರ್ಥಿನಿಯರ ತಂಡ ಥ್ರೋ-ಬಾಲ್ ಪಂದ್ಯಾಟದಲ್ಲಿ ಪ್ರಥಮ ಸ್ಥಾನವನ್ನು ಗಳಿಸಿ ದಿಲ್ಲಿಯಲ್ಲಿ ನಡೆಯುವ ರಾಷ್ಟ್ರಮಟ್ಟದ ಥ್ರೋ-ಬಾಲ್ ಪಂಧ್ಯದಲ್ಲಿ ಭಾಗವಹಿಸುವ ಸಲುವಾಗಿ ಸದರಿ ಕಾಲೇಜಿನ 7 ವಿದ್ಯಾರ್ಥಿನಿಯರು ಆಯ್ಕೇಯಾಗಿದ್ದಾರೆ.

ಸದರಿ ಸಾಧನೆ ಮಾಡಿದ ಕಾಲೇಜಿನ ವಿದ್ಯಾರ್ಥಿನಿಯರಿಗೆ ಗೋಮಟೇಶ ವಿದ್ಯಾಪೀಠದ, ಅಧಿಷ್ಠಾತಾ, ಹಾಗೂ ಮಾಜಿ ಶಾಸಕರು ಆದ ಶ್ರೀ ಸಂಜಯ ಬಿ ಪಾಟೀಲ ಅವರು ಅಭಿನಂದಿಸಿ ಮುಂದಿನ ರಾಷ್ಟ್ರಮಟ್ಟದಲ್ಲಿ ಭಾಗವಹಿಸುವ ವಿದ್ಯಾರ್ಥಿನಿಯರಿಗೆ ಶುಭ ಕೋರಿದ್ದಾರೆ.

ಕಾಲೇಜಿನ ಪ್ರಾಂಶುಪಾಲರಾದ ಶ್ರೀ ಮಹೇಶ ಕಾರೇಕರ, ಶ್ರೀ ಸುನೀಲ ಬಿ ಪಾಟೀಲ, ದೈಹಿಕ ಶಿಕ್ಷಣ ಶಿಕ್ಷಕರಾದ, ಶ್ರೀ ಅನೀಲ ಜನಗೌಡಾ, ಶ್ರೀ ಮಹಾವೀರ ಜನಗೌಡಾ, ಶ್ರೀ ವಿಠ್ಠಲ ಮುರಕುಟೇ, ಶ್ರೀ ಕೀರಣ ತಾಳೇಕರ, ಶ್ರೀ ಮಹಾವೀರ ಬುಡಗೌಡರ, ಶ್ರೀ ನೀತಿನ ನಾಯಕ, ಶ್ರೀ ಸಾಲೋಮನ್, ಎಲ್ಲರು ಮಕ್ಕಳಿಗೆ ಅಭಿನಂದಿಸಿ ಶುಭ ಕೋರಿದ್ದಾರೆ.


# ವಿದ್ಯಾರ್ಥಿನಿಯ ಶವ ಪತ್ತೆ



ತೀರ್ಥಹಳ್ಳಿ: 9ನೇ ತರಗತಿ ವಿದ್ಯಾರ್ಥಿನಿಯೊಬ್ಬಳ ಶವ ನೇಣು ಹಾಕಿಕೊಂಡ ಸ್ಥಿತಿಯಲ್ಲಿ ಸೋಮವಾರ ಬಸವಾನಿ ಸಮೀಪದ ಕಾಡೊಂದರಲ್ಲಿ ಪತ್ತೆಯಾಗಿದೆ.

ತಾಲೂಕಿನ ಬಸವಾನಿ ಗ್ರಾಮಪಂಚಾಯಿತಿ ವ್ಯಾಪ್ತಿಯ ಶುಂಠಿಕಟ್ಟೆ ಪ್ರೌಢ ಶಾಲೆಯಲ್ಲಿ 9ನೇ ತರಗತಿ ಓದುತ್ತಿದ್ದ ಪ್ರೀತಿ ಎಂಬಾಕೆ ಶಾಲೆಗೆ ಕಳೆದ 15 ದಿನಗಳಿಂದ ಹೋಗಿರಲಿಲ್ಲ. ಶಾಲೆಗೆ ಬರುವಂತೆ ತಿಳಿಸಲಾಗಿತ್ತು. ಮನೆಯಲ್ಲಿ ಕಾರಣ ಕೇಳಿದ್ದಕ್ಕೆ ಸೋಮವಾರ ಬಸವಾನಿ ಬಳಿಯ ಪ್ಲಾಂಟೇಷನ್ ನಲ್ಲಿ ಮರಕ್ಕೆ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ತೀರ್ಥಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ.

# ಅವಾಚ್ಯ ಶಬ್ಧ ಬಳಸಿದ ಪ್ರಯಾಣಿಕ: ಚಪ್ಪಲಿ ಸೇವೆ ಮಾಡಿದ ಲೇಡಿ ಕಂಡಕ್ಟರ್



ವಿಜಯಪುರ: ಪ್ರಯಾಣಿಕನೊಬ್ಬ ಅಚಾಚ್ಯ ಶಬ್ಧದಿಂದ ನಿಂದನೆ ಮಾಡಿದ್ದರಿಂದ ಕೆರಳಿದ ಮಹಿಳಾ ಕಂಡಕ್ಟರ್ ನಿಂದಕನಿಗೆ ಚಪ್ಪಲಿಯಿಂದ ಹೊಡೆದಿರುವ ಘಟನೆ ಜಿಲ್ಲೆಯಲ್ಲಿ ನಡೆದಿದೆ.

ವಿಜಯಪುರ ಜಿಲ್ಲೆಯ ಕೊಲ್ಹಾರ ಪಟ್ಟಣಕ್ಕೆ ಬರುತ್ತಿದ್ದ ಸಾರಿಗೆ ಸಂಸ್ಥೆಯ ಬಸ್ ನಲ್ಲಿ ಚಿಲ್ಲರೆ ಹಣ ನೀಡುವ ವಿಷಯವಾಗಿ ಮಹಿಳಾ ಕಂಡಕ್ಟರ್ ಹಾಗೂ ಪ್ರಯಾಣಿಕನ ಮಧ್ಯೆ ಜಗಳ ಆರಂಭಗೊಂಡಿದೆ. ಈ ಹಂತದಲ್ಲಿ ಪ್ರಯಾಣಿಕ ಮಹಿಳಾ ಕಂಡಕ್ಟರ್ ಗೆ ಅವಾಚ್ಯ ಶಬ್ಧದಿಂದ ನಿಂದಿಸಿದ್ದಾನೆ. ಇದರಿಂದ ಕೆರಳಿದ ಮಹಿಳಾ ಕಂಡಕ್ಟರ್ ನಿಂದನೆ ಮಾಡಿದ ಪ್ರಯಾಣಿಕನಿಗೆ ಸಾರ್ವಜನಿಕವಾಗಿಯೇ ಚಪ್ಪಲಿಯಿಂದ ಹೊಡೆದಿದ್ದಾಳೆ.

ಬಸ್ ಇಳಿದು ಬೈಕ್ ಮೇಲೆ ಹೊರಟ ಪ್ರಯಾಣಿಕನನ್ನು ಬಸ್ ಚಾಲಕ ತಡೆದು, ತನ್ನ ಸಹೋದ್ಯೋಗಿಗೆ ಅವಾಚ್ಯ ಶಬ್ಧದಿಂದ ನಿಂದನೆ ಮಾಡಿದ್ದಕ್ಕೆ ಆಕ್ಷೇಪ ವ್ಯಕ್ತಪಡಿಸಿ, ಪೊಲೀಸ್ ಠಾಣೆಗೆ ಬರುವಂತೆ ಪಟ್ಟು ಹಿಡಿದಿದ್ದಾರೆ.

ಈ ಹಂತದಲ್ಲಿ ಪರಿಸ್ಥಿತಿ ವಿಕೋಪಕ್ಕೆ ಹೋಗುವುದನ್ನು ಅರಿತ ಪ್ರಯಾಣಿಕ, ತನ್ನಿಂದ ತಪ್ಪಾಯ್ತು ಬಿಟ್ಟುಬಿಡಿ ಎಂದು ಅಂಗಲಾಚಿದ್ದಾನೆ. ಇಷ್ಟಾದರೂ ಸಿಟ್ಟು ತಣಿಯದ ಲೇಡಿ ಕಂಡಕ್ಟರ್, ತಾನೂ ಅವಾಚ್ಯ ಶಬ್ದಗಳಿಂದ ನಿಂದಿಸಿ, ಚಪ್ಪಲಿಯಿಂದ ಹಲ್ಲೆ ಮಾಡಿದ್ದಾಳೆ. ಘಟನೆಯನ್ನು ವಿಡಿಯೋ ಮಾಡಿದ್ದು, ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ಆದರೆ ಘಟನೆ ಯಾವಾಗ ನಡೆಯಿತು, ನಿಂದಕ ಪ್ರಯಾಣಿಕ ಯಾರು ಎಂಬುದು ನಿಖರವಾಗಿಲ್ಲ.

# ಹನುಮ ಧ್ವಜ ಪ್ರಕರಣದಲ್ಲಿ ಪಿಡಿಓ ಅಮಾನತು

ಮಂಡ್ಯ: ಕೆರಗೋಡು ಹನುಮ ಧ್ವಜ ಪ್ರಕರಣದಲ್ಲಿ ಕೆರಗೋಡು ಗ್ರಾಮ ಪಂಚಾಯತಿಯ ಪಿಡಿಓ ತಲೆದಂಡವಾಗಿದೆ.

ಪಿಡಿಓ ಜೀವನ್ ಬಿ.ಎಂ ಅವರನ್ನು ಐದು ಕಾರಣ ನೀಡಿ ಅಮಾನತು ಮಾಡಲಾಗಿದೆ.

ಮಂಡ್ಯ ಜಿಲ್ಲಾ ಪಂಚಾಯತ್ ಸಿಇಓ ತನ್ವೀರ್ ಆಶೀಫ್ ಸೇಠ್ ಪಿಡಿಓ ಅವರನ್ನು ಅಮಾನತು ಪಡಿಸಿ ಆದೇಶ ಹೊರಡಿಸಿದ್ದಾರೆ. ಗ್ರಾಪಂ ಸ್ವತ್ತನ್ನು ಖಾಸಗಿಯವರಿಗೆ ನೀಡುವುದಕ್ಕೆ ಸರ್ಕಾರದ ಅನುಮತಿ ಕಡ್ಡಾಯ.

ಈ ಪ್ರಕರಣದಲ್ಲಿ ನಿಯಮ ಉಲ್ಲಂಘಿಸಿ ಖಾಸಗಿಯವರಿಗೆ ನೀಡಲಾಗಿದೆ.

ಕೆರಗೋಡು ಗ್ರಾಮದಲ್ಲಿ ನಡೆದ ಸಂಘರ್ಷಕ್ಕೆ ಪಿಡಿಓ ನೇರ ಕಾರಣವಾಗಿದ್ದಾರೆ. ಧ್ವಜ ಸ್ತಂಭ ನಿರ್ಮಾಣಕ್ಕೆ ಅನುಮತಿ ನೀಡಿ ಕರ್ತವ್ಯ ಲೋಪ ಎಸಗಿದ್ದಾರೆ ಎಂದು ಅಮಾನತು ಆದೇಶದಲ್ಲಿ ಉಲ್ಲೇಖಿಸಲಾಗಿದೆ.

ಇಷ್ಟೇ ಅಲ್ಲದೇ ಧ್ವಜ ಸ್ತಂಭದಲ್ಲಿ ರಾಷ್ಟ್ರೀಯ ಧ್ವಜ




ಹಾರಿಸಲು ಅನುಮತಿ ನೀಡಿ, ಷರತ್ತು ಉಲ್ಲಂಘಿಸಿದ್ದರೂ ಕ್ರಮಕೈಗೊಳ್ಳದೆ ಪಿಡಿಓ ನಿರ್ಲಕ್ಷವಹಿಸಿದ್ದಾರೆ.

ರಾಷ್ಟ್ರ ಧ್ವಜದ ಬದಲು ಹನುಮ ಧ್ವಜ ಹಾರಿಸಲು ಅವಕಾಶ ನೀಡಿರುವುದು ಹಾಗೂ ಈ ಬಗ್ಗೆ ಸೂಕ್ತ ಕ್ರಮ ಕೈಗೊಂಡಿಲ್ಲ ಎಂಬ ಕಾರಣ ನೀಡಿ ಪಿಡಿಓ ಅವರನ್ನು ಅಮಾನತು ಮಾಡಿ ಆದೇಶ ಹೊಡಿಸಲಾಗಿದೆ.

# ಗರ್ಭಿಣಿ ಸಾವು; ಚಲಿಸುತ್ತಿರುವ ಬಸ್‌ನಿಂದ ತಳ್ಳಿದ ಪತಿ

ತಮಿಳುನಾಡು: ವ್ಯಕ್ತಿಯೊಬ್ಬ ಚಲಿಸುತ್ತಿರುವ ಬಸ್ಸಿಂದ ತಳ್ಳಿದ ಪರಿಣಾಮ, ಗರ್ಭಿಣಿ ಸಾವನ್ನಪ್ಪಿರುವ ಘಟನೆ ತಮಿಳುನಾಡಿನ ದಿಂಡಿಗಲ್ನಲ್ಲಿ ನಡೆದಿದೆ. ಪತ್ನಿಯ ಸಾವಿಗೆ ಕಾರಣನಾದ ವ್ಯಕ್ತಿಯನ್ನು ಪೊಲೀಸರು ಬಂಧಿಸಿದ್ದಾರೆ.

19 ವರ್ಷದ ವಳರಮತಿ ವೆಂಬರಪಟ್ಟಿಯ ಪಾಂಡಿಯನ್ (24) ಎಂಬಾತನನ್ನು ಮದುವೆಯಾಗಿ ಎಂಟು ತಿಂಗಳಾಗಿತ್ತು. ದಂಪತಿ ದಿಂಡಿಗಲ್‌ನಿಂದ ಪೊನ್ನಮರಾವತಿಗೆ ಉಪನಗರದ ಸರ್ಕಾರಿ ಬಸ್‌ನಲ್ಲಿ



ಪ್ರಯಾಣಿಸುತ್ತಿದ್ದರು. ಮದ್ಯದ ಅಮಲಿನಲ್ಲಿ ಪಾಂಡಿಯನ್ ಐದು ತಿಂಗಳ ಗರ್ಭಿಣಿಯಾಗಿದ್ದ ವಳರಮತಿ ಯೊಂದಿಗೆ ಜಗಳವಾಡಿದ್ದಾನೆ ಎಂದು ವರದಿಗಳು ಹೇಳಿವೆ.

ವಿಷಯಗಳು ಉಲ್ಬಣಗೊಂಡವು ಮತ್ತು ಕೋಪದ ಭರದಲ್ಲಿ, ಪಾಂಡಿಯನ್ ತನ್ನ ಹೆಂಡತಿಯನ್ನು ಕನವೈಪಟ್ಟಿ ಬಳಿ ಚಲಿಸುವ ಬಸ್‌ನಿಂದ ಹೊರಹಾಕಿದ್ದಾನೆ, ಅದು ಆಕೆಯ ಸಾವಿಗೆ ಕಾರಣವಾಯಿತು.

ಘಟನಾ ಸ್ಥಳಕ್ಕೆ ಆಗಮಿಸಿದ ಪೊಲೀಸರು ವಳರಮತಿ ಶವವನ್ನು ಹೊರತೆಗೆದಿದ್ದಾರೆ. ನಂತರ ಆಕೆಯ ಶವವನ್ನು ಮರಣೋತ್ತರ ಪರೀಕ್ಷೆಯ ಮೂಲಕ ಹೆಚ್ಚಿನ ಪರೀಕ್ಷೆಗಾಗಿ ದಿಂಡುಗಲ್ ಸರ್ಕಾರಿ ಆಸ್ಪತ್ರೆಗೆ ರವಾನಿಸಲಾಗಿದೆ. ಘಟನೆಗೆ ಸಂಬಂಧಿಸಿದಂತೆ ಪ್ರಕರಣ ದಾಖಲಾಗಿದ್ದು, ಪಾಂಡಿಯನ್ನನ್ನು ಬಂಧಿಸಲಾಗಿದೆ. ಪ್ರಕರಣದಲ್ಲಿ ಹೆಚ್ಚಿನ ತನಿಖೆ ನಡೆಯುತ್ತಿದೆ.

# ವಿಮಾನ ನಿಲ್ದಾಣದ ಭದ್ರತಾ ಲೋಪ ಹೆಡ್‌ಕಾನ್‌ಸ್ಟೇಬಲ್ ಅಮಾನತು




ನವದೆಹಲಿ: ದೆಹಲಿ ವಿಮಾನ ನಿಲ್ದಾಣದ ಕಂಪೌಂಡ್ ಏರಿ ರನ್ ವೇ ಗೆ ವ್ಯಕ್ತಿಯೊಬ್ಬ ಎಂಟ್ರಿ ಪಡೆದ ಗಂಭೀರ ಭದ್ರತಾ ಲೋಪದ ಮೇಲೆ ಹೆಡ್ ಕಾನ್ಸ್ಟಬಲ್ ಒಬ್ಬರನ್ನು ಸೇವೆಯಿಂದ ಅಮಾನತುಗೊಳಿಸಲಾಗಿದೆ.

ಅತಿಸೂಕ್ಷ್ಮ ಇಂದಿರಾಗಾಂಧಿ ಅಂತರಾಷ್ಟ್ರೀಯ (ಐಎಐ) ವಿಮಾನ ನಿಲ್ದಾಣವನ್ನು ಭದ್ರಪಡಿಸುವ ಜವಾಬ್ದಾರಿಯನ್ನು ಹೊಂದಿರುವ ಕೇಂದ್ರೀಯ ಕೈಗಾರಿಕಾ ಭದ್ರತಾ ಪಡೆಯ ಹೆಡ್ ಕಾನ್ಸ್ಟಬಲ್ನನ್ನು ಅಮಾನತುಗೊಳಿಸಲಾಗಿದೆ. ಏರ್ ಇಂಡಿಯಾ ವಿಮಾನದ ಪೈಲಟ್ ರನ್ವೇಯಲ್ಲಿ ಪಾನಮತ್ತನಾಗಿದ್ದ ಬಿದ್ದಿದ್ದ ವ್ಯಕ್ತಿಯೊಬ್ಬರನ್ನು ಗುರುತಿಸಿ ಪೈಲಟ್ ಏರ್ ಟ್ರಾಫಿಕ್ ಕಂಟ್ರೋಲ್ (ಎಟಿಸಿ) ಗೆ ಮಾಹಿತಿ ನೀಡಿದ್ದರು.

ಹರಿಯಾಣ ಮೂಲದ ವ್ಯಕ್ತಿಯನ್ನು ಸೆಂಟ್ರಲ್ ಇಂಡಸ್ಟ್ರಿಯಲ್ ಸೆಕ್ಯುರಿಟಿ ಫೋರ್ಸ್ (ಸಿಐಎಸ್‌ಎಫ್) ಸಿಬ್ಬಂದಿ ಹಿಡಿದು ದೆಹಲಿ ಪೊಲೀಸರಿಗೆ ಒಪ್ಪಿಸಿದ್ದರು. ಅರೆಸೈನಿಕ ಪಡೆ ಅತಿಸೂಕ್ಷ್ಮ ನಾಗರಿಕ ವಿಮಾನಯಾನ ಸೌಲಭ್ಯದಲ್ಲಿ ಗಂಭೀರ ಭದ್ರತಾ ಉಲ್ಲಂಘನೆಯ ಬಗ್ಗೆ ವಿಚಾರಣೆಯನ್ನು ಪ್ರಾರಂಭಿಸಿತು ಮತ್ತು ಆ ದಿನ ಕರ್ತವ್ಯದಲ್ಲಿದ್ದ ಹೆಡ್ ಕಾನ್ಸ್ಟಬಲ್ನನ್ನು ಅಮಾನತುಗೊಳಿಸಿದೆ ಎಂದು ಮೂಲಗಳು ಪಿಟಿಐಗೆ ತಿಳಿಸಿವೆ.

ತೀವ್ರ ಶೀತ ಹವಾಮಾನ ಮತ್ತು ಮಂಜುಗಡ್ಡೆಯ ದೃಷ್ಟಿಯಿಂದ ವಿಧ್ವಂಸಕ ಚಟುವಟಿಕೆಗಳನ್ನು ಪರಿಶೀಲಿಸಲು ವಿಶೇಷ ಕ್ರಮಗಳೊಂದಿಗೆ ನಡೆಯುತ್ತಿರುವ ಗಣರಾಜ್ಯೋತ್ಸವದ ಆಚರಣೆಗಾಗಿ ಭದ್ರತಾ ಏಜೆನ್ಸಿಗಳು ಹೈ-ಅಲರ್ಟ್ ಅನ್ನು ಧ್ವನಿಸಿದಾಗ ಆತಂಕಕಾರಿ ಘಟನೆ ಸಂಭವಿಸಿದೆ ಎಂದು ಹಿರಿಯ ಅಕಾರಿಯೊಬ್ಬರು ತಿಳಿಸಿದ್ದಾರೆ.

ಇಂದಿರಾಗಾಂಧಿ ಅಂತರಾಷ್ಟ್ರೀಯ (ಐಎಐ) ವಿಮಾನ ನಿಲ್ದಾಣಕ್ಕೆ ಭಯೋತ್ಪಾದನಾ ನಿಗ್ರಹ ಭದ್ರತೆಯನ್ನು ಒದಗಿಸುತ್ತದೆ ಮತ್ತು ಅದರ ಸುತ್ತಳತೆಯ ಗೋಡೆಯನ್ನು ಭದ್ರಪಡಿಸುವ ಜವಾಬ್ದಾರಿಯನ್ನು ಹೊಂದಿದೆ.

# ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನ

ಬೆಳಗಾವಿ: ಹಲವು ಶತಮಾನಗಳಿಂದ ಮೂಢನಂಬಿಕೆಯ ನೆರಳಿನಲ್ಲಿ ಹರಡುತ್ತಿರುವ ಕುಷ್ಠರೋಗವನ್ನು ಮನೆ ಮನೆಗೆ ಭೇಟಿ ನೀಡಿ ಆರೋಗ್ಯ ವಿಚಾರವನ್ನು ಜನಸಾಮಾನ್ಯರಿಗೆ ರೋಗಗಳ ಅರಿವು ಮೂಡಿಸಿದಾಗ ಜನರು ಜಾಗೃತಿಗೊಳ್ಳುತ್ತಾರೆ. ರೋಗಗಳ ನಿಯಂತ್ರಣ ಮತ್ತು ನಿರ್ಮೂಲನೆಗೆ ಎಲ್ಲರೂ ಸೇರಿ ಶ್ರಮಿಸೋಣ ಎಂದು ಜಿಲ್ಲೆಯ ಯು. ಎಸ್.ಎಮ್. ಕೆ.ಎಲ್.ಇ ಅಂತರಾಷ್ಟ್ರೀಯ ವೈದ್ಯಕೀಯ ಕಾರ್ಯಕ್ರಮ ನಿರ್ದೇಶಕರಾದ ಡಾ.ಹೆಚ್.ಬಿ.ರಾಜಶೇಖರ ಎಂದರು.

ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಕುಷ್ಠರೋಗ ನಿಯಂತ್ರಣ ಅಧಿಕಾರಿ ಕಚೇರಿ ವತಿಯಿಂದ ಮಂಗಳವಾರ (ಜ.30) ರಂದು ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮದಡಿ ಸ್ಪರ್ಶ ಕುಷ್ಟರೋಗ ಅಭಿಯಾನವನ್ನು ಉದ್ಘಾಟಿಸಿ ಮಾತನಾಡಿದರು.

ಪ್ರಾರಂಭದ ಹಂತದಲ್ಲಿ ರೋಗವನ್ನು ಪತ್ತೆ ಮಾಡಿ, ತ್ವರಿತ ಚಿಕಿತ್ಸೆ ನೀಡಿದಾಗ ಮಾತ್ರ



ಕುಷ್ಠರೋಗ ಹಾಗೂ ಇತರೆ ಖಾಯಿಲೆಗಳನ್ನು ಗುಣಪಡಿಸಬಹುದಾಗಿದೆ. ಆರೋಗ್ಯ ಇಲಾಖೆ ಕೈಗೊಂಡಿರುವ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮದಡಿ ನಾವು ಸದಾ ಸಹಕಾರ ನೀಡಿದ್ದೇವೆ.

ಮೈಲಿಬೇನೆ, ಪೋಲಿಯೋ ರೋಗಗಳನ್ನು ಆರೋಗ್ಯ ಇಲಾಖೆ ಮತ್ತು ಸಂಘ ಸಂಸ್ಥೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ಅವಿರತ ಶ್ರಮದ ಸಹಯೋಗದಲ್ಲಿ ನಿರ್ಮೂಲನೆಯಾಗಿದೆ ಎಂದರು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ.ಮಹೇಶ ಕೋಣಿ ಅವರು ಮಾತನಾಡಿ, ಮಾಹತ್ಮಾ ಗಾಂಧೀಜಿ ಹುತಾತ್ಮರಾದ ದಿನದ ಅಂಗವಾಗಿ ಜ.30 ರಿಂದ ಫೆ. 13 ರವರೆಗೆ ಜಿಲ್ಲೆಯಲ್ಲಿ ಸರ್ಕಾರದ ಮಾರ್ಗಸೂಚಿಯಂತೆ ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನವನ್ನು ಹಮ್ಮಿಕೊಂಡಿದ್ದು ಸ್ಪರ್ಶ ಜ್ಞಾನವಿಲ್ಲದ ತಿಳಿ ಬಿಳಿ ತಾರ್ಮ ವರ್ಣದ ಮಚ್ಚೆಗಳು ಶರೀರದ ಯಾವುದೇ ಭಾಗದಲ್ಲಿ ಕಂಡುಬಂದಿದ್ದರೂ, ಅವು ಸಂಶಯಾಸ್ಪದವಾಗಿ ಕುಷ್ಠರೋಗವಾಗಿರಬಹುದು.

ಆದ್ದರಿಂದ ಆಶಾ ಆರೋಗ್ಯ ಇಲಾಖೆ ಅಧಿಕಾರಿಗಳು ಅಥವಾ ಸಿಬ್ಬಂದಿಗಳನ್ನು ಭೇಟಿ ಮಾಡಿ ಚಿಕಿತ್ಸೆ ಪಡೆದುಕೊಳ್ಳಲು ಸಾರ್ವಜನಿಕರಿಗೆ ತಿಳಿಸಿದರು.

ಪ್ರಾಸ್ತಾವಿಕವಾಗಿ ಜಿಲ್ಲಾ ಕುಷ್ಠರೋಗ ನಿರ್ಮೂಲನಾ ಅಧಿಕಾರಿಗಳಾದ ಡಾ.ಗೀತಾ ಕಾಂಬಳೆ ಇವರು ಮಾತನಾಡಿ, ಜಿಲ್ಲೆಯಲ್ಲಿ ಕುಷ್ಠರೋಗದ ಅಂಕಿ-ಅಂಶಗಳ ಕುರಿತು ತಿಳಿಸಿದರು "ಕಳಂಕವನ್ನು ಕೊನೆಗೊಳಿಸಿ ಘನತೆಯನ್ನು ಎತ್ತಿಹಿಡಿರಿ" ಎಂಬ ಈ ವರ್ಷದ ಘೋಷವಾಕ್ಯದ ಕುರಿತು ಮಾತನಾಡಿ,

ಅದರಂತೆ ಕು ಷ್ಠರೋಗ ನಿರ್ಮೂಲನಾ ಕಾರ್ಯಕ್ರಮದಡಿ ಹೊಸ ಕುಷ್ಠರೋಗ ಪ್ರಕರಣಗಳನ್ನು ಪತ್ತೆ ಹಚ್ಚಿ ಅತ್ಯುತ್ತಮ ಸೇವೆ ಸಲ್ಲಿಸುತ್ತಿರುವ ಅಧಿಕಾರಿಗಳು, ಸಿಬ್ಬಂದಿಗಳಿಗೆ ಸಂಘ ಸಂಸ್ಥೆಗಳಿಗೆ ಹಾಗೂ ಆಶಾ ಕಾರ್ಯಕರ್ತೆಯರಿಗೆ ನೆನಪಿನ ಕಾಣಿಕೆ ಹಾಗೂ ಪ್ರಶಸ್ತಿ ಫಲಕ ನೀಡಿ ಸನ್ಮಾನಿಸಲಾಯಿತು.

ಈ ವೇಳೆ ತಾಲೂಕ ಆರೋಗ್ಯ ಅಧಿಕಾರಿ ಡಾ. ಸಂಜಯ ಡುಮ್ಮಗೋಳ, ಯಳ್ಳೂರು ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ರಮೇಶ ದಂಡಗಿ, ಕೆ.ಎಲ್.ಇ ಶತಮಾನೋತ್ಸವ ಚಾರಿಟೇಬಲ್ ಆಸ್ಪತ್ರೆ ಮತ್ತು ವೈದ್ಯಕೀಯ ಸಂಶೋಧನಾ ಕೇಂದ್ರ ನಿಯೋಜಿತ ನಿರ್ದೇಶಕ ಡಾ. ಆರ್.ಜಿ.ನೆಲವಿಗಿ,ಹಿಂಡಲಗಾ ಕುಷ್ಠರೋಗ ಆಸ್ಪತ್ರೆ ವೈದ್ಯಾಧಿಕಾರಿ ಡಾ. ಸುರೇಶ ವರ್ಗಿಸ್, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾಜಿ ಮಳಗನ್ನವರ, ಜಾನಕಿ ಸೇವಾ ಸಂಸ್ಥೆ ಅಧಿಕಾರಿ ಡಾ. ಉಮೇಶ ಆಚಾರ್ಯ ಸೇರಿದಂತೆ ಹಲವರಿದ್ದರು.

ಜಿಲ್ಲಾ ಕುಷ್ಠರೋಗ ನಿರ್ಮೂಲನಾ ಅಧಿಕಾರಿ ಕಚೇರಿಯ ಸಹಾಯಕ ಭರತ ಹೆಚ್.ಬಿ ನಿರೂಪಿಸಿ ಸ್ವಾಗತಿಸಿದ್ದರು, ಆರೋಗ್ಯ ನಿರೀಕ್ಷಣಾಧಿಕಾರಿ ಅರುಣ ಮನೋಳಿ ವಂದಿಸಿದರು.

NEWS

ಬೆಳಗಾವಿ ವರದಿ

WEDNESDAY, 31 JANUARY 2024

## ಉಳುಮೆ ಮಾಡುವಾಗ ಟ್ರ್ಯಕ್ಟರ್ ಪಲ್ಟಿಯಾಗಿ ಚಾಲಕ ಸಾವು



ಚಾಮರಾಜನಗರ: ಜಮೀನಿನಲ್ಲಿ ಉಳುಮೆ ಮಾಡುವಾಗ ಟ್ರ್ಯಕ್ಟರ್ ಪಲ್ಟಿಯಾಗಿ ಚಾಲಕ ಸ್ಥಳದಲ್ಲೇ ದುರ್ಮರಣ ಹೊಂದಿರುವ ಘಟನೆ ಗುಂಡ್ಲುಪೇಟೆ ತಾಲೂಕಿನಲ್ಲಿನ ಮಡಹಳ್ಳಿ ಗ್ರಾಮದ ಜಮೀನೊಂದರಲ್ಲಿ ನಡೆದಿದೆ.

ಮಡಹಳ್ಳಿ ಗ್ರಾಮದ ಮಾದಪ್ಪ(53) ಮೃತ ವ್ಯಕ್ತಿಯಾಗಿದ್ದು, ಈತ ಮಡಹಳ್ಳಿಯ ಚೇತನ ಎಂಬುವವರ ಜಮೀನಿನಲ್ಲಿ ಟ್ರ್ಯಕ್ಟರ್ ಮೂಲಕ ಉಳುಮೆ ಮಾಡುತ್ತಿದ್ದ ವೇಳೆ ತಿರುವಿನಲ್ಲಿ ಟ್ರ್ಯಕ್ಟರ್ ಮಗುಚಿ ಬಿದ್ದಿದೆ.

ಟ್ರಾಕ್ಟರ್ ಕೆಳಗೆ ಚಾಲಕ ಸಿಲುಕಿ ಹಾಕಿಕೊಂಡ ಪರಿಣಾಮ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

ಘಟನೆ ಮಾಹಿತಿ ಅರಿತ ಸುತ್ತಮುತ್ತಲಿನ ಜಮೀನು ಮಾಲೀಕರು ಹಾಗೂ ರೈತರು ಕೂಡಲೇ ಸ್ಥಳಕ್ಕೆ ದೌಡಾಯಿಸಿ ಚಾಲಕನನ್ನು ಟ್ರ್ಯಕ್ಟರ್ನಿಂದ ಹೊರ ತೆಗೆದರು ಕೂಡ ಯಾವುದೇ ಪ್ರಯೋಜನವಾಗಲಿಲ್ಲ. ಘಟನೆ ಅರಿತ ಗುಂಡ್ಲುಪೇಟೆ ಠಾಣೆ ಪೊಲೀಸರು ಸ್ಥಳಕ್ಕೆ ದೌಡಾಯಿಸಿ ಚಾಲಕನ ಮೃತ ದೇಹವನ್ನು ಗುಂಡ್ಲುಪೇಟೆ ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ಮರಣೋತ್ತರ ಪರೀಕ್ಷೆಗೆ ರವಾನಿಸಿದ್ದಾರೆ. ನಂತರ ಟ್ರಾಕ್ಟರ್ ಅನ್ನು ವಶಕ್ಕೆ ಪಡೆದ ಪೊಲೀಸರು ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

## ಶಿಕ್ಷಣ ಪ್ರೇಮಿ ರವೀಂದ್ರ ಶೆಟ್ಟಿ ಕಾರ್ಯ ಅಜರಾಮರ: ಘೋಡಗೇರಿ ಮಲ್ಲಯ್ಯಾ ಶ್ರೀ

ಹುಕ್ಕೇರಿ: ಮನುಷ್ಯ ಮಾಡುವ ಕಾರ್ಯ ತಲೆ ತಲಾಂತರ, ನಿರಂತರ ಜನಮಾನಸದಲ್ಲಿ ನೆಲೆಯೂರುವಂತಿರಬೇಕು ಎಂದು ಘೋಡಗೇರಿ ಮಲ್ಲಯ್ಯಾ ಸ್ವಾಮೀಜಿ ಹೇಳಿದರು.

ಪಟ್ಟಣದ ಶಿಕ್ಷಣ ಪ್ರೇಮಿ ರವೀಂದ್ರ ಶೆಟ್ಟಿ ಅವರ ನಾಲ್ಕನೇ ಪುಣ್ಯಸ್ಮರಣೆ ನಿಮಿತ್ತ ಎಸ್.ಕೆ ಹೈಸ್ಕೂಲ್‌ನ ಚೆಣ್ಣರ ಭವನದಲ್ಲಿ ಮಂಗಳವಾರ ಏರ್ಪಡಿಸಿದ ರಕ್ತದಾನ ಶಿಬಿರ ಮತ್ತು ಕಣ್ಣಿನ ಉಚಿತ ತಪಾಸಣೆ ಹಾಗೂ ಚಿಕಿತ್ಸೆಯ ಸಾನಿಧ್ಯ ವಹಿಸಿ ಮಾತನಾಡಿದ ಅವರು, ಉತ್ತಮ ಗುರಿಯೊಂದಿಗೆ ಸೇವಾ ಮನೋಭಾವನೆಯೊಂದಿಗೆ ತಮ್ಮನ್ನು ತೊಡಗಿಸಿಕೊಂಡು ಮಕ್ಕಳಿಗೆ ಶಿಕ್ಷಣ ನೀಡಿದ್ದ ರವಿಂದ್ರ ಶೆಟ್ಟಿ ಅವರ ಕಾರ್ಯಗಳು ಅಜರಾಮರವಾಗಿವೆ ಎಂದರು.

ಎಸ್.ಕೆ.ಪಬ್ಲಿಕ್ ಸ್ಕೂಲ್ ಚೇರಮನ್ ಪಿಂಟು ಶೆಟ್ಟಿ ಮಾತನಾಡಿ, ನಮ್ಮ ತಂದೆಯೇ ನಮಗೆ ಹಿರೋ. ರೋಲ್ ಮಾಡೆಲ್. ಅವರ ಇಚ್ಛೆಯಂತೆ ಫೌಂಡೇಶನ ಮೂಲಕ ಈಗಾಗಲೇ ಗ್ರಾಮೀಣ ಬಡ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಶಿಷ್ಯವೇತನ, ಕ್ರೀಡಾ ಸಲಕರಣೆಗಳ ವಿತರಣೆ, ಸಸಿ ನೆಡುವುದು, ಅರಿವು ಮೂಡಿಸುವ



ಜಾಗೃತಿ ಕಾರ್ಯಕ್ರಮ ಹೀಗೆ ಹಲವು ಸಾಮಾಜಿಕ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿದೆ. ಈ ಮೂಲಕ ಪುಣ್ಯತಿಥಿಯನ್ನು ಅರ್ಥಪೂರ್ಣವಾಗಿ ಆಚರಿಸಲಾಗಿದೆ ಎಂದರು.

ನೀಲಾಂಬಿಕಾ ಶೆಟ್ಟಿ ಅಧ್ಯಕ್ಷತೆ ವಹಿಸಿದ್ದರು. ಹಿರಿಯ ನ್ಯಾಯವಾದಿ ರಾಮಚಂದ್ರ ಜೋಶಿ, ಸಿ.ಎಸ್.ತುಬಚಿ ಶಿಕ್ಷಣ ಸಂಸ್ಥೆ ಅಧ್ಯಕ್ಷ ಅನಿಲ ಶೆಟ್ಟಿ, ನಿವೃತ್ತ ಶಿಕ್ಷಕ ಎಸ್.ಬಿ.ಬುರ್ಜಿ, ನೇತ್ರ ತಜ್ಞ ಇಂದ್ರಜೀತ ಶಿಂಧೆ, ಸೀಮಾ ಶೆಟ್ಟಿ, ಸಾನ್ವಿ ಶೆಟ್ಟಿ, ಸುಜಾತ ಶೆಟ್ಟಿ ಮಾತನಾಡಿದರು.

ಪುಣೆ ವಿಶ್ವವಿದ್ಯಾಲಯ ನಿರ್ದೇಶಕ ಡಾ.ಸತೀಶ ಘಾಳಿ, ಮಹಾವೀರ ಉದ್ಯೋಗ ಸಮೂಹ ಸಂಸ್ಥೆ ಅಧ್ಯಕ್ಷ ಮಹಾವೀರ ನಿಲಜಗಿ, ಪದವಿ ಕಾಲೇಜಿನ ಪ್ರಾಚಾರ್ಯ ಸರ್ವಮಂಗಳ ಕಮತಗಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ವಿಜಯ ರವದಿ, ಪುರಸಭೆ ಸದಸ್ಯರಾದ ಎ.ಕೆ.ಪಾಟೀಲ, ಆನಂದ ಗಂಧ, ಎಸ್.ಕೆ.ಪಬ್ಲಿಕ್ ಸ್ಕೂಲ ನಿರ್ದೇಶಕರಾದ ಆನಂದ ಪಟ್ಟಣಶೆಟ್ಟಿ, ಸುಹಾಸ ನೂಲಿ, ಓಂಕಾರ ಹೆದ್ದೂರಶೆಟ್ಟಿ, ಅಪ್ಪು ತುಬಚಿ, ಮುಖಂಡರಾದ ಪರಗೌಡ ಪಾಟೀಲ, ಪ್ರಭು ಸಾಂಬಾರೆ, ಮಹಾಂತೇಶ ವಸ್ತೊದ, ಬಸವರಾಜ ಗಂಧ, ವಿರೇಶ ಗಜಬರ, ಮಹಾಂತೇಶ ಹಿರೇಮಠ, ಬಿ.ಎಸ್.ಪಾಟೀಲ, ದಯಾನಂದ ಹಿರೇಮಠ, ಎ.ಬಿ.ಪಾಟೀಲ, ಶಂಕರ ಅಲಗರಾಹುತ ಮತ್ತಿತರರು ಉಪಸ್ಥಿತರಿದ್ದರು.

ಪ್ರಾಂಶುಪಾಲ ರಾಘವೇಂದ್ರ ಕುಲಕರ್ಣಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಿಎಡ್ ಕಾಲೇಜಿನ ಪ್ರಾಚಾರ್ಯ ಎಸ್.ಆರ್.ಗಸ್ತಿ ನಿರೂಪಿಸಿದರು.

ಸಿ.ಆರ್.ಶೆಟ್ಟಿ ಫೌಂಡೇಶನ್, ಎಸ್.ಎಸ್.ಎನ್ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯ, ಗೋಕಾಕ ಬ್ಲಡ್ ಬ್ಯಾಂಕ್ ಹಾಗೂ ಎಂ.ಎಮ್.ಜೋಶಿ ಐ ಫೌಂಡೇಶನ್ ಹುಕ್ಕೇರಿ ಶಾಖೆ ಆಶ್ರಯದಲ್ಲಿ ಏರ್ಪಡಿಸಿದ ಈ ಶಿಬಿರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಜನರು ಪಾಲ್ಗೊಂಡಿದ್ದರು.

## ಪ್ರತಿಭೆ ಹೊರಹೊಮ್ಮಲು ಪಾಲಕರ ಪ್ರೋತ್ಸಾಹ ಅತ್ಯವಶ್ಯ

ಬೆಳಗಾವಿ: ಕಲರ್ ಮರಾಠಿ ದೂರದರ್ಶನದಲ್ಲಿ ಸೂರ ನವಾ ಧ್ಯಾಸ ನವಾ ರಿಯಾಲಿಟಿ ಸಂಗೀತ ಶೋದಲ್ಲಿ ಬಾಲ ಪ್ರತಿಭೆ ಕು. ಅಂತರಾ ಕುಲಕರ್ಣಿ ಕರ್ನಾಟಕ ಪ್ರತಿನಿಧಿಸಿ ದ್ವಿತೀಯ ಬಹುಮಾನ ಪಡೆದ ಪ್ರಯುಕ್ತ ನಗರದ ಫ್ಯಾನ್ ಕ್ಲಬ್ ಆಫ್ ಓಲ್ಡ್ ಸಾಂಗ್ಸದವರು ಅವಳಿಗೆ ಗೌರವ ಸನ್ಮಾನವನ್ನು ಹಿಂದವಾಡಿಯಲ್ಲಿರುವ ಐ.ಎಂ.ಇ.ಆರ್. ಸಭಾ ಭವನದಲ್ಲಿ ಹಮ್ಮಿಕೊಂಡಿದ್ದರು.

ಕಲರ ಮರಾಠಿ ದೂರದರ್ಶನದ ಸೂರ ನವಾ ಧ್ಯಾಸ ನವಾ ರಿಯಾಲಿಟಿ ಸಂಗೀತ ಶೋದಲ್ಲಿ ಮಹೇಶ ಕಾಳೆ ಮತ್ತು ಅವಧೂತ ಗುಪ್ತೆ ಸ್ಪರ್ಧೆಯ ನಿರ್ಣಾಯಕರಾಗಿ ಆಗಮಿಸಿದ್ದರು. 15 ಸ್ಪರ್ಧೆಗಳಲ್ಲಿ ಕು. ಅಂತರಾ ಕುಲಕರ್ಣಿ ಅತ್ಯಂತ ಕಿರಿಯವಳಾಗಿದ್ದಳು.




ಶ್ರೀಮತಿ ಮಂಜೂಷಾ ಖೋತ ಅವರಿಂದ ಶಾಸ್ತ್ರೀಯ ಸಂಗೀತ ಕಲಿತಿದ್ದು ರಫೀಕ ಶೇಖ ಅವರಿಂದ ಧ್ವನಿ ತರಬೇತಿಯನ್ನು ಪಡೆದಿದ್ದಾಳೆ. ಈ ಶೋದಲ್ಲಿ ಮಾಧುರಿ ದೀಕ್ಷಿತ, ಸುರೇಶ ವಾಡಕರ, ಸಾಧನಾ ಸರಗಮ, ನಾನಾ ಪಾಟೇಕರ, ಭರತ ಜಾಧವ, ಅಶೋಕ ಸರಾಫ ಮುಂತಾದ ಗಣ್ಯರು ಉಪಸ್ಥಿತರಿದ್ದರು.

ಕರ್ನಾಟಕವನ್ನು ಪ್ರತಿನಿಧಿಸಿ ಸ್ಪರ್ಧೆಯಲ್ಲಿ ಗೆಲವನ್ನು ಸಾಧಿಸಿದ ಕು. ಅಂತರಾ ಕುಲಕರ್ಣಿ ಇವಳನ್ನು ಹಿರಿಯ ನ್ಯಾಯವಾದಿ ಎಸ್. ಎಂ. ಕುಲಕರ್ಣಿಯವರು ಶಾಲು ಹೊದಿಸಿ, ಹಾರ ಹಾಕಿ ನೆನಪಿನ ಕಾಣಿಕೆಯನ್ನು ನೀಡಿ ಸನ್ಮಾನಿಸಿದರು. ಸನ್ಮಾನಿಸಿ ಮಾತನಾಡಿದ ಕುಲಕರ್ಣಿಯವರು ಇಂದಿನ ತಾಂತ್ರಿಕ ಯುಗದಲ್ಲಿ ಮಕ್ಕಳು ತಮ್ಮಲ್ಲಿರುವ ಪ್ರತಿಭೆಗಳನ್ನು ಹಂಚಿಕೊಳ್ಳಲು ಸಾಕಷ್ಟು ಮಾರ್ಗಗಳಿವೆ. ಅಲ್ಲದೇ ಕಡಿಮೆ ವೆಚ್ಚದಲ್ಲಿ ಕೆಲವೇ ಕ್ಷಣಗಳಲ್ಲಿ ವಿಶ್ವದಾದ್ಯಂತದ ಜನರಿಗೆ ನಮ್ಮಲ್ಲಿರುವ ಕಲೆಯನ್ನು ಹಂಚಿಕೊಳ್ಳಬಹುದಾಗಿದೆ. ಸಾಮಾಜಿಕವಾಗಿಯೂ ಸಾಕಷ್ಟು ಬದಲಾವಣೆಯಾಗಿದ್ದು ಇಂದು ಸಾಂಸ್ಕೃತಿಕ ಲೋಕದಲ್ಲಿ ಮಹಿಳೆಯರು ಪುರುಷರನ್ನು ಮೀರಿಸುತ್ತಿದ್ದಾರೆ. ಇದಕ್ಕೆ ಮುಖ್ಯವಾಗಿ ಪಾಲಕರ ಪ್ರೋತ್ಸಾಹ ಅತ್ಯಗತ್ಯವಾಗಿದೆ ಎಂದು ಹೇಳಿದರು.

ಕು. ಅಂತರಾ ಕುಲಕರ್ಣಿಯವರ ತಂದೆ ಅಮಿತ ಹಾಗೂ ತಾಯಿ ಅಕ್ಷತಾ ಕುಲಕರ್ಣಿ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಂಡರು. ಬಾಲ ಕಲಾವಿದೆಯರಾದ ಅಂತರಾ ಕುಲಕರ್ಣಿ, ಶ್ರೇಯಾ ದೇಶಪಾಂಡೆ, ಪೂರ್ವಿ ರಾಜಪುರೋಹಿತ, ಸೃಷ್ಟಿ ಬಾಗೇವಾಡಿ, ಪಾವನಿ ಐರಸಂಗ ತಮ್ಮ ಸುಶ್ರಾವ್ಯ ಕಂಠದಿಂದ ಹಾಡಿ ಎಲ್ಲರ ಮನ ಗೆದ್ದರು.

ವಿನಾಯಕ ಸ್ತುತಿಯಿಂದ ಕಾರ್ಯಕ್ರಮ ಪ್ರಾರಂಭವಾಯಿತು. ಶ್ರೀಮತಿ ಪದ್ಮಾ ಕುಲಕರ್ಣಿ ಸ್ವಾಗತಿಸಿದರು. ಪದಾಧಿಕಾರಿಗಳಾದ ಡಾ. ಅರವಿಂದ ಕುಲಕರ್ಣಿ, ಗಿರೀಶ ಜುಮ್ಮೆ, ದಿಲೀಪ ಮಳಗಿ ಉಪಸ್ಥಿತರಿದ್ದರು.

## ಅನಾರೋಗ್ಯದಿಂದ ಅಪರಿಚಿತ ಸಾವು



ಬೆಳಗಾವಿ: ನಗರದ ಖಾನಪೂರ ರೈಲು ನಿಲ್ದಾಣದ ಹತ್ತಿರ ಜ.29 ರಂದು ಪ್ರಜ್ಞಾಹೀನ ಸ್ಥಿತಿಯಲ್ಲಿ ವ್ಯಕ್ತಿ ಪತ್ತೆಯಾಗಿದ್ದು ಇವರನ್ನು ಜಿಲ್ಲಾ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆಗೆ ಒಳಪಡಿಸಲಾಗಿತ್ತು. ಆದರೆ ಚಿಕಿತ್ಸೆ ಫಲಿಸದೇ ಮೃತಪಟ್ಟಿದ್ದಾನೆ.

ಚಹರೆ: ಮೃತ ವ್ಯಕ್ತಿಗೆ 60–65 ವಯಸ್ಸು ಇರಬಹುದು ಎಂದು ಅಂದಾಜಿಸಲಾಗಿದೆ. ಎತ್ತರ 5.8 ಇರುತ್ತದೆ. ಸಾದ ಕಪ್ಪು ಮೈಬಣ್ಣ, ಮೈಯಿಂದ ತೆಳ್ಳಗೆ, ಉದ್ದ ಮುಖ, ತಲೆಯಲ್ಲಿ ಕಪ್ಪು–ಬಿಳಿ ಕೂದಲು, ಕಪ್ಪು ಮೀಸೆ,ದಾಡಿ ಇರುತ್ತದೆ. ತಿಳಿ ನೀಲಿ ಫುಲ್ ಶರ್ಟ್ ಧರಿಸಿರುತ್ತಾನೆ.

ಅಪರಿಚಿತ ಮೃತನ ವಾರಸುದಾರ ಬಗ್ಗೆ ಮಾಹಿತಿ ಸಿಕ್ಕಲ್ಲಿ ನಗರದ ರೈಲ್ವೆ ಪೊಲೀಸ್ ಠಾಣೆ ಸಂಖ್ಯೆಗೆ ದೂರವಾಣಿ 08312405273/08022871291 ಅಥವಾ ಪಿಎಸ್ಐ 9480802127 ಸಂಖ್ಯೆಗೆ ಸಂಪರ್ಕಿಸಲು ಬೆಳಗಾವಿಯ ರೈಲ್ವೆ ಪೊಲೀಸ್ ಠಾಣೆಯ ಆರಕ್ಷಕ ಉಪನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವ್ಯಕ್ತಿ ನಾಪತ್ತೆ



ಬೆಳಗಾವಿ: ಮೂಡಲಗಿ ತಾಲೂಕಿನ ಬೈರನಟ್ಟಿ ಗ್ರಾಮದ ಮಹಾದೇವ ಸಿದ್ಧಾರೂಢ ಜಾಡರ (40) ಇವರು ಜ.22 ರಂದು ಮನೆಯಿಂದ ಸುಣದೋಳಿ ಗ್ರಾಮಕ್ಕೆ ಹೋಗಿ ಬರುತ್ತೇನೆ ಎಂತ ಹೇಳಿ ಹೋದವರು ಮರಳಿ ಮನೆಗೆ ಬಾರದೇ ಎಲ್ಲೋ ಹೋಗಿ ಕಾಣೆಯಾಗಿದ್ದಾನೆ ಎಂದು ದ್ರಾಕ್ಷಾಯಣಿ ಮಹಾದೇವ ಜಾಡರ ಕುಲಗೋಡ ಠಾಣೆಯಲ್ಲಿ ದೂರು ನಿಡಿದ್ದಾರೆ. ಚಹರೆ: ಮೈಯಿಂದ ಸದೃಢ 5.4 ಘೂಟ ಎತ್ತರ, ಗೋದಿಗೆಂಪು ಮೈಬಣ್ಣ, ಉದ್ದ ಮುಖ, ಕಪ್ಪು ಬಿಳಪ್ಪು ಕೂದಲು ಇರುತ್ತವೆ. ತಿಳಿ ನೀಲಿ ಬಣ್ಣದ ಶರ್ಟ್, ಕಪ್ಪು ಬಣ್ಣದ ಪ್ಯಾಂಟ್ ಮನೆಯಿಂದ ಹೋರಡುವಾಗ ಧರಿಸಿರುತ್ತಾರೆ.

ಇವರ ಮಾಹಿತಿ ಸಿಕ್ಕಿದಲ್ಲಿ ಕುಲಗೋಡ ಪೊಲೀಸ್ ಠಾಣೆ ದೂರವಾಣಿ 08334–222233 ಸಂಖ್ಯೆಗೆ ಸಂರ್ಪಕಿಸಲು ಠಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳಿಂದ ಉದ್ಯೋಗ ಸೃಷ್ಟಿ : ಗೌರವಾನ್ವಿತ ಕುಲಪತಿಗಳು ಪ್ರೊ. ವಿ. ಎಫ್. ನಾಗನ್ನವರ

ಬೆಳಗಾವಿ: ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳು ಆರ್ಥಿಕತೆಯ ಒಂದು ಪ್ರಮುಖ ಕ್ಷೇತ್ರವಾಗಿದೆ ಮತ್ತು ಇದು ಭಾರತದ ಸಾಮಾಜಿಕ–ಆರ್ಥಿಕ ವಿಸ್ತರಣೆಗೆ ಅಪಾರ ಕೊಡುಗೆ ನೀಡುತ್ತದೆ. ದೇಶದಲ್ಲಿ ಲಕ್ಷಾಂತರ ಉದ್ಯೋಗವನ್ನು ಸೃಷ್ಟಿಸಲು ಸಹಕಾರಿಯಾಗಿದೆ ಎಂದು

ಇಲ್ಲಿನ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಕುವೆಂಪು ಸಭಾಂಗಣದಲ್ಲಿ ಆಯೋಜಿಸಲಾದ ವಾಣಿಜ್ಯಶಾಸ್ತ್ರ ವಿಭಾಗದಿಂದ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳು ಮತ್ತು ಆರ್ಥಿಕ ಅಭಿವೃದ್ಧಿ ಕುರಿತಾಗಿ ಒಂದು ದಿನದ ಸಮ್ಮೇಳನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಇಂದಿನ ದಿನಮಾನಗಳಲ್ಲಿ ಎಂಎಸ್ಎಂಇ ಗಳ ಅವಶ್ಯಕತೆ ಬಹಳ ಇದ್ದು ಅವುಗಳ




ಉತ್ತೇಜನಕ್ಕಾಗಿ, ಅಭಿವೃದ್ಧಿಗಾಗಿ ಮತ್ತು ಸ್ಥಾಪನೆಗಾಗಿ ಕ್ರಮಕೈಗೊಳ್ಳುವುದು ಅವಶ್ಯಕವೆಂದರು.

ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರಾದ ಸತ್ಯನಾರಾಯಣ ಭಟ್ ಅವರು ಮಾತನಾಡಿ, ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮವು ತಂತ್ರಜ್ಞಾನದ ಉನ್ನತೀಕರಣ, ಒಟ್ಟಾರೆಯಾಗಿ ಕ್ಷೇತ್ರದ ಆಧುನೀಕರಣ ಮತ್ತು ಮೂಲಸೌಕರ್ಯ ಅಭಿವೃದ್ಧಿಯನ್ನು ಬೆಂಬಲಿಸುತ್ತದೆ. ಉದ್ಯಮಗಳ ಸ್ಥಾಪನೆಗಾಗಿ ಸರ್ಕಾರದ ಕ್ರಮಗಳು ಮತ್ತು ಯೋಜನೆಗಳ ಹಮ್ಮಿಕೊಳ್ಳಲಾಗುತ್ತಿದೆ ಎಂದರು.

ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡದ ಪ್ರಾಧ್ಯಾಪಕರಾದ ಪ್ರೊ. ಆರ್, ಎಲ್. ಹೈದ್ರಾರಾಬಾದ ಅವರು ಮಾತನಾಡಿ, ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮವು ಬ್ಯಾಂಕುಗಳನ್ನು ಬೆಂಬಲಿಸುತ್ತದೆ ಮತ್ತು ನಗದು ರೂಪದಲ್ಲಿ ಸಾಲವನ್ನು ಒದಗಿಸುತ್ತದೆ. ಆಧುನಿಕ ಗುಣಮಟ್ಟದ ಪ್ರಮಾಣೀಕರಣ ಮತ್ತು ಪರೀಕ್ಷಾ ಸೌಲಭ್ಯಗಳನ್ನು ಒದಗಿಸುತ್ತದೆ. ದೇಶೀಯ ಮತ್ತು ರಫ್ತು ಮಾರುಕಟ್ಟೆಗಳಿಗೆ ಪ್ರವೇಶವನ್ನು ಸುಧಾರಿಸಲು ಸಹಾಯ ಮಾಡುತ್ತದೆ. ಇಂದಿನ ಸಂಶೋಧಕರು ವಿವಿಧ ಆಯಾಮಗಳಿಂದ ಸದರಿ ವಿಷಯದ ಮೇಲೆ ಸಂಶೋಧನೆ ಕೈಗೊಳ್ಳಬೇಕೆಂದು ಹೇಳಿದರು.

ಒಂದು ದಿನದ ಸಮ್ಮೇಳನಕ್ಕೆ ರಾಜ್ಯದ ವಿವಿಧ ಭಾಗಗಳಿಂದ 240 ಕ್ಕೂ ಹೆಚ್ಚು ಸಂಶೋಧನಾರ್ಥಿಗಳು ಪಾಲ್ಗೊಂಡು 70 ಕ್ಕೂ ಹೆಚ್ಚು ಸಂಶೋಧನಾ ಪತ್ರಿಕೆಗಳನ್ನು ಪ್ರಸ್ತುತಪಡಿಸಿದರು. ಪ್ರೊ. ಎಸ್. ಬಿ. ಆಕಾಶರವರು ಸಮ್ಮೇಳನದ ಕುರಿತಾಗಿ ಪ್ರಸ್ತಾವಿಕ ಭಾಷಣ ಮಾಡಿದರು. ಈ ಸಂದರ್ಭ ಕುಸಚಿವರಾದ ರಾಜಶ್ರೀ ಜೈನಾಪೂರ, ಸರಸ್ವತಿ ಅಲ್ಲನಗೋಳ ಪ್ರಾರ್ಥಿಸಿದರು. ಪ್ರೊ. ಬಿ.ಎಸ್ ನಾವಿಯವರು ಸ್ವಾಗತಿಸಿದರು, ಡಾ. ಸಚಿಂದ್ರ ಜಿ. ಆರ್ ಅತಿಥಿಗಳ ಪರಿಚಯ ಮಾಡಿದರು. ಡಾ. ಯಾಸ್ಮಿನ್ ಬೇಗಂ ನದಾಫ ವಂದಿಸಿದರು. ವಿಭಾಗದ ಡಾ. ಅಶ್ವಿನಿ ಜಾಮುನಿ, ವಿವಿಧ ವಿಭಾಗಗಳ ಅಧ್ಯಕ್ಷರು, ಪ್ರಾಧ್ಯಾಪಕರು ಮತ್ತು ವಿದ್ಯಾರ್ಥಿಗಳು ಹಾಜರಿದ್ದರು.

## ಜೈಯಾನಂದ ಅವರಿಗೆ ಬೆಳ್ಳಿ ಪದಕ ಪ್ರದಾನ




ಬೆಳಗಾವಿ: ಬೆಂಗಳೂರಿನ ಸಂಸ್ಥೆಯ ಆವರಣದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಕೆಎಸ್ಆರ್ಟಿಸಿ 50ನೇ ವರ್ಷದ ಸಂಸ್ಥಾಪನಾ ದಿನಾಚರಣೆ~ ಹಾಗೂ ಅಪಘಾತರಹಿತ ಚಾಲಕರಿಗೆ ಬೆಳ್ಳಿ ಪದಕ ವಿತರಣಾ ಸಮಾರಂಭ ಜರುಗಿತ್ತು.

ಕೆಎಸ್ಆರ್ಟಿಸಿ 50ನೇ ವರ್ಷದ ಸಂಸ್ಥಾಪನಾ ದಿನಾಚರಣೆ ನಿಮಿತ್ತ ಅಪರಾಧ & ಅಪಘಾತ ರಹಿತ ಉತ್ತಮ ಸೇವೆ ಸಲ್ಲಿಸಿದ್ದಕ್ಕೆ ಹಿರಿಯ ಐಪಿಎಸ್ ಅಧಿಕಾರಿ ಮಾಲಿನಿ ಕೃಷ್ಣಸ್ವಾಮಿ ಅವರು ಹುಕ್ಕೇರಿ ತಾಲೂಕಿನ ಶಿರಗಾಂವಿ ಗ್ರಾಮದ ಬಿಎಮ್ ಟಿಸಿ ಚಾಲಕರಾದ ಜೈಯಾನಂದ ಆರ್ . ಸೋಮ್ಮಣವರ ಅವರಿಗೆ ಬೆಳ್ಳಿ ಪದಕ ನೀಡಿ ಗೌರವಿಸಿದರು.

ಚಾಲನೆ ವೇಳೆ ಸಂಕಷ್ಟ ಎದುರಾದರೆ ಚಾಲಕರು ಜಾಗರೂಕತೆಯಿಂದ ಜವಾಬ್ದಾರಿಯನ್ನು ನಿಭಾಯಿಸಿ ಬಸ್‌ನಲ್ಲಿರುವ ಪ್ರಯಾಣಿಕರನ್ನು ಸುರಕ್ಷಿತ ಸ್ಥಳಕ್ಕೆ ತಲುಪಿಸುತ್ತಾರೆ. ಇಂದು ಅಪಘಾತ, ಅಪರಾಧ ರಹಿತ ಬಸ್ ಚಾಲನೆ ಮಾಡಿ ಬೆಳ್ಳಿ ಪದಕ ಪಡೆದಿರುವುದು ಶ್ಲಾಘನೀಯ. ಇವರ ಸಾಧನೆ ಇತರೆ ನೌಕರರಿಗೆ ಮಾದರಿ ಆಗಲಿ ಹಿರಿಯ ಐಪಿಎಸ್ ಅಧಿಕಾರಿ ಮಾಲಿನಿ ಕೃಷ್ಣಸ್ವಾಮಿ ಅವರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

## ಬಾವಿಗೆ ಹಾರಿ ಅಣ್ಣ–ತಂಗಿ ಸಾವು



ಕಲಬುರಗಿ: ಬಾವಿಗೆ ಬಿದ್ದು ಅಣ್ಣ–ತಂಗಿ ಸಾವನ್ನಪ್ಪಿದ ಹೃದಯವಿದ್ರಾವಕ ಘಟನೆ ಕಲಬುರಗಿ ಜಿಲ್ಲೆಯ ಚಿಂಚೋಳಿ ತಾಲೂಕಿನ ಪಟ್ಟಪಳ್ಳಿ ಗ್ರಾಮದಲ್ಲಿ ನಡೆದಿದೆ.

ಬಾವಿಗೆ ಹಾರಿದ್ದ ತಂಗಿ ರಕ್ಷಿಸಲು ಹೋಗಿದ್ದ ಅಣ್ಣ ಕೂಡ ಮೇಲೆ ಬರಲು ಆಗದೇ ನೀರಿನಲ್ಲಿ ಮುಳುಗಿ ಮೃತಪಟ್ಟಿದ್ದಾರೆ.

ಮೃತರನ್ನು ನಂದಿನಿ (18) , ಅಣ್ಣ ಸಂದೀಪ್ (21) ಎಂದು ಗುರುತಿಸಲಾಗಿದೆ. ಚೆನ್ನಾಗಿ ಓದು ಎಂದು ಅಣ್ಣ ಬುದ್ದಿವಾದ ಹೇಳಿದ್ದಕ್ಕೆ ತಂಗಿ ಮನೆ ಹತ್ತಿರದ ಬಾವಿಗೆ ಹಾರಿದ್ದಳು. ತಂಗಿ ಬಾವಿಗೆ ಬಿದ್ದಳು ಎಂದು ತಂಗಿಯನ್ನು ರಕ್ಷಿಸಲು ಹೋದ ಅಣ್ಣ ಕೂಡ ಮೃತಪಟ್ಟಿದ್ದಾರೆ.

ಮೃತರ ಕುಟುಂಬದವರ ಆಕ್ರಂದನ ಮುಗಿಲು ಮುಟ್ಟಿದ್ದು, ಘಟನೆ ನಡೆದ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ಪ್ರೈಡ್ ಐಕಾನ್ ಆಫ್ ಕರ್ನಾಟಕ 2024 ಬಿರುದಿಗೆ ಕಿತ್ತೂರಿನ ಕುವರಿ ಭಾಜನ



ಬೆಳಗಾವಿ: ಪ್ರೈಡ್ ಐಕಾನ್ ಆಫ್ ಕರ್ನಾಟಕ 2024 ಬಿರುದಿಗೆ ಜಿಲ್ಲೆಯ ಕಿತ್ತೂರಿನ ಕುವರಿ ಕು. ಆರೋಹಿ ಮಲ್ಲಿಕಾರ್ಜುನ ಲಿಂಗೋಟಿ ಆಯ್ಕೆಯಾಗುವ ಮೂಲಕ ಕಿತ್ತೂರು ಹಾಗೂ ಬೆಳಗಾವಿ ಜಿಲ್ಲೆಗೆ ಕೀರ್ತಿ ತಂದಿದ್ದಾಳೆ.

ಸ್ವಾತಂತ್ರ್ಯ ಸಂಗ್ರಾಮದ ಐತಿಹಾಸಿಕ ತಾಣವಾದ ತಾಯಿ ಚನ್ನಮ್ಮನ ನಾಡಿನಲ್ಲಿ ಹುಟ್ಟಿ ಬೆಳೆದ ಕು. ಆರೋಹಿ ಲಂಗೋಟಿ ಇವಳು ಮೈಸೂರಿನಲ್ಲಿ ಶಾಲಿನಿ ಚಂಚಲಾ ಮತ್ತು ಕಬೀರ್ ಸಿಂಗ್ ಇವರ ಆಶ್ರಯದಲ್ಲಿ ಜ.29ರಂದು ಮಾಡೆಲಿಂಗ್ ಸ್ಪರ್ಧೆ ಆಯೋಜಿಸಲಾಗಿತ್ತು. ಈ ಕಾರ್ಯಕ್ರಮದಲ್ಲಿ ಸ್ಪರ್ಧೆಗಿಳಿದ ಕು. ಆರೋಹಿ ಅವಳು ಪ್ರಥಮ ಸ್ಥಾನ ಪಡೆದು ಜಯಶಾಲಿ ಆಗುವುದರ ಜೊತೆಗೆ ಪ್ರೈಡ್ ಐಕಾನ್ ಆಫ್ ಕರ್ನಾಟಕ 2024 ಎಂಬ ಬಿರುದು ಪಡೆದಿರುತ್ತಾಳೆ.

ಕಿತ್ತೂರಿನ ರಾಜಗುರು ಪ್ರಾಥಮಿಕ ಶಾಲೆಯಲ್ಲಿ 4 ನೇ ತರಗತಿಯಲ್ಲಿ ಓದುತ್ತಿರುವ ಈ ಪುಟಾಣಿ ತನ್ನ ವೈಯಕ್ತಿಕ ಕೌಶಲ್ಯಗಳಿಂದ ಕಿತ್ತೂರ ಜನತೆಯ ಮನಸ್ಸನ್ನು ಗೆದ್ದಿದ್ದಾಳೆ.

ಈ ಕುವರಿಯ ಸಾಧನೆಗೆ ಲಂಗೋಟಿ ಕುಟುಂಬಸ್ಥರು ಹಾಗೂ ಕಿತ್ತೂರು ಜನ ಅಭಿನಂದಿಸಿ, ಮುಂದಿನ ಸಾಧನೆಗೆ ಹರಿಸಿ ಹಾರೈಸಿದ್ದಾರೆ.

## ಧರ್ಮಗಳನ್ನು ಗೌರವಿಸಿ, ಪ್ರೀತಿಸುವ ಭಾವನೆ ಬೆಳೆಸಿಕೊಳ್ಳಿ; ಕಾರಂಜಿಮಠದ ಗುರುಸಿದ್ಧ ಶ್ರೀ

ಬೆಳಗಾವಿ: ದೇಶದ ಏಳಿಗೆಗಾಗಿ ನಾವೆಲ್ಲರೂ ಶ್ರಮಿಸೋಣ. ನಮ್ಮ ಧರ್ಮದ ಜತೆ ಸರ್ವ ಧರ್ಮಗಳನ್ನು ಗೌರವಿಸಿ, ಪ್ರೀತಿಸುವ ಭಾವನೆ ಬೆಳೆಸಿಕೊಂಡು ಒಗ್ಗಟ್ಟಾಗಿ ನಿಲ್ಲೋಣ ಎಂದು ಕಾರಂಜಿ ಮಠದ ಗುರುಸಿದ್ಧ ಮಹಾಸ್ವಾಮಿಗಳು ಹೇಳಿದರು.

ಇಲ್ಲಿನ ಕನ್ನಡ ಸಾಹಿತ್ಯ ಭವನದಲ್ಲಿ ಮಂಗಳವಾರ ಆಯೋಜಿಸಿದ್ದ ಸೌಹಾರ್ದ ಕರ್ನಾಟಕ ವೇದಿಕೆಯ ಮಹಾತ್ಮ ಗಾಂಧೀಜಿ ಅವರ ಹುತಾತ್ಮ ದಿನದ ಅಂಗವಾಗಿ ಸೌಹಾರ್ದತಾ ಮಾನವ ಸರಪಳಿ ಸಭೆ ಉದ್ದೇಶಿಸಿ ಅವರು ಮಾತನಾಡಿದರು.

ದೇಶದಲ್ಲಿ ಸುಖಃ ಶಾಂತಿ ನೆಮ್ಮದಿ ನೆಲೆಸಬೇಕಾಗಿದೆ. ಹೀಗಾಗಿ, ಸರ್ವ ಧರ್ಮಗಳು ಮಾನವಿತೇಯ ಮೌಲ್ಯಗಳನ್ನು ಅಳವಸಿಕೊಂಡು ಸೌಹಾರ್ದತೆಯ ದಾರಿಯಲ್ಲಿ ಸಾಗಿ. ಸೌಹಾರ್ದತೆಯಿಂದ ಬಾಳಬೇಕೆಂದು ನೂರಾರು ವರ್ಷಗಳಿಂದ ಹೇಳಲಾಗುತ್ತಿದೆ. ಅವುಗಳನ್ನು ಭಾಷಣಕ್ಕೆ ಮಾತ್ರ ಸೀಮಿತವಾಗಿವೆ ಹೊರತು ಕಾರ್ಯರೂಪಕ್ಕೆ ಬಂದಿಲ್ಲ. ಅದಕ್ಕಾಗಿ ಸಮಾಜ ಸುಧಾರಕರು, ಚಿಂತಕರು ಒಂದಾಗಿ ಸೌಹಾರ್ದತೆಯ ನೆಲೆಗಟ್ಟಿನಲ್ಲಿ ಸಾಗೋಣ ಎಂದರು.

ಮುಸ್ಲಿಂ ಸಮುದಾಯದ ಮೌಲಾನಾ ಮುಸ್ತಾಕ್ ಅಹಮ್ಮದ್ ಅಶ್ರಪಿ ಮಾತನಾಡಿ, ನೋಟಿನಲ್ಲಿ ರಾಮನನ್ನು ಭಾವಚಿತ್ರ ಅವಳವಡಿಸಿ, ದೇಶದ ಧರ್ಮಗಳನ್ನು ಬೇರೆ–ಬೇರೆ ಮಾಡಲಾಗುತ್ತಿದೆ. ಅದು, ಸರಿಯಲ್ಲ ದೇಶಕ್ಕಾಗಿ ಪ್ರಾಣತ್ಯಾಗ ಮಾಡಿದ ಗಾಂಧಿಜೀಯವರ ಭಾವಚಿತ್ರ ಇದ್ದರೆ ಸೌಹಾರ್ದತೆಯ ನಾಡಾಗಲಿದೆ. ಧರ್ಮಗಳ ಒಲೈಕೆಗೆ ರಾಮನ ಹೆಸರು ಅಸ್ತ್ರ ಮಾಡಿಕೊಳ್ಳುವುದು ಅಪಹಾಸ್ಯ ಎಂದರು.

ಕ್ರೈಸ್ತ ಪಾದ್ರಿ ಡಾ. ಪಾಧರ್ ಮೆನಿನೊ ಗೋನ್ಸಾಲ್ವೀಸ್ ಮಾತನಾಡಿ, ಪ್ರಕೃತಿ ಸೌಂಧರ್ಯವನ್ನು ಪ್ರೀತಿಸುವ ಉತ್ತಮ ವ್ಯಕ್ತಿ ನಾವಾಗಬೇಕು ಹೊರತು, ಪ್ರಕೃತಿ ನೀಡಿರುವ ಧರ್ಮಗಳನ್ನು ಒಂದೇ ಧರ್ಮಕ್ಕೆ ಸೀಮಿತಗೊಳಿಸಿ ನಾಡಿನಲ್ಲಿ ಸೌಹಾರ್ದತೆ ಹಾಳು ಮಾಡಬಾರದು ಎಂದು ವಿಷಾದ ವ್ಯಕ್ತಪಡಿಸಿದರು.

ದೇಶಕ್ಕಾಗಿ ಪ್ರಾಣ ತ್ಯಾಗ ಮಾಡಿದ ಮಹಾತ್ಮಾ




ಗಾಂಧಿಜೀಯವರು ಸಮಾಜದ ಸುಧಾರಣೆ ಹೋರಾಟ ಮಾಡಿದ್ದಾರೆ. ಸಮಾಜದಲ್ಲಿ ದೇವರನ್ನು ಕಾಣುವ ಮೂಲಕ ಎಲ್ಲವನ್ನೂ ಪ್ರೀತಿಯಿಂದ ನೋಡಬೇಕು. ಬಸವಣ್ಣನವರ ವಚನಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಸೌಹಾರ್ದತೆಯ ಪರಂಪರೆಯನ್ನು ಉಳಿಸೋಣ. ಜಾತಿ, ಧರ್ಮಗಳು ಬಿಟ್ಟು ಸಮಾಜದಲ್ಲಿ ಉತ್ತಮ ನಾಗರಿಕರಾಗಿ ಬಾಳೋಣ ಎಂದರು.

ಕಾರ್ಮಿಕ ಜಿಲ್ಲಾ ಕಾರ್ಯದರ್ಶಿ, ಜಿ ಎಮ್ ಜೈನೆಕರ್ ಮಾತನಾಡಿ, ಧರ್ಮ ಒಡೆಯುವ ಮನಸ್ಥಿತಿ ನಿರ್ಮಾಣವಾಗುತ್ತಿದೆ. ದೇವರ ಹೆಸರಿನಲ್ಲಿ ಧರ್ಮದ ಅಸ್ತ್ರಗಳನ್ನು ಬಿಸುವ ಯತ್ನವನ್ನು ತಡೆಯಬಹುದು. ನಾವೆಲ್ಲರೂ ಒಗ್ಗಟ್ಟಾಗಿದರೆ ಇದನ್ನು ತಡೆಯಬಹುದು. ಸೌಹಾರ್ದ ವೇದಿಕೆಯಿಂದ ರಾಜ್ಯಾದ್ಯಂತ ಜಾಗೃತ ಕಾರ್ಯಕ್ರಮ ಆಯೋಜಿಸಿ ಸೌಹಾರ್ದತೆಯನ್ನು ಉಳಿಸೋಣ ಎಂದರು.

ಡಾ.ವಾಯ್ ಬಿ. ಹಿಮ್ಮಡಿ ಮಾತನಾಡಿ, ಮಹಾತ್ಮ ಗಾಂಧಿಯವರ ರಾಮನನ್ನು ಈಗ ದುರುಪಯೋಗ ಮಾಡಿಕೊಳ್ಳುವ ಯತ್ನ ನಡೆಯುತ್ತಿದೆ.

ಹೀಗಾಗಿ ರಾಮನಿಂದ ಸೀತೆ, ಲಕ್ಷ್ಮಣ, ಹನುಮಂತನನ್ನು ಅಗಲಿಸಿ ಕೇವಲ ರಾಮನನ್ನು ಮಾತ್ರ ಪ್ರತಿಷ್ಠಾನ ಮಾಡಲಾಗಿದೆ. ನಮಗೆ ಕುವೆಂಪು, ಕನಕದಾಸರ ರಾಮ ಬೇಕು.

ನಮ್ಮ ದೇಶಕ್ಕೆ ಬೇಕಾಗಿರುವುದು ವೇದಾಂತ ಮೆದುಳು , ಇಸ್ಲಾಮಿಕ್ ರ ಮನಸ್ಸುಗಳು ಹೊತರು, ಭಾವನೆಗಳಿಗೆ ದಕ್ಕೆ ತರುವವರಲ್ಲ ಎಂದು ಹೇಳಿದರು.

ಮಾನವ ಬಂದುತ್ವ ವೇದಿಕೆ ಭರಮಣ್ಣ ಸಂಚಾಲಕ ತೋಳಿ ಮಾತನಾಡಿ, ಎಲ್ಲಾ ಸಮುದಾಯದ ಜನರು ಸೌಹಾರ್ದ ಸಮಾಜದಲ್ಲಿ ಬದುಕಿ ಬಾಳಬೇಕಿದೆ. ಆದರೆ, ಗಾಂಧಿಜೀಯವರ ಬಲಿದಾನ ನಂತರ ದೇಶದಲ್ಲಿ ನಾಥೋರೊಮ ಗೋಡಸೆಯನ್ನು ಆರಾಧನೆ ಮಾಡುವಂತಹ ಪರಂಪರೆ ಹುಟ್ಟಿಕೊಂಡಿರುವುದು ನೋವಿನ ಸಂಗತಿ. ಮಹಾತ್ಮಾ ಗಾಂಧಿಜಿಯವರ ವಿಚಾರ ಹಾಗೂ ಚಿಂತನೆಗಳನ್ನು ವಿಶ್ವವೇ ಗೌರವಿಸುವ ಸಂದರ್ಭದಲ್ಲಿ ನಮ್ಮ ದೇಶದಲ್ಲಿ ಅವರನ್ನು ವಿರೋಧಿಸುವ ಕೆಲಸಗಳು ನಡೆಯುತ್ತಿರುವುದು ಸಮಾಜಕ್ಕೆ ಇದು ಆತಂಕಕಾರಿ ವಿಷಯವಾಗಿದೆ ಎಂದರು.

ದೇಶವನ್ನು ಧರ್ಮಕ್ಕೆ ಸೀಮಿತಗೊಳಿಸಿ, ಒಡೆಯುವ ಕೆಲಸ ವ್ಯವಸ್ಥಿತವಾಗಿ ನಡೆಯುತ್ತಿದೆ. ಸೌಹಾರ್ದ ಪರಂಪರೆಯ ವೇದಿಕೆಯೊಂದಿಗೆ ಸಹಸ್ರಾರು ಯುವಕರು ಭಾಗಿಯಾಗಿ. ನಾಡಿನ ಪರಂಪರೆ ಉಳಿಸೋಣ ಎಂದರು ಹೇಳಿದರು.

ಬಳಿಕ ರಾಣಿ ಚಮ್ಮನ್ನ ವೃತ್ತದಲ್ಲಿ ಮಹಾತ್ಮ ಗಾಂಧೀಜಿಯವರ ಹುತಾತ್ಮ ದಿನದ ಅಂಗವಾಗಿ ಸೌಹಾರ್ದ ಕರ್ನಾಟಕ ಸಂಘಟನೆಯಿಂದ ಸೌಹಾರ್ದ ಮಾನವ ಸರಪಳಿ ಅಭಿಯಾನದಲ್ಲಿ ನೂರಾರು ಜನರು ಭಾಗಿಯಾಗಿ ಮಾನವ ಸರಪಳಿಗೆ ಕೈ ಜೋಡಿಸಿದರು.

ಈ ಸಂದರ್ಭದಲ್ಲಿ ಹಿರಿಯ ಸಾಹಿತಿ ಸರಜೂ ಕಾಟ್ಕರ್, ವಾಯ್ ಬಿ.ಹಿಮ್ಮಡಿ, ನಾಗೇಶ ಸಾತೇರಿ ಹಾಗೂ ಇತತರು ಇದ್ದರು.

VOL. 04 ISSUE. 304 RNI. KARKAN/2020/79084 REG.NO G-2/PMG/KA/NK/BM/139/2024-26

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089